ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 159 ಸಂಚಿಕೆ- 159 | PAGE-8 ಪುಟ-8 | ಭಾನುವಾರ 03.08.2025 | RS.2/- ಬೆಲೆ 2/-

ಸ್ಕ್ಯಾನ್ ಮಾಡುವ ಮೂಲಕ ಅಜೀವ ಸದಸ್ಯರಾಗಲು ಕೋರಿಕೆ

G Pay

ಜಾಹೀರಾತು ನೀಡಿದವರು ಫೋನ್ ಪೇ ಮಾಡಬಹುದು.

BHIM UPI

G Pay Paytm PhonePe

## ಬಿಜೆಪಿ ಸಂವಿಧಾನ ಮುತ್ತಿಗೆಯಲ್ಲಿಟ್ಟಿದೆ



ಮಲ್ಲಮನುಡಿವಾರ್ತೆನವದೆಹಲಿ:ಅ.2: ಆಡಳಿತಾರೂಢ ಬಿಜೆಪಿ ಪಕ್ಷವು ತಾನು ಬಹಳ ದಿನಗಳಿಂದ ವಿರೋಧಿಸುತ್ತಿದ್ದ ಚೌಕಟ್ಟನ್ನೇ ಕೆಡವಲು ತನ್ನ ಅಧಿಕಾರವನ್ನು ಬಳಸಿ ಸಂವಿಧಾನವನ್ನು "ಮುತ್ತಿಗೆಯಲ್ಲಿಟ್ಟಿದೆ" ಎಂದು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ

(2ನೇ ಪುಟ ನೋಡಿ)

## ದೇಶದ ಹಿತಾಸಕ್ತಿಗೆ ಬದ್ಧ:ಮೋದಿ

ವಾರಣಾಸಿ, ಆ.2: ಭಾರತದ ಆರ್ಥಿಕತೆ ಸತ್ತ ಆರ್ಥಿಕತೆ ಎಂದು ಟೀಕೆ ಮಾಡಿದ್ದ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ತಿರುಗೇಟು ನೀಡಿರುವ ಪ್ರಧಾನಿ ನರೇಂದ್ರ ಮೋದಿ, ಭಾರತ ವಿಶ್ವದ ಮೂರನೇ ಆರ್ಥಿಕ ದೇಶದತ್ತ ದಾಪುಗಾಲು ಇಟ್ಟಿದೆ ಎಂದು ಹೇಳಿದ್ದಾರೆ.

ಸ್ವದೇಶಿ ಉತ್ಪನ್ನಗಳು ಜಾಗತಿಕವಾಗಿ ಸದ್ದು ಮಾಡುತ್ತಿವೆ. ಜಾಗತಿಕ ಆರ್ಥಿಕ ಪ್ರಕ್ಷುಬ್ಧತೆಯ ನಡುವೆಯೂ ಭಾರತೀಯ ಆರ್ಥಿಕತೆ ಯಾವುದೇ ಏರಿಳಿತವಿಲ್ಲದೆ ಸಮಾನವಾಗಿ ಸಾಗುತ್ತಿದೆ. ಹೀಗಾಗಿಯೇ ವಿಶ್ವದ ನಾಲ್ಕನೆಯ ಅತಿದೊಡ್ಡ ಆರ್ಥಿಕ ದೇಶವಾಗಿದ್ದು ಮೂರನೇ



ಆರ್ಥಿಕತೆಯ ದೇಶವಾಗುವತ್ತ ಹೆಜ್ಜೆ ಹಾಕಿದೆ ಎಂದಿದ್ದಾರೆ.

ಉತ್ತರ ಪ್ರದೇಶದ ವಾರಣಾಸಿಯಲ್ಲಿ ಪಿಎಂ ಕಿಸಾನ್ ನಿಧಿಯ ಕಂತು ಬಿಡುಗಡೆ ಬಳಿಕ ಸಾರ್ವಜನಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದ ಹಿತಾಸಕ್ತಿಗಳನ್ನು ಪೂರೈಸಲು ಸರ್ಕಾರ ಅಗತ್ಯವಿರುವ ಎಲ್ಲವನ್ನೂ ಮಾಡುತ್ತಿದೆ ಎಂದು ಗುಡುಗಿದ್ದಾರೆ

ಜಗತ್ತಿನಲ್ಲಿ ಅಸ್ಥಿರತೆಯ ವಾತಾವರಣವಿದೆ. ಎಲ್ಲಾ ದೇಶಗಳು ತಮ್ಮ ವೈಯಕ್ತಿಕ ಹಿತಾಸಕ್ತಿಗಳ ಮೇಲೆ ಕೇಂದ್ರೀಕರಿಸುತ್ತಿವೆ. ಭಾರತ ವಿಶ್ವದ ಮೂರನೇ ಅತಿ-ದೊಡ್ಡ ಆರ್ಥಿಕತೆಯಾಗುವ ಕಡೆಗೆ ಹೆಜ್ಜೆ ಹಾಕುತ್ತಿದೆ. ಅದಕ್ಕಾಗಿಯೇ ಭಾರತ ತನ್ನ ಆರ್ಥಿಕ ಹಿತಾಸಕ್ತಿಗಳಿಗೆ ಸಂಬಂಧಿಸಿದಂತೆ ಜಾಗರೂಕವಾಗಿದೆ ಎಂದರು.

ದೇಶದ ಹಿತದೃಷ್ಟಿಯಿಂದ ಸಾಧ್ಯವಿರುವ ಎಲ್ಲವನ್ನೂ ಸರ್ಕಾರ ಮಾಡುತ್ತಿದೆ. ದೇಶಕ್ಕೆ ಒಳಿತನ್ನು ಬಯಸುವವರು ಮತ್ತು ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ

(2ನೇ ಪುಟ ನೋಡಿ)

# ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜೀವನಪರ್ಯಂತ ಜೈಲು

2024ರ ಲೋಕಸಭಾ ಚುನಾವಣೆಗೆ ಹಾಸನ ಕ್ಷೇತ್ರದಿಂದ ಪ್ರಜ್ವಲ್ ರೇವಣ್ಣ ಚುನಾವಣೆಗೆ ಸ್ಪರ್ಧಿಸಿದ್ದ. ಇದೇ ಹೊತ್ತಿನಲ್ಲಿ ಸಂಸದ ಪ್ರಜ್ವಲ್‌ದು ಎನ್ನಲಾದ ಲೈಂಗಿಕ ದೌರ್ಜನ್ಯ ಕೃತ್ಯಗಳ ಹಲವು ವೀಡಿಯೋಗಳು ಮತ್ತು ಫೋಟೊಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದವು. ಸಂಸದನ ಮನೆಯಲ್ಲೇ ಕೆಲಸ ಮಾಡಿಕೊಂಡಿದ್ದ 48 ವರ್ಷದ ಮಹಿಳೆಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ವೀಡಿಯೋ ಕೂಡ ಹರಿದಾಡಿತ್ತು. ವೀಡಿಯೋ ವೈರಲ್ ಆಗುತ್ತಿದ್ದಂತೆ ಸಂತ್ರಸ್ತೆ ಕಣ್ಮರೆಯಾಗಿದ್ದರು. ಈ ಸಂಬಂಧ ಸಂತ್ರಸ್ತೆ ಪುತ್ರ 2024ರ ಮೇ 2 ರಂದು ಪೊಲೀಸ್ ಠಾಣೆಗೆ ದೂರು ನೀಡಿದ್ದರು. ನನ್ನ ತಾಯಿಯನ್ನು ಜೆಡಿಎಸ್ ಶಾಸಕ ಹೆಚ್.ಡಿ.ರೇವಣ್ಣ ಮತ್ತು ಅವರ ಸಂಬಂಧಿ ಕಿಡ್ನ್ಯಾಪ್ ಮಾಡಿದ್ದಾರೆಂದು ದೂರಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ ಎಸ್‌ಐಟಿ, ತೋಟ-ದ ಮನೆಯೊಂದರಲ್ಲಿ ಸಂತ್ರಸ್ತೆ ಇರುವುದನ್ನು ಪತ್ತೆಹಚ್ಚಿತ್ತು. ವಿಚಾರಣೆ ವೇಳೆ, ತನ್ನ ಮೇಲೆ ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗಿದ್ದಾರೆಂದು ಆರೋಪಿಸಿದ್ದರು.

ಬೆಂಗಳೂರು:ಅ.2: ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಶನಿವಾರ ಜೀವನಪರ್ಯಂತ ಜೈಲು ಶಿಕ್ಷೆ ಹಾಗೂ 11 ಲಕ್ಷ 60 ಸಾವಿರ ರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ.

ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಮನೆಕೆಲಸದ ಮಹಿಳೆ ಮೇಲೆ ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗಿದ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂತೋಷ ಗಜಾನನ ಭಟ್ ಅವರು ಶುಕ್ರವಾರ ಮಾಜಿ ಸಂಸದ ದೋಷಿ ಎಂದು ತೀರ್ಪು ನೀಡಿದ್ದರು. ಆದರೆ ಶಿಕ್ಷೆಯ ಪ್ರಮಾಣವನ್ನು ಇಂದಿಗೆ ಕಾಯ್ದಿರಿಸಿದ್ದರು.

ಇಂದು ಶಿಕ್ಷೆಯ ಪ್ರಮಾಣ ಪ್ರಕಟಿಸಿದ ನ್ಯಾಯಾಧೀಶ ಸಂತೋಷ್ ಗಜಾನನ್ ಭಟ್ ಅವರು, ಅಪರಾಧಿಗೆ ಜೀವಾವಧಿ ಶಿಕ್ಷೆ ಹಾಗೂ ಒಟ್ಟು 11 ಲಕ್ಷ 60 ಸಾವಿರ ರೂ. ದಂಡ ವಿಧಿಸಿದೆ. ಇದರಲ್ಲಿ 11 ಲಕ್ಷ 25 ಸಾವಿರ ರೂಪಾಯಿಯನ್ನು ಸಂತ್ರಸ್ತೆಗೆ ಪರಿಹಾರ ನೀಡುವಂತೆ ಕೋರ್ಟ್



ಸೂಚಿಸಿದೆ. ಇದೊರಂದಿಗೆ ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿರುವ ನಾಲ್ಕು ಲೈಂಗಿಕ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣಗಳಲ್ಲಿ ಒಂದು ಪ್ರಕರಣದಲ್ಲಿ ಶಿಕ್ಷೆ ಪ್ರಕಟವಾಗಿದ್ದು, ಇನ್ನೂ ಮೂರು ಪ್ರಕರಣಗಳ ವಿಚಾರಣೆ ಬಾಕಿ ಇದೆ.

ಈ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಬಂಧನವಾಗಿರಲಿಲ್ಲ, ಕೇವಲ ಬಾಡಿ ವಾರಂಟ್ ಮೇಲೆ ಪ್ರಜ್ವಲ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿತ್ತು. ಹೀಗಾಗಿ ಪ್ರಜ್ವಲ್ ರೇವಣ್ಣಗೆ ಇಂದಿನಿಂದಲೇ ಶಿಕ್ಷೆ ಆರಂಭವಾಗಲಿದೆ. ಇಲ್ಲಿಯವರೆಗಿನ ಜೈಲುವಾಸ ಮೈನಸ್ ಆಗುವುದಿಲ್ಲ.

ಇದಕ್ಕೂ ಮುನ್ನ ಪ್ರಾಸಿಕ್ಯೂಷನ್ ಪರ ವಕೀಲರಾದ ಬಿಎನ್ ಜಗದೀಶ್, ಎಸ್‌ಪಿಪಿ ಅಶೋಕ್ ನಾಯಕ್ ವಾದ ಮಂಡಿಸಿ ಪ್ರಜ್ವಲ್‌ಗೆ ಗರಿಷ್ಠ ಶಿಕ್ಷೆ ನೀಡಬೇಕೆಂದು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ಅದಾದ ನಂತರ ವಾದ ಮಂಡನೆ ಮಾಡಿದ್ದ ಪ್ರಜ್ವಲ್ ಪರ ವಕೀಲೆ ನಳಿನಿ ಮಾಯೇಗೌಡ, ಶಿಕ್ಷೆ ನೀಡುವ ವೇಳೆ ಅಪರಾಧಿಯ ರಾಜಕೀಯ ಭವಿಷ್ಯ, ವಯಸ್ಸು ಇತ್ಯಾದಿಗಳನ್ನೆಲ್ಲ ಪರಿಗಣಿಸಬೇಕು ಎಂದು ಮನವಿ ಮಾಡಿದ್ದರು. ಮಹಿಳೆ ಮೇಲೆ ಅತ್ಯಾಚಾರ ಪ್ರಕರಣದ ತನಿಖೆ ನಡೆಸಿದ ವಿಶೇಷ ತನಿಖಾ ತಂಡ(ಎಸ್‌ಐಟಿ) ನಂತರ ಪ್ರಕರಣ ಸಿಐಡಿಗೆ ವರ್ಗಾವಣೆ ಆಗಿತ್ತು. ಸಿಐಡಿ ಇನ್ಸ್‌ಪೆಕ್ಟರ್ ಶೋಭಾ ಅವರು ತನಿಖೆಯ ನೇತೃತ್ವ ವಹಿಸಿದ್ದರು ಮತ್ತು 26 ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸಿಕೊಂಡು ಸುಮಾರು 2 ಸಾವಿರ ಪುಟಗಳ ಚಾರ್ಜ್ ಶೀಟನ್ನು ಜನಪ್ರತಿನಿಧಿಗಳ ವಿಶೇಷ ಕೋರ್ಟಿಗೆ ಸಲ್ಲಿಸಿದ್ದರು.

ಪ್ರಜ್ವಲ್ ರೇವಣ್ಣ ವಿರುದ್ಧ ಇನ್ನೂ ಮೂರು ಅತ್ಯಾಚಾರ ಪ್ರಕರಣಗಳು ಕೋರ್ಟ್ ನಲ್ಲಿ ವಿಚಾರಣೆಯ ಹಂತದಲ್ಲಿವೆ. ಹಲವು ಮಹಿಳೆಯರ ಮೇಲೆ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಕಳೆದ ವರ್ಷ ಮೇ ತಿಂಗಳಲ್ಲಿ ಪ್ರಜ್ವಲ್ ರೇವಣ್ಣ ಜರ್ಮನಿಯಿಂದ ಹಿಂದಿರುಗಿದ ನಂತರ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಎಸ್‌ಐಟಿ ಬಂಧಿಸಿತ್ತು. ಅಂದಿನಿಂದ ಪ್ರಜ್ವಲ್ ರೇವಣ್ಣ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲೇ

(2ನೇ ಪುಟ ನೋಡಿ)

## ಶಾಸಕ ದದ್ದಲ್‌ರಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 02 : ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 2ರಂದು ರಾಯಚೂರ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡರು.

ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ಮನ್ಸಲಾಪೂರ, ಚಿಕ್ಕಸೂಗೂರು ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು. ಮನ್ಸಲಾಪೂರ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮೈಕ್ರೋ ಯೋಜನೆಯಡಿ ನಿರ್ಮಿಸಲು ಉದ್ದೇಶಿಸಿರುವ ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಅದೇ ರೀತಿ ಮುಜರಾಯಿ ಇಲಾಖೆಯ ಅನುದಾನದಡಿ ಶ್ರೀ ಬೀರಪ್ಪ ಗುಡಿ, ಶ್ರೀ ಸಿದ್ದಲಿಂಗೇಶ್ವರ ಗುಡಿ ಮತ್ತು ಶ್ರೀ ಹುಲಿಗಮ್ಮ ಗುಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಜೊತೆಗೆ ಮನ್ಸಲಾಪೂರು ಗ್ರಾಮ ಪಂಚಾಯತಿಯ ನೂತನ ಕಟ್ಟಡವನ್ನು ಲೋಕಾರ್ಪಣೆ ಮಾಡಿದರು.

ಚಿಕ್ಕಸೂಗೂರು ಗ್ರಾಮಕ್ಕೆ ತೆರಳಿದ ಶಾಸಕರು, ಶ್ರೀ ಆಂಜನೇಯ ಸ್ವಾಮಿ ಗುಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಜೊತೆಗೆ ವಿಶೇಷ ಅನುದಾನದಲ್ಲಿ ಹಜರತ್ ಬಾಬಾ ಫಕ್ರುದ್ದೀನ್ ದರ್ಗಾ ಕಾಮಗಾರಿಗು ಸಹ ಭೂಮಿ ಪೂಜೆ ನೆರವೇರಿಸಿದರು. ಸ್ವಂತ ಸಂಪನ್ಮೂಲ ಅನುದಾನದಡಿ ವಿವಿಧ ಕಾಮಗಾರಿಗಳಿಗೆ ಶಾಸಕರು ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂಧರ್ಭದಲ್ಲಿ ದೇವಸೂಗುರ ಬ್ಲಾಕ್ ಅಧ್ಯಕ್ಷರು, ಮನ್ಸಲಾಪೂರ, ಚಿಕ್ಕಸೂಗೂರು ಸೇರಿದಂತೆ ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಕಾರ್ಯಕರ್ತರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ರಮ್ಯಾಗೆ ಅಶ್ಲೀಲ ಮೆಸೇಜ್ ಮಾಡಿದ್ದ ಮೂವರ ಬಂಧನ



ಮಲ್ಲಮ್ಮನುಡಿವಾರ್ತೆ ಬೆಂಗಳೂರು,ಆ.2- ಸಾಮಾಜಿಕಜಾಲತಾಣದಲ್ಲಿ ನಟಿ ರಮ್ಯಾಗೆ ಅವಹೇಳನಕಾರಿ ಸಂದೇಶ ಕಳುಹಿಸಿದ್ದ ಮೂವರು ಕಿಡಿಗೇಡಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೋಲಾರ, ಚಿತ್ರದುರ್ಗ ಮೂಲದ ಮೂವರನ್ನು ಬಂಧಿಸಲಾಗಿದೆ. ಈ ಮೂವರು ಅಶ್ಲೀಲ ಕಮೆಂಟ್ ಹಾಕಿ ಸವಾಲ್ ಹಾಕಿದ್ದರು.

ನಟಿ ರಮ್ಯಾ ದೂರು ನೀಡುವ ವೇಳೆ 43 ಅಕೌಂಟ್‌ಗಳ ಹೆಸರು ಉಲ್ಲೇಖಿಸಿ ದೂರು ದಾಖಲಿಸಿದ್ದರು. ಐಪಿ ಅಡ್ರೆಸ್ ಆಧರಿಸಿ ಪ್ರಕರಣದಲ್ಲಿ ಮೂವರನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಫ್‌ಐಆರ್ ದಾಖಲಾದ ತಕ್ಷಣ ಬಹುತೇತ ಅಕೌಂಟ್‌ಗಳು ಡಿಲೀಟ್ ಆಗಿದ್ದವು. ಅಷ್ಟರಲ್ಲಿ ಪೊಲೀಸರು ಸಂಬಂಧಪಟ್ಟ ಸಂಸ್ಥೆಗಳಿಗೆ ಪತ್ರ ಬರೆದು ಐಪಿ ಅಡ್ರೆಸ್‌ಗಳು, ಅಕೌಂಟ್ ಡಿಟೇಲ್ ಕೊಡುವಂತೆ ಮನವಿ ಮಾಡಿದ್ದರು. ಇದರಿಂದಾಗಿ ಪ್ರಕರಣಕ್ಕೆ ಸಂಬಂಧಿಸಿದಂತೆ 40 ಮಂದಿಯ ಚಹರೆ ಗುರುತು ಮಾಡಲಾಗಿದೆ ಎಂದು ತಿಳಿದು ಬಂದಿದೆ. ಇನ್ನು ಹಲವರ ಪತ್ತೆಗೆ ಕಾರ್ಯಾಚರಣೆ ನಡೆಯುತ್ತಿದ್ದು, ಇಂದು ರಾತ್ರಿ ವೇಳೆಗೆ ಇನ್ನು ಹಲವರನ್ನು ಬಂಧಿಸುವ ಸಾಧ್ಯತೆ ಇದೆ. ಈ ನಡುವೆ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಮೂವರ ಬಂಧನ ಖಚಿತ ಪಡಿಸಿದ್ದು. ನಟಿ ರಮ್ಯಾ ಅವರಿಗೆ ಸೋಷಿಯಲ್ ಮೀಡಿಯಾದಲ್ಲಿ ಅಶ್ಲೀಲ ಕಾಮೆಂಟ್ ಮಾಡಿದ ಇಬ್ಬರು ಕಿಡಿಗೇಡಿಗಳನ್ನ ಬಂಧಿಸಲಾಗಿದೆ. 11 ಮಂದಿಯನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಅವರು ಸೋಷಿಯಲ್ ಮೀಡಿಯಾ ಕಾಮೆಂಟ್‌ಬಗ್ಗೆ ಪರಿಶೀಲನೆ ಮಾಡಿದ್ದೇವೆ. ಸಿಸಿಬಿಯವರು ಹಲವರನ್ನ ಗುರುತಿಸಿದ್ದಾರೆ. ಕೆಲವರ ಸ್ಪಷ್ಟ ಮಾಹಿತಿ ಸಿಕ್ಕಿದೆ, ಇಬ್ಬರನ್ನು ಅರೆಸ್ಟ್ ಮಾಡಿದ್ದೇವೆ. ಇನ್ನೂ ಹನ್ನೊಂದು ಜನರ ಮಾಹಿತಿ ಸಿಕ್ಕಿದ್ದು ತನಿಖೆ ನಡೆಯುತ್ತಿದೆ ಎಂದರು.

ಅಲ್ಲದೇ ಬಂಧಿತರು ಯಾರ ಅಭಿಮಾನಿ ಅನ್ನೊದರ ಬಗ್ಗೆ

(2ನೇ ಪುಟ ನೋಡಿ)

## ಕೃತಕ ಬುದ್ಧಿಮತ್ತೆ ಬುದ್ಧಿವಂತಿಕೆಯಿಂದ ಬಳಸಿದರೆ ಯಶಸ್ಸು



ಮಲ್ಲಮ್ಮನುಡಿವಾರ್ತೆಕಲಬುರಗಿ:ಅ.2: ಕೃತಕಬುದ್ಧಿಮತ್ತೆ ಉದ್ಯೋಗಗಳನ್ನು ನಾಶಪಡಿಸುತ್ತದೆಂದು ಭಯಪಡಬೇಡಿ. ಅದನ್ನು ಬುದ್ಧಿವಂತಿಕೆಯಿಂದ ಬಳಸಿದರೆ ಯಶಸ್ಸು ಸಾಧ್ಯವೆಂದು ರಂಗಸ್ವಾಮಿ ಮೂಕನಹಳ್ಳಿ ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ ಶನಿವಾರದಂದು ವ್ಯವಹಾರ ಅಧ್ಯಯನ ನಿಕಾಯ ಆಯೋಜಿಸಿದ "ಎಐ ಯುಗದಲ್ಲಿ ಸಣ್ಣ ಉದ್ಯಮ ಕಟ್ಟುವುದು ಆಯ್ಕೆಯಲ್ಲ, ಅನಿವಾರ್ಯ!" ಎಂಬ ವಿಷಯದ ಕುರಿತು ಏರ್ಪಡಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಎಐ ನಿಂದ ಭಯ ಪಡಬೇಡಿ. ಭಯವು ಅಜ್ಞಾನದಿಂದ ಬರುತ್ತದೆ. ಎಐ ಯೊಂದಿಗೆ ಕೆಲಸ ಮಾಡಲು ಕಲಿಯಿರಿ. ಆದಷ್ಟು ಬೇಗನೆ ಆರಂಭಿಸಿ, ವೈಫಲ್ಯವಾದರೆ ಎದೆಗುಂದದಿರಿ, ಆರಂಭಿಕ ವೈಫಲ್ಯಗಳು ಜೀವಮಾನದ ಪಾಠಗಳನ್ನು ಕಲಿಸುತ್ತವೆ. ಎಐ ಬಳಸಲು ನೀವು ತಂತ್ರಜ್ಞರಾಗುವ ಅಗತ್ಯವಿಲ್ಲ. ಎಐ ಚಿಲ್ಲರೆ ವ್ಯಾಪಾರದಿಂದ ಹಿಡಿದು ಪ್ರತಿಯೊಂದು ಉದ್ಯಮದಲ್ಲಿ ಉದ್ಯೋಗಗಳನ್ನು ಬದಲಾಯಿಸುತ್ತಿದೆ. ಎಐ ಒಂದು ಸಾಧನವಾಗಿದ್ದು ಅದು ಇಂಟರ್ನೆಟ್‌ನಂತೆ, ನೀವು ಅದನ್ನು ಹೇಗೆ ಬಳಸುತ್ತೀರಿ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ ಎಂದರು.

ಸಮಯವು ನಿಮ್ಮ ದೊಡ್ಡ ಆಸ್ತಿಯಾಗಿದೆ, ಅದನ್ನು ಬುದ್ಧಿವಂತಿಕೆಯಿಂದ ಬಳಸಿ. ಎಲ್ಲವೂ ಆನ್‌ಲೈನ್ ಆದ ಕಾರಣ, ವ್ಯವಹಾರವನ್ನು ಪ್ರಾರಂಭಿಸಲು ನಿಮಗೆ ಇನ್ನು ಮುಂದೆ ಅಂಗಡಿ ಅಥವಾ ಕಚೇರಿ ಅಗತ್ಯವಿರುವುದಿಲ್ಲ ಎಂದು ರಂಗಸ್ವಾಮಿ ತಿಳಿಸಿದರು. ಪ್ರಕೃತಿ ತಟಸ್ಥವಾಗಿದೆ, ನಿಮ್ಮನ್ನು ಇತರರೊಂದಿಗೆ ಹೋಲಿಸಿಕೊಳ್ಳಬೇಡಿ ಪ್ರತಿಯೊಬ್ಬರಿಗೂ ಅವರದೇ ಆದ ಸಾಮರ್ಥ್ಯ ಮತ್ತು ಅವರದೇ ಆದ ಸಮಯವಿದೆ. ಇಂದಿನ ದಿನಗಳಲ್ಲಿ ಕೇವಲ ರೂ. 10,000 ಹೂಡಿಕೆ ಮಾಡಿದರೆ ವ್ಯವಹಾರ ಆರಂಭಿಸಬಹುದು. ಜ್ಞಾನ, ಸಮಯ ಮತ್ತು ಹಣ ಬಹಳ ಅತ್ಯಮೂಲ್ಯವಾಗಿದೆ. ಇಂದು ಪ್ರತಿಯೊಂದು ವ್ಯವಹಾರವು ಆನ್‌ಲೈನ್ ಆಗುತ್ತಿದೆ. ಮೊದಲು ನೀವು ಯಾವ ಕ್ಷೇತ್ರದಲ್ಲಿ ಆಸಕ್ತಿ ಹೊಂದಿದ್ದೀರಿ ಎಂಬುದನ್ನು ನಿರ್ಧರಿಸಬೇಕು. ಉದ್ಯೋಗ ಸಿಗುತ್ತಿಲ್ಲವೆಂದು ದೂಷಿಸಬೇಡಿ. ನಿಮಗೇ ಗೊತ್ತಿಲ್ಲದ ಶಕ್ತಿ ನಿಮ್ಮಲ್ಲಿದೆ. ಸಮಯ ವ್ಯರ್ಥ ಮಾಡಬೇಡಿ ಯಾವಾಗಲೂ ಉತ್ತಮ ನಾಳೆಗಾಗಿ ಯೋಜನೆ ಮಾಡಿ ಎಂದು ಮೂಕನಹಳ್ಳಿ ಅಭಿಪ್ರಾಯ ಪಟ್ಟರು.

2030 ರ ವೇಳೆಗೆ ಜಾಗತಿಕವಾಗಿ 100 ಕೋಟಿಗೂ ಹೆಚ್ಚು ಜನರು ಉದ್ಯೋಗ ಮಾರುಕಟ್ಟೆಯನ್ನು ಪ್ರವೇಶಿಸುತ್ತಾರೆಂದು ಅಂಕಿಅಂಶಗಳಿಂದ

(2ನೇ ಪುಟ ನೋಡಿ)

## ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮಕ್ಕೆ ತಾಕೀತು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.02: ಜಿಲ್ಲೆಯಲ್ಲಿ ರೈತರಿಗೆ ತಲುಪಿಸಬೇಕಾದ ಅಗತ್ಯ ರಸಗೊಬ್ಬರಗಳ ಕೊರತೆ ನೀಗಿಸಲು ಮುಂಜಾಗ್ರತೆ ಕ್ರಮವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು, ಜಿಪಂ ಆಡಳಿತಾಧಿಕಾರಿಯೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕಚಂದ್ರ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ

(2ನೇ ಪುಟ ನೋಡಿ)

## ಫಲಿತಾಂಶ ಸುಧಾರಣೆಗೆ ಛಲ, ಹುಮ್ಮಸ್ಸು ಮುಖ್ಯ:ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2-ಶಿಕ್ಷಕರಲ್ಲಿ ಛಲ ಹಾಗೂ ಹುಮ್ಮಸ್ಸು ಇದ್ದಾಗ ಮಾತ್ರ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಸುಧಾರಣೆ ತರಲು ಸಾಧ್ಯ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶನಿವಾರ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಸಂಬಂಧ ಜರುಗಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ನೋಡಲ್ ಅಧಿಕಾರಿಗಳು ಹಾಗೂ ಮುಖ್ಯೋಪಾಧ್ಯಾಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಫಲಿತಾಂಶ ಸುಧಾರಣೆಗೆ ಇಲಾಖೆ ಹೊರಡಿಸಿದ 22 ಅಂಶಗಳನ್ನು ಅನುಸರಿಸುವ ಮೂಲಕ ಪರೀಕ್ಷಾ ಸಿದ್ದತೆ ಹೇಗೆ ಮಾಡಿಕೊಳ್ಳಬೇಕು. ಮಕ್ಕಳನ್ನು ಪರೀಕ್ಷೆಗೆ ಹೇಗೆ ತಯಾರಿ ಮಾಡಬೇಕು ಎಂಬುದನ್ನು ಶಿಕ್ಷಕರು ಅರಿತು ಕೆಲಸ ಮಾಡಬೇಕಿದೆ ಎಂದರು.

ಪ್ರತಿ ವಿದ್ಯಾರ್ಥಿಯ ಕಲಿಕಾ

(2ನೇ ಪುಟ ನೋಡಿ)

## ತಾಯಿ-ಮಕ್ಕಳ ಆರೋಗ್ಯದ ಕಾಳಜಿ ವಹಿಸಿ:ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಅ.2: ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರು ತಾಯಿ ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಇಲ್ಲಿಯ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಎರಡು ದಿನಗಳ ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಉತ್ತರ ವಲಯ ಸಮ್ಮೇಳನ ಹಾಗೂ ಕಾರ್ಯಾಗಾರವನ್ನು ಶನಿವಾರ ಉದ್ಘಾಟಿಸಿ ಮಾತನಾಡಿದ ಅವರು.

ಸರ್ಕಾರಿ ಆಸ್ಪತ್ರೆಗಳ ವಿಭಾಗಗಳಲ್ಲಿ ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ವಿಭಾಗದ ಪಾತ್ರ ಬಹಳ ಮಹತ್ವದ್ದಾಗಿದೆ. ತಾಯಿ-ಮಗುವಿನ ಸುರಕ್ಷತೆ ಹಾಗೂ ರಕ್ಷಣೆಯ ಗುರುತರ ಜವಾಬ್ದಾರಿ ಈ ವಿಭಾಗದ ಮೇಲಿದೆ ಎಂದು ತಿಳಿಸಿದರು.

ಆರೋಗ್ಯವಿದ್ದರೆ ಎಲ್ಲವೂ ಇದ್ದ ಹಾಗೆ. ಸದ್ಯ ಸದೃಢ ಆರೋಗ್ಯ ಕಾಯ್ದುಕೊಳ್ಳಲು ಜೀವನ ಶೈಲಿ ಹಾಗೂ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕಾದ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಅಗತ್ಯ ಕ್ರಮಕ್ಕೆ ತಾಕೀತು

ಸೇರಿದಂತೆ) ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಜುಲೈ ಮಾಹೆಯವರೆಗೆ ಒಟ್ಟು 27025 ಮೆ.ಟನ್‌ಗಳ ರಸಗೊಬ್ಬರ ಬೇಡಿಕೆ ಇದ್ದು, ಇಲ್ಲಿಯವರೆಗೆ ಪ್ರಾರಂಭಿಕ ಶಿಲ್ಕು ಸೇರಿ 34,163 ಮೆ.ಟನ್ ದಾಸ್ತಾನು ಮಾಡಲು, ಈ ಪೈಕಿ 25,887 ಮೆ.ಟನ್ ವಿತರಣೆಯಾಗಿ 8,286 ಮೆ.ಟನ್‌ಗಳಷ್ಟು ದಾಸ್ತಾನಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ತಿಳಿಸಿದರು.

ರಸಗೊಬ್ಬರದ ಬೇಡಿಕೆ, ಸರಬರಾಜು, ವಿತರಣೆ ಮತ್ತು ದಾಸ್ತಾನು ಕೃಷಿ ಇಲಾಖೆಯು ರೂಪಿಸಿದ ಯೋಜನೆಯನುಸಾರ ಇದ್ದು, ರೈತರಿಂದ ಯೂರಿಯಾ ರಸಗೊಬ್ಬರಕ್ಕೆ ಹೆಚ್ಚಿನ ಬೇಡಿಕೆ ಪದೇ ಪದೇ ಬರುತ್ತಿರುವುದನ್ನು ಕೃಷಿ ಇಲಾಖೆಯು ಗಂಭೀರವಾಗಿ ಪರಿಗಣಿಸಿ ಮುಂಗಾರು ಪೂರ್ವ ಮತ್ತು ಪ್ರಸ್ತಕ ಮುಂಗಾರಿನಲ್ಲಿ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಜಿಲ್ಲೆಯ ಸಗಟು ಮತ್ತು ಚಿಲ್ಲರೆ ರಸಗೊಬ್ಬರ ಪರಿವೀಕ್ಷಕರು ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ ಎಂದು ವಿವರಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನಗಳನ್ವಯ ಯೂರಿಯಾ ಗೊಬ್ಬರದ ಅವೈಜ್ಞಾನಿಕ ಬಳಕೆಯ ದುಷ್ಪರಿಣಾಮಗಳು ಮತ್ತು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ನ್ಯಾನೋ ರಸಗೊಬ್ಬರಗಳನ್ನು ಪರ್ಯಾಯವಾಗಿ ಬಳಸುವ ಕುರಿತು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರು, ರೈತರಿಗೆ ರಸಗೊಬ್ಬರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಅಥವಾ ಕೃತಕ ಅಭಾವ ಸೃಷ್ಠಿಸುವ ಪ್ರಸಂಗಗಳು ಕಂಡುಬಂದಲ್ಲಿ ಡಿಸಿ, ಎಸ್ಪಿ ಅವರ ಗಮನಕ್ಕೆ ತರಬೇಕು ಹೇಳಿದರು.

ಕೃಷಿ, ತೋಟಗಾರಿಕೆ ಯೋಜನೆಗಳನ್ನು ಸಕಾಲಕ್ಕೆ ರೈತರಿಗೆ ತಲುಪಿಸಬೇಕು. ಜಿಲ್ಲೆಯಲ್ಲಿ ಹೈನುಗಾರಿಕೆಗೆ ಹೆಚ್ಚು ಪ್ರೋತ್ಸಾಹ ನೀಡಬೇಕಿದೆ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯ ಸಾರ್ವಜನಿಕರಿಗೆ ಆರೋಗ್ಯದ ಹಿತದೃಷ್ಟಿಯಿಂದ ಆಸ್ಪತ್ರೆಗಳಲ್ಲಿ ಉತ್ತಮ ಚಿಕಿತ್ಸೆ ಲಭ್ಯವಾಗಬೇಕು. ಆಸ್ಪತ್ರೆ ಸೇರಿದಂತೆ ಸರ್ಕಾರಿ ಸಂಸ್ಥೆಗಳಲ್ಲಿ ಮೂಲಭೂತ ಸೌಲಭ್ಯಗಳು ಇರುವಂತೆ ಅಧಿಕಾರಿ ವರ್ಗ ನಿಗಾ ವಹಿಸಬೇಕು ಎಂದು ಆರೋಗ್ಯಾಧಿಕಾರಿಗಳಿಗೆ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಬಿಎಂಸಿಆರ್‌ಸಿಯಲ್ಲಿ ಆಂಬುಲೆನ್ಸ್ ವ್ಯವಸ್ಥೆ ಸಿಗುತ್ತಿಲ್ಲ, ಸಾರ್ವಜನಿಕರಿಗೆ ಸಕಾಲದಲ್ಲಿ ವೈದ್ಯರು ಲಭಿಸುತ್ತಿಲ್ಲ, ರಕ್ತ, ಔಷಧಿ ಹಾಗೂ ಸಾಮಾನ್ಯ ವೀಲ್ ಚೇರ್ ವ್ಯವಸ್ಥೆಗೂ ಸಹ ಹಣ ಪಡೆಯುತ್ತಾರೆ ಎಂದು ಪ್ರತಿದಿನ ನನ್ನ ಕಚೇರಿಗೆ ಸಾರ್ವಜನಿಕರಿಂದ ದೂರು ಬರುತ್ತಿವೆ. ಅಲ್ಲಿನ ಗೃಹರಕ್ಷಕದಳ ಸಿಬ್ಬಂದಿಯಿಂದ ಹೊರಗುತ್ತಿಗೆ ನೌಕರರು, ವೈದ್ಯರು ಸಹ ಸಾರ್ವಜನಿಕರಿಗೆ ಸರಿಯಾಗಿ ಸ್ಪಂದಿಸುವುದಿಲ್ಲ ಎಂದು ಬಿಎಂಸಿಆರ್‌ಸಿ ನಿರ್ದೇಶಕರ ಮೇಲೆ ಅಸಮಾಧಾನ ಹೊರಹಾಕಿದರು.

ಕೇವಲ ಕಟ್ಟಡ ನಿರ್ಮಾಣಕ್ಕೆ ಟೆಂಡರ್ ಪ್ರಕ್ರಿಯೆ, ಚಿಕಿತ್ಸೆ ಉಪಕರಣ ಕುರಿತಂತೆ ಪ್ರಸ್ತಾಪಿಸುವುದಲ್ಲ, ಮುಖ್ಯವಾಗಿ ಯಾವುದೇ ಸಭೆಗಳಿಗೂ ಹಾಜರಾಗುವುದಿಲ್ಲ ಎಂದ ಅವರು, ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ನೀಡಬೇಕು ಎಂದು ಬಿಎಂಸಿಆರ್‌ಸಿ ನಿರ್ದೇಶಕರಿಗೆ ಖಡಕ್ ಸೂಚನೆ ನೀಡಿದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ತ್ರಿಲೋಕಚಂದ್ರ ಅವರು ಮಾತನಾಡಿ, ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಿಸಿದ ಯೋಜನೆಗಳ ಸಮರ್ಪಕ ಅನುಷ್ಠಾನದೆಡೆಗೆ ಗಮನ ಹರಿಸಬೇಕು. ನಿಗದಿಪಡಿಸಿದ ಗುರಿ ಸಾಧನೆಯಡೆಗೆ ಕ್ರಿಯಾಶೀಲವಾಗಿ ಕೆಲಸ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿನ ಅಂಗನವಾಡಿ ಕೇಂದ್ರಗಳ ಮತ್ತು ಶಾಲೆಗಳ ಮೇಲೆ ಯಾವುದೇ ರೀತಿಯ ವಿದ್ಯುತ್ ಲೈನ್ ಗಳು ಹಾದುಹೋಗುವಂತಿಲ್ಲ, ಈ ಕುರಿತು ನ್ಯಾಯಾಲಯದ ಆದೇಶವಿದ್ದು, ಕೂಡಲೇ ಡಿಡಿಪಿಐ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ, ಜೆಸ್ಕಾಂ ಅಧಿಕಾರಿಗಳು ಸರ್ವೆ ನಡೆಸಿ ತೆರವುಗೊಳಿಸುವ ಕಾರ್ಯ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಅಪೌಷ್ಟಿಕತೆ ಹೋಗಲಾಡಿಸಲು ರಾಷ್ಟ್ರೀಯ ಬಾಲ ಸ್ವಾಸ್ಥ್ ?? ಕಾರ್ಯಕ್ರಮದಡಿ ಅಂಗವಾಡಿ ಕೇಂದ್ರ ಮತ್ತು ಶಾಲೆಗಳಲ್ಲಿ 18 ವರ್ಷದವರೆಗಿನ ಮಕ್ಕಳಿಗೆ ಆಜನ್ಮ ನ್ಯೂನ್ಯತೆ, ಮಕ್ಕಳ ಕಾಯಿಲೆಗಳು ಮತ್ತು ಕುಂಠಿತ ಬೆಳವಣಿಗೆಯ ತೊಂದರೆ ಬಗ್ಗೆ ನಿಯಮಿತವಾಗಿ ತಪಾಸಣೆ ನಡೆಸಿ ಚಿಕಿತ್ಸೆ ನೀಡಲು ಮುತುವರ್ಜಿ ವಹಿಸಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯ ವಸತಿ ನಿಲಯಗಳಲ್ಲಿ ಆಶ್ರಯ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಸೌಕರ್ಯಗಳು ತಲುಪಬೇಕು.ಜೊತೆಗೆ ಶೈಕ್ಷಣಿಕ ಗುಣಮಟ್ಟ ಸುಧಾರಣೆಯಡೆಗೆ ಸಂಬಂಧಿತ ಇಲಾಖೆಯ ಮುಖ್ಯಸ್ಥರು ಅಗತ್ಯವಿರುವ ಕ್ರಮಗಳನ್ನು ಕೈಗೊಂಡು ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಮುಂದಾಗಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಾಪಂ ಇಒಗಳು ಉಪಸ್ಥಿತರಿದ್ದರು.

# ಬುದ್ಧಿವಂತಿಕೆಯಿಂದ ಬಳಸಿದರೆ ಯಶಸ್ಸು

ತಿಳಿದು ಬಂದಿದೆ. ಯಾಂತ್ರೀಕರಣವು ಸಾಂಪ್ರದಾಯಿಕ ಉದ್ಯೋಗಗಳ ಸಂಖ್ಯೆಯನ್ನು ಕಡಿಮೆ ಮಾಡುತ್ತಿದೆ. ಉದ್ಯೋಗಗಳ ಬಿಕ್ಕಟ್ಟನ್ನು ಪರಿಹರಿಸಲು ಉದ್ಯಮಶೀಲತೆ ಸಹಾಯ ಮಾಡುತ್ತದೆ ಎಂದು ಅವರು ಹೇಳಿದರು. ಇಂದು ಒಖಒಇಗಳು ಭಾರತದ ಉಆಕಗೆ 30 ಪ್ರತಿಶತಕ್ಕಿಂತ ಹೆಚ್ಚು ಕೊಡುಗೆ ನೀಡುತ್ತಿವೆ. ಆರ್ಥಿಕತೆಯನ್ನು ಬಲಪಡಿಸುವ ಒಖಒಇ ಗಳ ಸಾಧನಗಳನ್ನು ಬೆಂಬಲಿಸಬೇಕಾಗಿದೆ. ಭಾರತದಲ್ಲಿ ಜನಸಂಖ್ಯೆಯ 65% ರಷ್ಟು 35 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿದ್ದಾರೆ. ಯುವ ಭಾರತೀಯರು ತಮ್ಮದೇ ಆದ ಅವಕಾಶಗಳನ್ನು ಸೃಷ್ಟಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳಿದರು.

ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎಸ್. ಜಿ. ಡೊಳ್ಳೆಗೌಡರ್, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹಿತಾಸಕ್ತಿಗೆ ಬದ್ಧ:ಮೋದಿ

ನೋಡಲು ಬಯಸುವವರು, ಯಾವುದೇ ರಾಜಕೀಯ ಪಕ್ಷವಾಗಿರಲಿ, ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು 'ಸ್ವದೇಶಿ' ಉತ್ಪನ್ನಗಳಿಗೆ ಒತ್ತು ನೀಡಬೇಕು ಎಂದು ಮನವಿ ಮಾಡಿದರು.ಭಾರತೀಯರು ತಯಾರಿಸಿದ ವಸ್ತುಗಳನ್ನು ಮಾತ್ರ ಖರೀದಿಸುತ್ತೇವೆ. ಸ್ಥಳೀಯರಿಗೆ ಧ್ವನಿಯಾಗಬೇಕು" ಎಂದು ಹೇಳಿದ ಪ್ರಧಾನಿ ಅದು ಮುಂದಿನ ಭವಿಷ್ಯಕ್ಕೆ ದಾರಿಯಾಗಲಿದೆ ಎಂದರು.

ರಕ್ತ ಕುದಿಯುತ್ತಿತ್ತು : ಪಿಎಂ

ಹೆಣ್ಣು ಮಕ್ಕಳ ಹಣೆಯ ಸಿಂಧೂರ ಅಳಿಸಿದ ಭಯೋತ್ಪಾದಕರ ಕೃತ್ಯ ರಕ್ತ ಕುದಿಯುವಂತೆ ಮಾಡಿತ್ತು.ಆಗಲೇ ತಕ್ಕ ಶಾಸ್ತಿ ಮಾಡಲು ಪ್ರತಿಜ್ಞೆ ತೊಟ್ಟಿದ್ದೆ. ಮಹಾದೇವನ

ಆಶೀರ್ವಾದದಿಂದ ಆ ಪ್ರತಿಜ್ಞೆ ಈಡೇರಿದೆ. ಹೀಗಾಗಿ ಆಪರೇಷನ್ ಸಿಂಧೂರ್ ಯಶಸ್ಸನ್ನು ಮಹಾದೇವನ ಪಾದಗಳಿಗೆ ಅರ್ಪಿಸುತ್ತೇನೆ ಎಂದು ಹೇಳಿದರು.ಅನ್ಯಾಯ ಮತ್ತು ಭಯೋತ್ಪಾದನೆ ಎದುರಿಗೆ ಇದ್ದಾಗ,

ಮಹಾದೇವ 'ರುದ್ರ ರೂಪ' ತಾಳುತ್ತಾನೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಜಗತ್ತು ಭಾರತದ ಈ ಮುಖ ನೋಡಿತು. ಭಾರತದ ತಂಟೆಗೆ ಬಂದವರು ಪಾತಾಳ ಲೋಕ'ದಲ್ಲಿ ಅಡಗಿ ಕುಳಿತಿದ್ದರೂ ಸುಮ್ಮನೆ ಬಿಡುವುದಿಲ್ಲ ಎಂದು ಗುಡುಗಿದರು.ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿ ರಾಷ್ಟ್ರೀಯ ಭದ್ರತೆಯ ಬಗ್ಗೆ ಚಿಂತಿಸುವಂತೆ ಮಾಡಿತ್ತು.26 ಅಮಾಯಕರ ಸಾವು ತೀವ್ರ ಆಘಾತ ಉಂಟು ಮಾಡಿತ್ತು ಎಂದು ಭಾವುಕರಾದರು.ಕಾಶಿಗೆ ಆಪರೇಷನ್ ಸಿಂಧೂರ್ ಯಶಸ್ಸಿನ ಬಳಿಕ ಮೊದಲ ಭೇಟಿ ಇದು". ಆಪರೇಷನ್ ಸಿಂಧೂರ್‌ನ ಯಶಸ್ಸು 140 ಕೋಟಿ ಭಾರತೀಯರ ಒಗ್ಗಟ್ಟಿನಿಂದ ಸಾಧ್ಯವಾಯಿತು. ಈ ಯಶಸ್ಸನ್ನು ಮಹಾದೇವನ ಪಾದಗಳಿಗೆ ಅರ್ಪಿಸುತ್ತೇನೆ ಎಂದು ತಿಳಿಸಿದರು.

"ಪವಿತ್ರ 'ಸಾವನ್' ಮಾಸದಲ್ಲಿ ಬಾಬಾ ವಿಶ್ವನಾಥನಿಗೆ ಪ್ರಾರ್ಥನೆ ಸಲ್ಲಿಸಲು ಬಯಸಿದ್ದೆ.

ಆದರೆ ಅಲ್ಲಿಗೆ ಹೋದರೆ, ಇತರ ಭಕ್ತರು ಅನಾನುಕೂಲತೆ ಎದುರಿಸಬೇಕಾಗುತ್ತದೆ ಮತ್ತು ಪ್ರಾರ್ಥನೆ ಸಲ್ಲಿಸಲು ಸಾಧ್ಯವಾಗುವುದಿಲ್ಲ, ಹೀಗಾಗಿ ಇಲ್ಲಿಂದಲೇ ಭೋಲೆನಾಥ್ ಮತ್ತು ಗಂಗಾ ಮಾತೆಯ ಮುಂದೆ ನಮಸ್ಕರಿಸುತ್ತೇನೆ ಎಂದಿದ್ದಾರೆ

ಕಾಂಗ್ರೆಸ್ ಅಭಿವೃದ್ಧಿ ವಿರೋಧಿ: ದುರದೃಷ್ಟವಶಾತ್, ಕೆಲವು ಜನರಿಗೆ ಆಪರೇಷನ್ ಸಿಂಧೂರ್‌ನ ಯಶಸ್ಸು ಇಷ್ಟವಾಗುವುದಿಲ್ಲ. ಭಾರತ ಪಾಕಿಸ್ತಾನದ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿದೆ ಎಂಬ

ಅಂಶವನ್ನು ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳಿಗೆ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಪ್ರತಿ ಪಕ್ಷಗಳ ವಿರುದ್ಧ ನೇರ ವಾಗ್ದಾಳಿ ನಡೆಸಿದರು.

ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್‌ನಂತಹ ಅಭಿವೃದ್ಧಿ ವಿರೋಧಿಗಳು ಸರ್ಕಾರದ ವಿರುದ್ಧ ವದಂತಿಗಳನ್ನು ಹರಡುತ್ತಿವೆ ಮತ್ತು ಸಾಧ್ಯವಿರುವ ಎಲ್ಲಾ ರೀತಿಯಲ್ಲಿ ಜನರನ್ನು ದಾರಿ ತಪ್ಪಿಸುತ್ತಿವೆ.ವಿರೋಧ ಪಕ್ಷಗಳು ಸುಳ್ಳು ಭರವಸೆಗಳೊಂದಿಗೆ ಬದುಕುತ್ತಿರುವುದು ದೇಶಕ್ಕೆ ತುಂಬಾ ದುರದೃಷ್ಟಕರ ಎಂದರು.

ರೈತ ಕಲ್ಯಾಣಕ್ಕೆ ಕೇಂದ್ರ ಬದ್ಧ

ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಬದ್ಧವಾಗಿದೆ. . ಹಿಂದಿನ ಸರ್ಕಾರಗಳು ತಾವು ಭರವಸೆ ನೀಡಿದ್ದ ಒಂದೇ ಒಂದು ಯೋಜನೆ ಸಹ ಈಡೇರಿಸಲಿಲ್ಲ. ಬಿಜೆಪಿ ಸರ್ಕಾರ ಬಂದ ನಂತರ ರೈತರಿಗೆ ನೀಡಿದ ಎಲ್ಲಾ ಭರವಸೆ ಈಡೇರಿಸಿದೆ. ಪಿಎಂ ಕಿಸಾನ್ ಸಮ್ಮಾನ್ ನಿಧಿ ಸರ್ಕಾರದ ಬಲವಾದ ಇಚ್ಛಾಶಕ್ತಿ ಮತ್ತು ಉದ್ದೇಶಗಳಿಗೆ ಉದಾಹರಣೆಯಾಗಿದೆ ಎಂದು ಪ್ರಧಾನಿ ನರೇಂದ್ರ

# ಮೆಸೇಜ್ ಮಾಡಿದ್ದ ಮೂವರ ಬಂಧನ

ತನಿಖೆ ನಡೆಯುತ್ತಿದೆ. ಯಾರೇ ಆಗಿರಲಿ ಅಶ್ಲೀಲ ಸಂದೇಶ ಹಾಕಿದರೆ ಕಠಿಣ ಕ್ರಮ ಕೈಗೊಳ್ಳುತೇವೆ. ಈ ಬಗ್ಗೆ ಸೈಬರ್ ಪೊಲೀಸರಿಗೆ ವಿಶೇಷ ತರಬೇತಿ ನೀಡಿದ್ದೇವೆ. ಅವಹೇಳನಕಾರಿಯಾಗಿ ಯಾರೇ ಸಂದೇಶ ಹಾಕಿದರೂ ಅವರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಎಚ್ಚರಿಸಿದ್ದಾರೆ.

# ಕಾಳಜಿ ವಹಿಸಿ:ಸಚಿವ ಖಂಡ್ರೆ

ಅಗತ್ಯ ಇದೆ ಎಂದು ಹೇಳಿದರು.ಸಮ್ಮೇಳನವು ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ಕ್ಷೇತ್ರದಲ್ಲಿನ ಹೊಸ ಬದಲಾವಣೆಗಳ ಮೇಲೆ ಬೆಳಕು ಚೆಲ್ಲಲಿದೆ. ವಿಭಾಗದ ಸೇವೆಯ ಗುಣಮಟ್ಟ ಸುಧಾರಣೆಗೂ ವೇದಿಕೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಅಧ್ಯಕ್ಷ ಡಾ. ದುರ್ಗಾದಾಸ್ ಅಸ್ರಣ್ಣ ಮಾತನಾಡಿ, ಸಂಘ 34 ವರ್ಷಗಳಿಂದ ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ಹಿತ ರಕ್ಷಣೆಗೆ ಶ್ರಮಿಸುತ್ತಿದೆ. ಬೀದರ್‌ನಲ್ಲಿ ಸಂಘಟಿಸಿರುವ ಸಮ್ಮೇಳನ ಮೊದಲ ಸಮ್ಮೇಳನವಾಗಿದ್ದು, ಇದರ ಶ್ರೇಯ ಬೀದರ್ ಘಟಕಕ್ಕೆ ಸಲ್ಲುತ್ತದೆ ಎಂದು ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಸಂಸದ ಸಾಗರ್ ಖಂಡ್ರೆ, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ. ಸುಜಾತಾ ರಾಠೋಡ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಬ್ರಿಮ್ಸ್ ಮುಖ್ಯ ಆಡಳಿತಾಧಿಕಾರಿ ಸುರೇಖಾ, ನಿರ್ದೇಶಕ ಡಾ. ಶಿವಕುಮಾರ ಶೆಟಕಾರ್, ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಮಹಾ ಪೋಷಕ ಡಾ. ಎಂ.ಜಿ. ಹಿರೇಮಠ, ಪೋಷಕ ಡಾ. ನಾಗರಾಜ ಎಚ್, ಡಾ. ಶೋಭಾ ಗುಡಿ, ಡಾ. ರಾಜಶ್ರೀ ಪಲಾಡಿ, ಡಾ. ಬಸವರಾಜ ಪಾಟೀಲ ಅಷ್ಟೂರ, ಡಾ. ಚಂದ್ರಕಾಂತ ಗುದಗೆ, ಡಾ. ಶೋಭಾ ಬೆಂಬಳಗಿ, ಡಾ. ಎಂ.ಬಿ. ಬೆಲ್ಲದ್, ಡಾ. ವಿದ್ಯಾ ಥೊಬ್ಬಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನೀರಗುಡಿ, ಬ್ರಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ. ಶಿವಯೋಗಿ ಬಾಲಿ, ಪ್ರಾಚಾರ್ಯ ಡಾ. ರಾಜೇಶ ಪಾರಾ, ಜಿಲ್ಲಾ ಆಸ್ತ್ರಚಿಕಿತ್ಸಕ ಡಾ. ಎಂ.ಡಿ. ಅಹಮ್ಮದುದ್ದೀನ್, ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಬೀದರ್ ಘಟಕದ ಕಾರ್ಯದರ್ಶಿ ಡಾ. ಸವಿತಾ ಎಸ್. ಬಡಿಗೇರ, ಸಂಘಟನಾ ಕಾರ್ಯದರ್ಶಿ ಡಾ. ಹೇಮಲತಾ ಪಾಟೀಲ ಮತ್ತಿತರರು ಇದ್ದರು.

ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಬೀದರ್ ಘಟಕದ ಅಧ್ಯಕ್ಷೆ ಡಾ. ಉಮಾ ಬಿ. ದೇಶಮುಖ ಸ್ವಾಗತಿಸಿದರು.

ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘ ಹಾಗೂ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವತಿಯಿಂದ ಸಮ್ಮೇಳನ ಹಾಗೂ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧೆಡೆಯ 500 ಪ್ರತಿನಿಧಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದಾರೆ.

# ಹುಮ್ಮಸ್ಸು ಮುಖ್ಯ:ಕುರೇರ

ಸಾಮರ್ಥ್ಯವನ್ನು ಸುಧಾರಿಸುವ ನಿಟ್ಟಿನಲ್ಲಿ ಶಿಕ್ಷಕರು ಪ್ರತಿಯೊಂದು ವಿಷಯದಲ್ಲಿ ಸುಧಾರಣೆ ಪ್ರಯತ್ನಿಸಬೇಕು. ಇಲಾಖೆ ನೀಡಿದ ಅಂಶಗಳನ್ನು ಕಡ್ಡಾಯವಾಗಿ ಅನುಸರಿಸುವ ಮೂಲಕ ಫಲಿತಾಂಶದಲ್ಲಿ ಸುಧಾರಣೆ ಆಗದಿದ್ದಲ್ಲಿ ನಿರ್ದಾಕ್ಷಿಣ್ಯ ಕ್ರಮವಹಿಸಲಾಗುತ್ತದೆ. ಸುಧಾರಣೆಯಾದರೆ ಅಂತಹ ಶಾಲೆಗಳನ್ನು ಅಭಿನಂದಿಸುವ ಕೆಲಸವನ್ನು ಸಹ ಮಾಡಲಾಗುತ್ತದೆ ಎಂದು ಕುರೇರ ತಿಳಿಸಿದರು.

ಶಾಲೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಶಿಕ್ಷಕರ ಗೈರು ಹಾಜರಿ ಹೆಚ್ಚು ಕಂಡುಬರುತ್ತಿದೆ. ಈ ಬಗ್ಗೆ ಮುಖ್ಯೋಪಾಧ್ಯಾಯರು ಸೂಕ್ತ ನಿರ್ವಹಣೆ ಮಾಡಬೇಕು. ಅನಾವಶ್ಯಕ ರಜೆಗೆ ಅವಕಾಶ ನೀಡಬಾರದು. ಮುಖ್ಯೋಪಾಧ್ಯಾಯರು ಸಹ ಸರಿಯಾಗಿ ಶಾಲೆಗ ಬರಬೇಕು. 8ನೇ ತರಗತಿಯಿಂದಲೇ ಸುಧಾರಣೆಗೆ ಕ್ರಮವಹಿಸಿದಾಗ ಮಾತ್ರ ವಿದ್ಯಾರ್ಥಿಗಳಲ್ಲಿ ಬದಲಾವಣೆ ಕಾಣಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ಕಳೆದ 2024–25ನೇ ಸಾಲಿನ ಫಲಿತಾಂಶಗಳ ಮಾಹಿತಿಯನ್ನು ಸಭೆಗೆ ತಿಳಿಸಿದರಲ್ಲದೇ, ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಕೈಗೊಳ್ಳುತ್ತಿರುವ ಕಾರ್ಯಯೋಜನೆಗಳ ಕ್ರಿಯಾ ಯೋಜನೆಯ 22 ಅಂಶಗಳನ್ನು ತಿಳಿಸಿದರು.

ಸರ್ವಶಿಕ್ಷಣ ಅಭಿಯಾನದ ಉಪ ಸಮನ್ವಯಾದಿಕಾರಿ ಸಿ.ಆರ್.ಓಣಿ, ಆಯಾ ತಾಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳು, ವಯಸ್ಕರ ಶಿಕ್ಷಣಾಧಿಕಾರಿ, ಬಿಸಿ ಊಟದ ಅಧಿಕಾರಿಗಳು ಸೇರಿದಂತೆ ಜಿಲ್ಲೆಯ 190 ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಸಭೆಯಲ್ಲಿ ಇದ್ದರು.

2024–25 ನೇ ಸಾಲಿನಲ್ಲಿ ಅಧಿಕ ಸಂಖ್ಯೆಯಲ್ಲಿರುವ ಮಕ್ಕಳ ಶಾಲೆಗಳಾಗಿ ಗುರುತಿಸಲ್ಪಟ್ಟ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣ, ಉತ್ತಮ ಕಲಿಕಾ ವಾತಾವರಣ ಹಾಗೂ ಶ್ರೇಷ್ಠ ಫಲಿತಾಂಶದ ಜೊತೆಗೆ ಸ್ವಚ್ಚತೆಯ ಮಾದರಿ ನಿರ್ಮಿಸಿರುವ ಬೀಳಗಿ ತಾಲೂಕಿನ ಕೊಪ್ಪ ಎಸ್.ಆರ್. ಸರ್ಕಾರಿ ಆದರ್ಶ ಪ್ರೌಢ ಶಾಲೆ, ಮುಧೋಳ ತಾಲೂಕಿನ ಶಿರೋಳ ಸರ್ಕಾರಿ ಪ್ರೌಢ ಶಾಲೆ ಹಾಗೂ ಬಾದಾಮಿ ತಾಲೂಕಿನ ಜಮ್ಮನಕಟ್ಟಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಶಶಿಧರ ಕುರೇರ ಅವರು ತಮ್ಮ ಸ್ವಂತ ಖರ್ಚಿನಲ್ಲಿ ಪ್ರತಿ ಶಾಲೆಗೆ 10 ಸಾವಿರ ರೂ.ಗಳ ನಗದು ಬಹುಮಾನ ನೀಡಿದರು.

# ಪ್ರಜ್ವಲ್ ರೇವಣ್ಣಗೆ ಜೀವನಪರ್ಯಂತ ಜೈಲು

ಇದ್ದಾರೆ.ಇದೇ ಪ್ರಕರಣದಲ್ಲಿ ಪ್ರಜ್ವಲ್ ಅವರ ತಂದೆ ಎಚ್.ಡಿ ರೇವಣ್ಣ ಅವರನ್ನು ಬಂಧಿಸಲಾಗಿತ್ತು. ಆದರೆ, ನಂತರ ಅವರಿಗೆ ಜಾಮೀನು ನೀಡಲಾಯಿತು ಮತ್ತು ದೂರಿನಲ್ಲಿ ಆರೋಪಿ ಎಂದು ಹೆಸರಿಸಲಾದ ಅವರ ತಾಯಿ ಭವಾನಿ ರೇವಣ್ಣ ಅವರು ನಿರೀಕ್ಷಣಾ ಜಾಮೀನು ಪಡೆದಿದ್ದರು. ಹೀಗಾಗಿ ಬಂಧನದಿಂದ ತಪ್ಪಿಸಿಕೊಂಡರು.

ಐಪಿಸಿ ಸೆಕ್ಷನ್ 376 (2)(k)ರಡಿ ಜೀವಾವಧಿ ಶಿಕ್ಷೆ ಹಾಗೂ

5 ಲಕ್ಷ ದಂಡ ವಿಧಿಸಿದ್ದರೆ, 376(2) (n) ಅಡಿ ಪದೇಪದೆ ಅತ್ಯಾಚಾರ ಸಂಬಂಧ ಜೀವನಪರ್ಯಂತ ಜೈಲು, 5 ಲಕ್ಷ ರೂ. ದಂಡ ವಿಧಿಸಲಾಗಿದೆ. ಐಪಿಸಿ ಸೆಕ್ಷನ್ 354(A) ಅಡಿಯಲ್ಲಿ 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ ವಿಧಿಸಲಾಗಿದೆ. ಐಪಿಸಿ ಸೆಕ್ಷನ್ 354(ಃ) ಅಡಿಯಲ್ಲಿ 7 ವರ್ಷ ಸೆರೆವಾಸ, 50,000 ರೂಪಾಯಿ ದಂಡ, ಐಪಿಸಿ ಸೆಕ್ಷನ್ 354(ಛಿ) 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ ವಿಧಿಸಿದ್ದರೆ, ಐಪಿಸಿ ಸೆಕ್ಷನ್ 506 ಅಡಿಯಲ್ಲಿ 2 ವರ್ಷ ಸೆರೆವಾಸ, 10,000 ರೂಪಾಯಿ ದಂಡ, ಐಪಿಸಿ ಸೆಕ್ಷನ್ 201ಅಡಿಯಲ್ಲಿ 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ, ಐಟಿ ಕಾಯ್ದೆ ಸೆ.66(ಇ) ಅಡಿಯಲ್ಲಿ 3 ವರ್ಷ ಸೆರೆವಾಸ, 25,000 ರೂಪಾಯಿ ದಂಡ ವಿಧಿಸಲಾಗಿದೆ.

# ಮುತ್ತಿಗೆಯಲ್ಲಿಟ್ಟಿದೆ

ಅವರು ಶನಿವಾರ ಆರೋಪಿಸಿದ್ದಾರೆ.ಬಿಜೆಪಿಯು ನಮ್ಮ ಪ್ರಜಾಪ್ರಭುತ್ವ ಗಣರಾಜ್ಯವನ್ನು ಕೆಲವು ಪ್ರಬಲರಿಗೆ ಸೇವೆ ಸಲ್ಲಿಸುವ ದೇವಪ್ರಭುತ್ವಾತ್ಮಕ ಕಾರ್ಪೊರೇಟ್ ರಾಜ್ಯವನ್ನಾಗಿ ಬದಲಾಯಿಸುವ ಮೂಲಕ "ಸೈದ್ಧಾಂತಿಕ ದಂಗೆ" ನಡೆಸಲು ಪ್ರಯತ್ನಿಸುತ್ತಿದೆ ಎಂದು ಸೋನಿಯಾ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

'ಸಾಂವಿಧಾನಿಕ ಸವಾಲುಗಳು – ದೃಷ್ಟಿಕೋನಗಳು ಮತ್ತು ಮಾರ್ಗಗಳು' ಎಂಬ ದಿನವಿಡೀ ನಡೆದ ರಾಷ್ಟ್ರೀಯ ಕಾನೂನು ಸಮಾವೇಶದಲ್ಲಿ ಓದಿದ ತಮ್ಮ ವಿಶೇಷ ಸಂದೇಶದಲ್ಲಿ, ಸಂಸತ್ತಿನಲ್ಲಿ, ನ್ಯಾಯಾಲಯಗಳಲ್ಲಿ ಮತ್ತು ಬೀದಿಗಳಲ್ಲಿ ಸಂವಿಧಾನವನ್ನು ದುರ್ಬಲಗೊಳಿಸುವ ಪ್ರತಿಯೊಂದು ಪ್ರಯತ್ನವನ್ನು ಕಾಂಗ್ರೆಸ್ ವಿರೋಧಿಸುತ್ತದೆ ಎಂದು ಸೋನಿಯಾ ಗಾಂಧಿ ಹೇಳಿದರು. ಇದು ಕೇವಲ ರಾಜಕೀಯವಲ್ಲ, ಆದರೆ ಪ್ರತಿಯೊಬ್ಬ ಭಾರತೀಯನ ಘನತೆಯನ್ನು ರಕ್ಷಿಸುವ ಸೈದ್ಧಾಂತಿಕ ಬದ್ಧತೆಯಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

"ಇಂದು, ಸಂವಿಧಾನವು ಮುತ್ತಿಗೆಯಲ್ಲಿದೆ. ಸ್ವಾತಂತ್ರ್ಯಕ್ಕಾಗಿ ಎಂದಿಗೂ ಹೋರಾಡದ ಅಥವಾ ಸಮಾನತೆಯನ್ನು ಎತ್ತಿಹಿಡಿಯದ ಬಿಜೆಪಿ–ಆರ್‌ಎಸ್‌ಎಸ್, ಈಗ ಬಹಳ ದಿನಗಳಿಂದ ವಿರೋಧಿಸುತ್ತಿದ್ದ ಚೌಕಟ್ಟನ್ನೇ ಕೆಡವಲು ತನ್ನ ಅಧಿಕಾರ ಬಳಸುತ್ತದೆ" ಎಂದು ಅವರು ಹೇಳಿದರು.

"ಅವರ ಸೈದ್ಧಾಂತಿಕ ಪೂರ್ವಜರು ಮನುಸ್ಮೃತಿಯನ್ನು ವೈಭವೀಕರಿಸಿದರು. ತ್ರಿವರ್ಣ ಧ್ವಜವನ್ನು ತಿರಸ್ಕರಿಸಿದರು ಮತ್ತು ಪ್ರಜಾಪ್ರಭುತ್ವ ಟೊಳ್ಳು, ತಾರತಮ್ಯವೇ ಕಾನೂನು ಎಂಬ ಹಿಂದೂ ರಾಷ್ಟವನ್ನು ಕಲ್ಪಿಸಿಕೊಂಡಿದ್ದರು. ಅಧಿಕಾರದಲ್ಲಿದ್ದಾಗ, ಅವರು ಸಂವಿಧಾನಿಕ ಸಂಸ್ಥೆಗಳನ್ನು ನಾಶಪಡಿಸಿದ್ದಾರೆ. ಭಿನ್ನಾಭಿಪ್ರಾಯವನ್ನು ಅಪರಾಧೀಕರಿಸಿದ್ದಾರೆ, ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡಿದ್ದಾರೆ ಮತ್ತು ದಲಿತರು, ಆದಿವಾಸಿಗಳು, ಒಬಿಸಿಗಳು ಹಾಗೂ ದುಡಿಯುವ ಬಡವರಿಗೆ ದ್ರೋಹ ಮಾಡಿದ್ದಾರೆ" ಎಂದು ಟೀಕಿಸಿದರು.

"ಈಗ ಅವರು ಅಂಬೇಡ್ಕರ್ ಅವರ ಸಮಾನ ಪೌರತ್ವದ ದೃಷ್ಟಿಕೋನದ ಆಧಾರಸ್ತಂಭಗಳಾದ ಸಮಾಜವಾದ ಮತ್ತು ಜಾತ್ಯತೀತತೆಯನ್ನು ಅಳಿಸಿಹಾಕಲು ಪ್ರಯತ್ನಿಸುತ್ತಿದ್ದಾರೆ. ಇದು ಸುಧಾರಣೆಯಲ್ಲ, ಆದರೆ ನಮ್ಮ ಪ್ರಜಾಪ್ರಭುತ್ವ ಗಣರಾಜ್ಯವನ್ನು ಕೆಲವು ಪ್ರಬಲರಿಗೆ ಸೇವೆ ಸಲ್ಲಿಸುವ ದೇವಪ್ರಭುತ್ವದ ಕಾರ್ಪೊರೇಟ್ ರಾಜ್ಯದೊಂದಿಗೆ ಬದಲಾಯಿಸುವ ಸೈದ್ಧಾಂತಿಕ ದಂಗೆಯಾಗಿದೆ" ಎಂದು ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಆರೋಪಿಸಿದ್ದಾರೆ.

## ಅಣ್ಣಾಭಾವು ಸಾಠೆ ಅವರ ಬರವಣಿಗೆ ಮೂಲಕ ದಲಿತರ ಸಮಸ್ಯೆ ಎತ್ತಿ ತೋರಿಸಿದರು:ಉತ್ತಮ ವಾಡೆಕ್ಕರ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.2:ಅಣ್ಣಾಭಾವು ಸಾಠೆ ಅವರು ಮಹಾರಾಷ್ಟ್ರದ ಪ್ರಮುಖ ಲೇಖಕರು, ಜಾನಪದ ಕವಿ ಮತ್ತು ಸಮಾಜ ಸುಧಾರಕರಾಗಿದ್ದರು, ಅಸ್ಪೃಶ್ಯ ಸಮುದಾಯದಲ್ಲಿ ಜನಿಸಿದ ಅವರು, ತಮ್ಮ ಬರವಣಿಗೆ ಮತ್ತು ರಾಜಕೀಯ ಚಟುವಟಿಕೆಗಳ ಮೂಲಕ ದಲಿತರ ಸಮಸ್ಯೆಗಳನ್ನು ಎತ್ತಿ ತೋರಿಸಿದರು ಎಂದು ಸಾಹಿತಿ ಉತ್ತಮ ವಾಡೆಕ್ಕರ ಹೇಳಿದರು.

ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ನಡೆದ ಅಣ್ಣಾಭಾವು ಸಾಠೆ ಜಯಂತಿ ಕಾರ್ಯಕ್ರಮ ದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿರುವ ಪಕ್ಕದ ಉದಗಿರ ನಗರದ ಖ್ಯಾತ ಸಾಹಿತಿ ಮತ್ತು ಕವಿ ಉತ್ತಮ ವಾಡೆಕ್ಕರ ಉದ್ಘಾಟನೆ ಮಾಡಿ ಮಾತನಾಡಿದರು.

ಮಾರ್ಕ್ಸ್‌ವಾದಿ ಮತ್ತು ಅಂಬೇಡ್ಕರ್ ವಾದದ ಪ್ರಭಾವಕ್ಕೆ ಒಳಗಾಗಿದ್ದ ಅವರು, ಕಮ್ಯುನಿಸ್ಟ್ ಚಳುವಳಿಯಲ್ಲಿ ಭಾಗವಹಿಸಿದ್ದರು, ನಂತರ ಅಂಬೇಡ್ಕರ್ ವಾದದ ಕಡೆಗೆ ಒಲವು ತೋರಿದರು. ಅವರನ್ನು ದಲಿತ ಸಾಹಿತ್ಯದ ಸ್ಥಾಪಕ ಪಿತಾಮಹ ಎಂದೂ ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

ಗ್ರಾಮ ಪಂಚಾಯತ ಸದ್ಯಸ ಮಿಥುನ ಸೂರ್ಯವಂಷಿ ಅಧ್ಯಕ್ಷತೆ ವಹಿಸಿದರು.

ಮುಖೇಶ್ ಸೂರ್ಯವಂಶಿ, ಸೆಲಮನ ಮುತಿರಾವೆ, ಆಕಾಶ್ ಸೂರ್ಯವಂಶಿ, ಪ್ರಕಾಶ್ ಕೆರಬಾ, ವಿಜಯ್ ಕುಮಾರ್, ಧನಜಿ ತೋತರೆ, ಶೈಲೇಶ, ಸೇರಿದಂತೆ ಅನೇಕರು ಇದ್ದರು.

## ನಡೆ-ನುಡಿ ಒಂದಾದಲ್ಲಿ ಬದುಕಿಗೆ ಅರ್ಥ



ಕಲಬುರಗಿ:ಅ.2:ಜೀವನದಲ್ಲಿ ನಾವು ಸಾಧನೆ ಮಾಡಬೇಕೆಂದರೆ ಅದರಲ್ಲೂ ನೆಮ್ಮದಿಯಿಂದ ಇರಬೇಕೆಂದರೆ ನಡೆ–ನುಡಿಯಲ್ಲಿ ಒಂದಾದಲ್ಲಿ ಬದುಕಿಗೆ ಹೆಚ್ಚಿನ ಅರ್ಥ ಬರುತ್ತದೆ ಎಂದು ಬೀದರ್‌ನ ಅಲ್ಲಮಪ್ರಭು ಮಠದ ಸಿದ್ದೇಶ್ವರಾನಂದ ಮಹಾಸ್ವಾಮಿಗಳವರು ಹೇಳಿದರು.


ಶ್ರಾವಣ ಮಾಸದಂಗವಾಗಿ ನಗರದ ಆಳಂದ ಕಾಲೋನಿಯ ಪಿಎಫ್ ಕಚೇರಿ ಎದುರುಗಡೆ–ಯ ಗುಡ್ಡಡಗಿ ಕನ್ವೆನ್ಷನಲ್ ಹಾಲ್‌ದಲ್ಲಿ ಸುನೀಲ್ ವಿಶ್ವಕರ್ಮ ದಿಕ್ಸಂಗಿ ಅವರು ಆಯೋಜಿಸಿದ ಮನೆ–ಮನೆಯಂಗಳಲ್ಲಿ ಮೌನೇಶ್ವರ ವಚನಗಳ ಚಿಂತನೆ ಕಾರ್ಯಕ್ರಮದಲ್ಲಿ ಸಾನ್ನಿಧ್ಯವಹಿಸಿ ಆಶೀರ್ವಚನ ನೀಡಿದರು.

ಶರಣರು, ಮಹಾಪುರುಷರು, ಜ್ಞಾನಿಗಳು ತಮ್ಮ ನಡೆ ನುಡಿ ಒಂದಾಗಿಸಿಕೊಂಡು ಮುನ್ನೆಡೆದಿದ್ದರಿಂದಲೇ ಅವರು ಶರಣರು ಎನಿಸಿಕೊಂಡರು ಹಾಗೂ ಮಾದರಿಯಾಗಿ ಕಂಡರು ಎಂದು ವಿವರಣೆ ನೀಡಿದ ಅವರು. ಮಹಾಜ್ಞಾನಿ ಮೌನೇಶ್ವರರು ಜೀವನ ಎಲ್ಲ ರಂಗಗಳ ಕುರಿತಾಗಿ ತಮ್ಮ ತತ್ವ ಮತ್ತು ವಚನಗಳ ಸಾರಗಳ ಮೂಲಕ ಎಲ್ಲವನ್ನು ತಿಳಿ ಹೇಳಿದ್ದಾರೆ. ಅವರ ಒಂದೊಂದು ವಚನ ಶ್ರಾವಣ ಮಾಸದಲ್ಲಿ ಓದಿ ಮನನ ಮಾಡಿಕೊಂದರೆ ಅದರಕ್ಕಿಂತ ದೊಡ್ಡದು ಮತ್ತೊಂದುವಾಗುವುದಿಲ್ಲ ಎಂದು ಹತ್ತಾರು ವಚನಗಳ ಮೂಲಕ ವಿವರಣೆ ನೀಡಿದರು.

ಶರಣರು ದುಡಿಮೆಗೆ ಹೆಚ್ಚಿನ ಮಹತ್ವ ನೀಡಿರುವುದನ್ನು ನಾವು ಪ್ರಮುಖವಾಗಿ ಅವಲೋಕಿಸಬಹುದಾಗಿದೆ.ಮಕ್ಕಳನ್ನು ಬರೀ ವಿದ್ಯೆಯಿಂದ ಬೆಳೆಸಿದರೆ ಸಾಲದು, ಸಂಸ್ಕಾರದಿಂದಲೂ ಬೆಳೆಸಬೇಕು. ವಿದ್ಯೆಗೆ ವಿನಯವೇ ಭೂಷಣ. ಹೀಗಾಗಿ ಇಂದಿನ ಮಕ್ಕಳು ಅದರಲ್ಲೂ ಯುವಕರು ಸಮಾಜದ ಅದರಲ್ಲೂ ತಮ್ಮ ಭವಿಷ್ಯದ ಕುರಿತಾಗಿ ಚಿಂತನೆ ಮಾಡುವುದು ಬಹಳ ಆವಶ್ಯಕತೆವಿದೆ ಎಂದು ಮಹಾಸ್ವಾಮಿಗಳು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳ ಸಾಧಕರನ್ನು ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸತ್ಕರಿಸಲಾಯಿತು. ಚಂದ್ರಶೇಖರ ಶಿಲ್ಪಿ, ಗಾಯತ್ರಿ ಶಿಲ್ಪಿ, ವಿಜಯಕುಮಾರ ವಿಶ್ವಕರ್ಮ, ಇತರರನ್ನು ಗೌರವಿಸಲಾಯಿತು. ಸಮಾಜದ ಪ್ರಮುಖರಾದ ವೀರಣ್ಣ ಮುತ್ಯಾ, ಶಿವರಾಜ ಶಾಸ್ತ್ರೀಗಳು, ಸುನೀಲ್ ವಿಶ್ವಕರ್ಮ, ಗಂಗಾಧರ ಪೋದ್ದಾರ, ಜನಾರ್ಧನ ಹೇಮನೂರ, ರಾಜೇಂದ್ರ ಬಡಿಗೇರ, ಸೂರ್ಯಕಾಂತ ಬಡಿಗೇರ, ವೀರಣ್ಣಕೋಗನೂರ, ಗುರುದೇವ ವಿಶ್ವಕರ್ಮ ಸೇರಿದಂತೆ ಮುಂತಾದವರಿದ್ದರು.

# ಎಕಲಾರ್:ನೂತನ ಎಸ್‌ಡಿಎಂಸಿ ರಚನೆ



ಔರಾದ್:ಅ.2: ತಾಲೂಕಿನ ಎಕಲಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಎಸ್‌ಡಿಎಂಸಿ ರಚನೆ ಮಾಡಲಾಗಿದ್ದು, ಅಧ್ಯಕ್ಷರಾಗಿ ಧನರಾಜ ಪಿಟ್ರೆ ಹಾಗೂ ಉಪಾಧ್ಯಕ್ಷರಾಗಿ ಶಿವಾನಿ ಅಮೃತ ಆಯ್ಕೆಯಾಗಿದ್ದಾರೆ.

ಶುಕ್ರವಾರ ಶಿಕ್ಷಣ ಇಲಾಖೆ ನಿರ್ದೇಶನದಂತೆ ಸಿಆರ್‌ಪಿ ಮಹಾದೇವ ಘುಳೆ ನೇತೃತ್ವದಲ್ಲಿ ನೂತನವಾಗಿ ಎಸ್‌ಡಿಎಂಸಿ ಸದಸ್ಯರನ್ನು ಆಯ್ಕೆ ಮಾಡಲಾಗಿ ಬಳಿಕ ಅಧ್ಯಕ್ಷ ಉಪಾಧ್ಯಕ್ಷರನ್ನು ಆಯ್ಕೆ ಮಾಡಲಾಯಿತು.

ಸದಸ್ಯರಾಗಿ ಗುರುಪಾದಯ್ಯ ಸ್ವಾಮಿ, ಶಿವಕುಮಾರ ಬಿರಾದಾರ, ವಿಜಯಕುಮಾರ ಭಾಲ್ಕೆ, ಬಾಬುಗೊಂಡ, ಸಂಜುಕುಮಾರ, ಸತೀಶ, ಶರಣಪ್ಪ, ಶಿವಗೊಂಡ್, ಚಂಪಾವತಿ, ದೀಪಿಕಾ, ರೇಖಾ, ಉಮಾಶ್ರೀ, ಸವಿತಾ, ಕಲ್ಪನಾ ಪಾಟೀಲ್, ನಸರೀನ್ ಬೇಗಂ ಹಾಗೂ ರುಕ್ಮಿಣಿ ಅವರು ಆಯ್ಕೆಯಾಗಿದ್ದಾರೆ. ಬಳಿಕ ಮಾತನಾಡಿದ ಮಲ್ಲಿಕಾರ್ಜುನ ಹಿಪ್ಪಳಗಾವೆ, ಶಾಲೆಯ ಅಭಿವೃದ್ಧಿಗೆ ಸದಸ್ಯರು ಒಗ್ಗಟ್ಟಿನಿಂದ ಶ್ರಮಿಸಬೇಕು. ಗ್ರಾಮದ ಪ್ರತಿ ಮಗುವು ಗುಣಮಟ್ಟದ ಶಿಕ್ಷಣ ಪಡೆಯುವಂತೆ ಮಾಡುವುದು ಸಮಿತಿಯ ಮುಖ್ಯ ಉದ್ಧೇಶವಾಗಲಿ ಎಂದರು. ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ಪ್ರಭು ಬಾಳೂರೆ, ಮುಖಂಡ ಶಿವಶಂಕರ ಮಣಿಗೆಂಪೂರೆ, ಗ್ರಾಪಂ ಸದಸ್ಯ ಗಂಗಶೆಟ್ಟಿ ಬಿರಾದಾರ, ಪ್ರಕಾಶ ಹಿಪ್ಪಳಗಾವೆ, ನಾಗೇಶ ಪಾಟೀಲ್, ಶಿವಕುಮಾರ ಪಾಟೀಲ್, ಪಿಕೆಪಿಎಸ್ ಅಧ್ಯಕ್ಷ ಬಾಬುರಾವ ಪಾಟೀಲ್ ಸೇರಿದಂತೆ ಇನ್ನಿತರರಿದ್ದರು.

# ಆಕಾಶವಾಣಿ ಕಲಾವಿದರಾಗಿ ಮಲ್ಲಯ್ಯ ಚಿಕ್ಕಮಠ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲೂಕಿನ ಹಳ್ಳಿಖೇಡ (ಕೆ) ಗ್ರಾಮದ ಚಿಕ್ಕಮಠ ಮನೆತನದ ಹಿರಿಯ ಕಲಾವಿದ ವೇ. ಮೂ ಕಾರ್ತಿಕಯ್ಯ ಚಿಕ್ಕಮಠ ಅವರ ಮಗನಾದ ಗಾಯಕ ಮಲ್ಲಯ್ಯ ಚಿಕ್ಕಮಠ ಅವರು ಕಲಬುರಗಿ ಆಕಾಶವಾಣಿ ಕೇಂದ್ರದಿಂದ ತತ್ವಪದ ಸಂಗೀತ ವಿಭಾಗದಲ್ಲಿ ಬಿ ಗ್ರೇಡ್ ಮಾನ್ಯತೆ ಪಡೆದುಕೊಂಡಿದ್ದಾರೆ . ಇವರು ಬೀದರ ಜಿಲ್ಲೆಯ ಉದಯೋನ್ಮುಖ ಕಲಾವಿದರಾಗಿದ್ದು . ಸಂಗೀತ ಕಲೆಯನ್ನು ಬೆಳೆಸುವ ದಕ್ಕಾಗಿ



ಶ್ರೀ ಕಿನ್ನರಿ ನಾದ ರುದ್ರ ಸಂಗೀತ ಕಲಾ ಸಂಸ್ಥೆಯನ್ನು ಹುಟ್ಟು ಹಾಕಿ ಕಲೆ ಸಾಹಿತ್ಯ ಸಂಗೀತ ಉಳಿಸುತ್ತಿದ್ದಾರೆ ಇವರು ಸಂಗೀತ ಶಿಕ್ಷಣವನ್ನು ಹಿರಿಯ ಆಕಾಶವಾಣಿ ಕಲಾವಿದರಾದ ಸಂಗೀತ ಶಿಕ್ಷಕರಾದ ಗುರುಶಾಂತಯ್ಯ ಸ್ಥಾವರಮಠ. ಅವರ ಹತ್ತಿರ ಸಂಗೀತ ಅಭ್ಯಾಸ ಮಾಡಿ ನಾಡಿನ ತುಂಬೆಲ್ಲ ಸಂಗೀತ ಸೇವೆ ನೀಡಿದ್ದಾರೆ. ಬಸವ ಉತ್ಸವ. ಬೆಂಗಳೂರು ಗಣರಾಜ್ಯೋತ್ಸವ ಕಾರ್ಯಕ್ರಮ ಮಠ ಮಂದಿರದಲ್ಲಿ ಅನೇಕ ವೇದಿಕೆಯಲ್ಲಿ ಸಂಗೀತ ಕಾರ್ಯಕ್ರಮ ನೀಡುತ್ತಿದ್ದಾರೆ. ಇವರ ಈ ಸಾಧನೆಗೆ ಜಿಲ್ಲೆಯ ಹಿರಿಯ ಕಲಾವಿದರಾದ ಗಂಗಾಧರಯ್ಯ ಚಿಕ್ಕಮಠ. ಜನಾರ್ಧನ ವಾಘಮೋರೆ. ಮಹಾಂತಯ್ಯ ಮಠಾಳ. ಸುಭಾಷ ಕಲಕೋರಾ. ಧೂಳಪ್ಪಾ ಮುಡಬಿ. ಹರ್ಷ ವ್ಯಕ್ತಪಡಿಸಿದ್ದಾರೆ.



ಬೀದರ್ ಜಿಲ್ಲಾ ಹಿಂದುಳಿದ ವರ್ಗಗಳ ಮಾನ್ಯತೆ ಪಡೆದ ಸಂಪಾದಕರ ಸಂಘ ಹಾಗೂ ವರದಿಗಾರ ಸಂಘದ ವತಿಯಿಂದ ಜರುಗಿದ ಕಾರ್ಯಕ್ರಮದಲ್ಲಿ ಪತ್ರಿಕಾ ದಿನಾಚರಣೆಯ ಸವಿ ನೆನಪಿಗಾಗಿ ಪರಿಸರವಾದಿ ಶೈಲೇಂದ್ರ ಕಾವಡಿ ಸೇರಿದಂತೆ ಇತರರಿಗೆ ಸನ್ಮಾನಿಸಲಾಯಿತು. ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ರಾಜಶ್ರೀ ಸ್ವಾಮಿ. ಗಂಧರ್ವ ಸೇನಾ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

### ಪ್ರಸೂತಿ, ಸ್ತ್ರೀ ರೋಗ ತಜ್ಞರ ಸಮ್ಮೇಳನ ಉದ್ಘಾಟನೆ: ಸಚಿವ ಈಶ್ವರ ಖಂಡ್ರೆ

# ಕಿವಿಮಾತು ತಾಯಿ-ಮಕ್ಕಳ ಆರೋಗ್ಯ ಕಾಳಜಿ ವಹಿಸಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 02 :- ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರು ತಾಯಿ ಹಾಗೂ ಮಕ್ಕಳ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.



ಇಲ್ಲಿಯ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಎರಡು ದಿನಗಳ ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಉತ್ತರ ವಲಯ ಸಮ್ಮೇಳನ ಹಾಗೂ ಕಾರ್ಯಾಗಾರವನ್ನು ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ಆಸ್ಪತ್ರೆಗಳ ವಿಭಾಗಗಳಲ್ಲಿ ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ವಿಭಾಗದ ಪಾತ್ರ ಬಹಳ ಮಹತ್ವದ್ದಾಗಿದೆ. ತಾಯಿ-ಮಗುವಿನ ಸುರಕ್ಷತೆ ಹಾಗೂ ರಕ್ಷಣೆಯ ಗುರುತರ ಜವಾಬ್ದಾರಿ ಈ ವಿಭಾಗದ ಮೇಲಿದೆ ಎಂದು ತಿಳಿಸಿದರು.

ಆರೋಗ್ಯವಿದ್ದರೆ ಎಲ್ಲವೂ ಇದ್ದ ಹಾಗೆ. ಸದ್ಯ ಸದೃಢ ಆರೋಗ್ಯ ಕಾಯ್ದುಕೊಳ್ಳಲು ಜೀವನ ಶೈಲಿ ಹಾಗೂ ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕಾದ ಅಗತ್ಯ ಇದೆ ಎಂದು ಹೇಳಿದರು.

ಸಮ್ಮೇಳನವು ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ಕ್ಷೇತ್ರದಲ್ಲಿನ ಹೊಸ ಬದಲಾವಣೆಗಳ ಮೇಲೆ ಬೆಳಕು ಚೆಲ್ಲಲಿದೆ. ವಿಭಾಗದ ಸೇವೆಯ ಗುಣಮಟ್ಟ ಸುಧಾರಣೆಗೂ ವೇದಿಕೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಅಧ್ಯಕ್ಷ ಡಾ. ದುರ್ಗಾದಾಸ್ ಅಸ್ರಣ್ಣ ಮಾತನಾಡಿ, ಸಂಘ 34 ವರ್ಷಗಳಿಂದ ಪ್ರಸೂತಿ ಹಾಗೂ ಸ್ತ್ರೀ ರೋಗ ತಜ್ಞರ ಹಿತ ರಕ್ಷಣೆಗೆ ಶ್ರಮಿಸುತ್ತಿದೆ. ಬೀದ ರ ನಲ್ಲಿ ಸಂಘಟಿಸಿರುವ ಸಮ್ಮೇಳನ ಮೊದಲ ಸಮ್ಮೇಳನವಾಗಿದ್ದು, ಇದರ ಶ್ರೇಯ ಬೀದರ್ ಘಟಕಕ್ಕೆ ಸಲ್ಲುತ್ತದೆ ಎಂದು ತಿಳಿಸಿದರು.

ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಸಂಸದ ಸಾಗರ್ ಖಂಡ್ರೆ, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ. ಸುಜಾತಾ ರಾಠೋಡ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಬ್ರಿಮ್ಸ್ ಮುಖ್ಯ ಆಡಳಿತಾಧಿಕಾರಿ ಸುರೇಖಾ, ನಿರ್ದೇಶಕ ಡಾ. ಶಿವಕುಮಾರ ಶೆಟಕಾರ್, ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಮಹಾ ಪೋಷಕ ಡಾ. ಎಂ.ಜಿ. ಹಿರೇಮಠ, ಪೋಷಕ ಡಾ. ನಾಗರಾಜ ಎಚ್, ಡಾ. ಶೋಭಾ ಗುಡಿ, ಡಾ. ರಾಜಶ್ರೀ ಪಲಾಡಿ, ಡಾ. ಬಸವರಾಜ ಪಾಟೀಲ ಅಷ್ಟೂರ, ಡಾ. ಚಂದ್ರಕಾಂತ ಗುದಗೆ, ಡಾ. ಶೋಭಾ ಬೆಂಬಳಗಿ, ಡಾ. ಎಂ.ಬಿ. ಬೆಲ್ಲದ್, ಡಾ. ವಿದ್ಯಾ ಥೊಬ್ಬಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನೀರಗುಡಿ, ಬ್ರಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ. ಶಿವಯೋಗಿ ಬಾಲಿ, ಪ್ರಾಚಾರ್ಯ ಡಾ. ರಾಜೇಶ ಪಾರಾ, ಜಿಲ್ಲಾ ಆಸ್ಪತ್ರೆ ಚಿಕಿತ್ಸಕ ಡಾ. ಎಂ.ಡಿ. ಅಹಮ್ಮದುದ್ದೀನ್, ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಬೀದರ್ ಘಟಕದ ಕಾರ್ಯದರ್ಶಿ ಡಾ. ಸವಿತಾ ಎಸ್. ಬಡಿಗೇರ, ಸಂಘಟನಾ ಕಾರ್ಯದರ್ಶಿ ಡಾ. ಹೇಮಲತಾ ಪಾಟೀಲ ಮತ್ತಿತರರು ಇದ್ದರು.

ರಾಜ್ಯ ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಬೀದರ್ ಘಟಕದ ಅಧ್ಯಕ್ಷೆ ಡಾ. ಉಮಾ ಬಿ. ದೇಶಮುಖ ಸ್ವಾಗತಿಸಿದರು.

ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘ ಹಾಗೂ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವತಿಯಿಂದ ಸಮ್ಮೇಳನ ಹಾಗೂ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧೆಡೆಯ 500 ಪ್ರತಿನಿಧಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದಾರೆ.

# ಕನ್ನಡ ನಾಮ ಫಲಕ ಕಡ್ಡಾಯವಾಗಿ ಬಳಸಲು ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಹುಮನಬಾದ:- ಪಟ್ಟಣದ ವಿವಿಧಡೆ ಹೊರ ರಾಜ್ಯದ ಹಲವಾರು ಜನರು ಬಿಜಿನೆಸ್ ಮಾಡಲು ಹುಮ್ನಾಬಾದ್ ನಲ್ಲಿ ಬಂದು, ಸ್ವೀಟ್ ಅಂಗಡಿ, ಹಾರ್ಡ್ವೇರ್ ಶಾಪ್, ಮುಂತಾದ ವ್ಯವಹಾರಗಳಲ್ಲಿ ತೊಡಗಿದ್ದು ಅದಲ್ಲದೆ ಹಲವಾರು ಸ್ಥಳೀಯರು ಕೂಡ ಕೆಲವು ಅಂಗಡಿಗಳನ್ನು ವ್ಯವಹಾರಿಕವಾಗಿ ಪ್ರಾರಂಭಿಸಿದ್ದಾರೆ. ಆದರೆ ಸರ್ಕಾರದ ನಿಯಮದಂತೆ ಶೇಕಡಾ ಅರವತ್ತರಷ್ಟು ಕನ್ನಡವನ್ನು ಕಡ್ಡಾಯವಾಗಿ ಬಳಸಬೇಕು





ಆದರೆ ಕೆಲವರು ಕನ್ನಡ ನಾಮಪಲಕವನ್ನು ಬಳಸದೆ, ಕನ್ನಡಕ್ಕೆ ಅವಮಾನ ಮಾಡುತ್ತಿದ್ದಾರೆ ಅದೇ ರೀತಿ ಹುಮ್ನಾಬಾದ್ ಇಂಡಸ್ಟ್ರಿಯಲ್ ಏರಿಯಾದಲ್ಲಿರುವ ಎಲ್ಲಾ ಕಂಪನಿಗಳಲ್ಲಿ ಕಡ್ಡಾಯವಾಗಿ ಕನ್ನಡವನ್ನು ಬಳಸಬೇಕು, ಆದರೆ ನಿಯಮಗಳಿಗೆ ತುರುತ್ತಿದ್ದಾರೆ. ಆದ್ದರಿಂದ ಇದ-ಕ್ಕೆ ಸಂಬಂಧಪಟ್ಟ ಇಲಾಖೆಗಳಿಂದ ನೋಟಿಸ್ ಜಾರಿ ಮಾಡಬೇಕು ಇಲ್ಲವಾದಲ್ಲಿ ಉಗ್ರವಾದ ಹೋರಾಟವನ್ನು ಮಾಡಲಾಗುವುದು ಎಂದು ಕನ್ನಡ ಸೇನೆ ಕರ್ನಾಟಕ ಜಿಲ್ಲಾಧ್ಯಕ್ಷರಾದ ಶ್ರೀ ಸುಭಾಷ್ ಕೆನಡೆ, ಹಾಗು ಈ ಸಂಘಟನೆಯ ತಾಲೂಕಾ ಪ್ರಧಾನ ಕಾರ್ಯದರ್ಶಿಯಾದ ಪರಿಸರವಾದಿ ಶ್ರೀ ಪ್ರದೀಪರೆಡ್ಡಿ ಚಿನಕೇರಾ ಅಗ್ರಹಿಸಿದ್ದಾರೆ.

# ಆಗಸ್ಟ್ 8 ರಿಂದ ಸೇನಾ ನೇಮಕಾತಿ ರ್‍ಯಾಲಿ: 11 ಸಮಿತಿಗಳನ್ನು ರಚಿಸಿ ಜವಾಬ್ದಾರಿ ಹಂಚಿಕೆ ಮಾಡಿದ ಜಿಲ್ಲಾಧಿಕಾರಿಗಳು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಆಗಸ್ಟ್ 8 ರಿಂದ 22ರವರೆಗೆ ನಡೆಯುವ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಅಂದಾಜು 15,000 ಅಭ್ಯರ್ಥಿಗಳು ಭಾಗವಹಿಸಲಿದ್ದು, ರ್‍ಯಾಲಿಯನ್ನು ಯಶಸ್ವಿಗೊಳಿಸುವ ಹಿನ್ನೆಲೆಯಲ್ಲಿ ಜಿಲ್ಲಾಮಟ್ಟದ ವಿವಿಧ ಇಲಾಖೆಗಳನ್ನೊಳಗೊಂಡು ಸಮಿತಿಗಳನ್ನು ರಚಿಸಿ ಅಧಿಕಾರಿ ಹಾಗೂ ಸಿಬ್ಬಂದಿಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಜವಾಬ್ದಾರಿ ಹಂಚಿಕೆ ಮಾಡಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಅಧ್ಯಕ್ಷತೆಯಲ್ಲಿ 10 ಜನ ಅಧಿಕಾರಿಗಳ ವೇದಿಕೆ ಸಮಿತಿ ರಚಿಸಿದ್ದು, ವೇದಿಕೆ, ಪೆಂಡಾಲ ನಿರ್ಮಾಣ, ವೇದಿಕೆ ಮುಂಭಾಗ ಆಸನ ವ್ಯವಸ್ಥೆ, ವಿದ್ಯುತ್ ದೀಪಗಳ ವ್ಯವಸ್ಥೆ, ಮೈದಾನದಲ್ಲಿ ಬ್ಯಾರಿಕೇಡ್ ವ್ಯವಸ್ಥೆ, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ವಿದ್ಯುತ್ ದೀಪಗಳು ಮತ್ತು ಜನರೇಟರ್ ವ್ಯವಸ್ಥೆ, ಆಸನ, ಕುರ್ಚಿಗಳು, ಟೇಬಲ್‌ಗಳು, ಮೈಕ್‌ಸೆಟ್, ಖಾಟ್ ಮತ್ತು ಹಾಸಿಗೆ ಹಾಗೂ ತ್ಯಾಜ್ಯದ ತೊಟ್ಟಿಗಳ ವ್ಯವಸ್ಥೆ, ಬಿಎಸ್‌ಎನ್‌ಎಲ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಜೊತೆಗೆ ವೈಫೈ ಮತ್ತು ಟೆಲಿಫೋನ್, ಎಲ್‌ಎಎನ್ ಸಂಪರ್ಕ, ಫೈಬರ್ ಕೇಬಲ್ ಜೊತೆಗೆ ಟೆಕ್ನಿಕಲ್ ವ್ಯವಸ್ಥೆ ಕಲ್ಪಿಸುವುದು, ಸಿಸಿಟಿವಿ ಅಳವಡಿಕೆ ವ್ಯವಸ್ಥೆಯ ಜವಾಬ್ದಾರಿ ವಹಿಸಲಾಗಿದೆ. ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಈ ಸಮಿತಿಗೆ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಭದ್ರತಾ ಸಮಿತಿ ರಚಿಸಿದ್ದು, ರ್‍ಯಾಲಿಗೆ ಆಗಮಿಸುವ ಎಲ್ಲಾ ಅಭ್ಯರ್ಥಿಗಳಿಗೆ ಹಾಗೂ ಇತರರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಸೂಕ್ತ ರಕ್ಷಣಾ ವ್ಯವಸ್ಥೆ ಕಲ್ಪಿಸುವುದು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಜನಸಂದಣಿ ನಿರ್ವಹಣೆ ಮಾಡುವುದು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಹೊರಗಡೆ ಹಾಗೂ ಮುಂಭಾಗದಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ ಸಾರ್ವಜನಿಕ ರಸ್ತೆ ಸಂಚಾರಕ್ಕೆ ತೊಂದರೆಯಾಗದಂತೆ ಕ್ರಮ ವಹಿಸುವುದು. ವಿಶ್ವವಿದ್ಯಾಲಯದ ಮುಂಭಾಗದಲ್ಲಿ ವಾಹನಗಳ ಸಂಚಾರ ದಟ್ಟಣೆ ಆಗದಂತೆ ಕ್ರಮ ವಹಿಸುವುದು ಮತ್ತು ಎಲ್ಲಾ ರೀತಿಯ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ಮತ್ತು ಅಗ್ನಿಶಾಮಕ ವಾಹನ ಮತ್ತು ತುರ್ತು ಸೇವೆಗಳ ಒದಗಿಸುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ಈ ಸಮಿತಿಗೆ ಜಿಲ್ಲಾ ಪೋಲಿಸ್ ಉಪ ಅಧೀಕ್ಷಕರು ಸದಸ್ಯ ಕಾರ್ಯಾದರ್ಶಿಯಾಗಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ಮೂಲಭೂತ ಸೌಕರ್ಯ ಸಮಿತಿ ರಚಿಸಲಾಗಿದ್ದು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಕುಡಿಯುವ ನೀರಿಗಾಗಿ ನಳಗಳ ಮತ್ತು ನೀರಿನ ವ್ಯವಸ್ಥೆ ಒದಗಿಸುವುದು. ಸಿಬ್ಬಂದಿಗೆ ಕುಡಿಯುವ ನೀರಿನ ಬಾಟಲಿ ಕೊಡುವುದು, ಮೊಬೈಲ್ ಶೌಚಾಲಯಗಳ ವ್ಯವಸ್ಥೆ, ಅವುಗಳಿಗೆ ಟ್ಯಾಂಕರ್ ಮೂಲಕ ನೀರನ್ನು ಒದಗಿಸುವುದು, ವಿಶ್ವವಿದ್ಯಾಲಯದ ಆವರಣ ಸ್ವಚ್ಛಗೊಳಿಸುವುದು ಹಾಗೂ ಸುತ್ತಲಿನ ಪ್ರದೇಶದಲ್ಲಿನ ತ್ಯಾಜ್ಯ ವಸ್ತುಗಳ ವೀಲೆ ಮಾಡುವ ಜವಾಬ್ದಾರಿ ವಹಿಸಲಾಗಿದೆ. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ಕಾರ್ಯನಿರ್ವಾಹಕ ಅಭಿಯಂತರರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಾರಿಗೆ ಸಮಿತಿಯನ್ನು ರಚಿಸಲಾಗಿದೆ. ಸೇನಾ ನೇಮಕಾತಿ ಸಂಬಂಧ ಆಗಮಿಸುವ ಅಭ್ಯರ್ಥಿಗಳಿಗೆ ವಸತಿಗಾಗಿ ತಂಗು ಸ್ಥಳಗಳಿಂದ (ಹಾಸ್ಟೆಲ್) ಅಥವಾ ಬಸ್ ನಿಲ್ದಾಣಗಳಿಂದ ರ್‍ಯಾಲಿ ನಡೆಯುವ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಬಸ್‌ಗಳ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಈ ಸಮಿತಿಗೆ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಆಹಾರ ಹಾಗೂ ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸೇನಾ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ವಸತಿ ಮತ್ತು ಆಹಾರ ಸಮಿತಿ ರಚಿಸಲಾಗಿದೆ. ಸೇನಾ ನೇಮಕಾತಿ ರ್‍ಯಾಲಿಗೆ ಆಗಮಿಸುವ ಅಭ್ಯರ್ಥಿಗಳಿಗೆ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಅರಕೇರಾ ತಹಶೀಲ್ದಾರರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಅಧ್ಯಕ್ಷತೆಯಲ್ಲಿ ಸೇನಾ ಸಿಬ್ಬಂದಿಗೆ ವಸತಿ ಸಮಿತಿ ರಚಿಸಲಾಗಿದೆ. ಈ ರ್‍ಯಾಲಿಯಲ್ಲಿ ಭಾಗವಹಿಸುವ ಸೇನಾ ಸಿಬ್ಬಂದಿಗೆ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಜವಾಬ್ದಾರಿ ವಹಿಸಲಾಗಿದೆ. ಮಾಜಿ ಸೈನಿಕರಾದ ಚನ್ನರೆಡ್ಡಿ ಅವರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆರೋಗ್ಯ ಸಮಿತಿಯನ್ನು ರಚಿಸಲಾಗಿದ್ದು, ವೈದ್ಯರು ಮತ್ತು ಶುಶ್ರೂಷ ಸಹಾಯಕಿಯರ ಸಿಬ್ಬಂದಿಯನ್ನು ಅಗತ್ಯಕ್ಕೆ ಅನುಗುಣವಾಗಿ ನಿಯೋಜಿಸುವುದು. ಅವಶ್ಯಕ ಹಾಗೂ ಜೀವರಕ್ಷಕ ಔಷಧಿಗಳ ವ್ಯವಸ್ಥೆ ಒದಗಿಸುವುದು. ದಿನವಿಡಿ ಆರೋಗ್ಯ ಸೇವೆ ಒದಗಿಸುವುದು. ಬೆಳಿಗ್ಗೆ 05 ರಿಂದ ದಿನದ ಕಾರ್ಯಕ್ರಮ ಪೂರ್ವವಾಗುವವರೆಗೂ ಎಲ್ಲಾ ಸೌಲಭ್ಯದೊಂದಿಗೆ ಅಂಬುಲೈನ್ಸ್ ವಾಹನ ಸಿದ್ಧವಾಗಿಟ್ಟುಕೊಳ್ಳುವುದು. ಆಹಾರ ಗುಣಮಟ್ಟ ಪರಿಶೀಲನೆ ಮಾಡುವ ಜವಾಬ್ದಾರಿ ವಹಿಸಲಾಗಿದೆ. ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿಗಳು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿದ್ದಾರೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಪ್ರಚಾರ ಮತ್ತು ಮಾಧ್ಯಮ ಸಮಿತಿಯನ್ನು ರಚಿಸಲಾಗಿದೆ. ಪ್ರತಿ ದಿನ ರ್‍ಯಾಲಿಯಲ್ಲಿ ನಡೆಯುವ ಮಾಹಿತಿಯನ್ನು ಕಲೆ ಹಾಕುವುದು ಮತ್ತು ವಾರ್ತಾ ಇಲಾಖೆಗೆ ಒದಗಿಸುವುದು ಮತ್ತು ಅಭ್ಯರ್ಥಿಗಳ ಅನುಕೂಲಕ್ಕಾಗಿ ರ್‍ಯಾಲಿಯಲ್ಲಿ ನಡೆಯುವ ಮಾಹಿತಿಯನ್ನು ಎಲ್ಲಾ ಪ್ರಮುಖ ಪತ್ರಿಕೆಗಳಲ್ಲಿ ಪ್ರಚುರಪಡಿಸುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಮತ್ತು ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಮಿತಿಯ ಸದಸ್ಯರಾಗಿದಾರೆ.

ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಅಧ್ಯಕ್ಷತೆಯಲ್ಲಿ ಮತ್ತು ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಸದಸ್ಯ ಕಾರ್ಯದರ್ಶಿಯನ್ನಾಗಿ ವಿದ್ಯುತ್ ಸರಬರಾಜು ಸಮಿತಿ ರಚಿಸಿದ್ದು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಲ್ಲಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿ ಮುಗಿಯುವವರೆಗೆ ಯಾವುದೇ ರೀತಿ ವಿದ್ಯುತ್ ವ್ಯತ್ಯಯ ಆಗದ ರೀತಿಯಲ್ಲಿ ಸೂಕ್ತ ವ್ಯವಸ್ಥೆ ಮಾಡುವ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಉಪ ನಿರ್ದೇಶಕರ ಅಧ್ಯಕ್ಷತೆಯಲ್ಲಿ ದಾಖಲಾತಿ ಪರಿಶೀಲನಾ ಸಮಿತಿ ರಚಿಸಲಾಗಿದೆ. ರ್‍ಯಾಲಿಯಲ್ಲಿ ಅಭ್ಯರ್ಥಿಗಳು ಸಲ್ಲಿಸುವ ದಾಖಲಾತಿಗಳನ್ನು ಪಡೆದು ಅವುಗಳನ್ನು ಪರಿಶೀಲಿಸಿ ಸಂಬಂಧಪಟ್ಟ ಸೇನಾ ಸಿಬ್ಬಂದಿಗೆ ವರದಿ ನೀಡುವ ಜವಾಬ್ದಾರಿ ವಹಿಸಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದಾರೆ. ರಾಯಚೂರು ತಹಶೀಲ್ದಾರರು, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಈ ಸಮಿತಿಯ ಸದಸ್ಯರಾಗಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆ ಸಂತೋಷ ರಾಣಿ ಅವರ ಅಧ್ಯಕ್ಷತೆಯಲ್ಲಿ ಸ್ವಚ್ಛತಾ ಸಮಿತಿ ರಚಿಸಲಾಗಿದೆ. ಮಹಾನಗರ ಪಾಲಿಕೆಯ ಪರಿಸರ ಅಭಿಯಂತರರು ಮತ್ತು ಮಹಾನಗರ ಪಾಲಿಕೆ ನೈರ್ಮಲ್ಯ ನಿರೀಕ್ಷಕರು ಈ ಸಮಿತಿಯ ಸದಸ್ಯ ಕಾರ್ಯದರ್ಶಿ ಮತ್ತು ಸದಸ್ಯರಾಗಿದ್ದಾರೆ. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿ ಮುಗಿಯುವವರೆಗೆ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಸಿಬ್ಬಂದಿಯನ್ನು ನಿಯೋಜಿಸಿ ಸೂಕ್ತ ವ್ಯವಸ್ಥೆ ಮಾಡಲು ಈ ಸಮಿತಿಗೆ ಜವಾಬ್ದಾರಿ ವಹಿಸಲಾಗಿದೆ.

ನೋಡಲ್ ಅಧಿಕಾರಿಯಾಗಿ ನೇಮಕ: ಈ ಸೇನಾ ನೇಮಕಾತಿ ರ್‍ಯಾಲಿಯ ಮೇಲ್ವಿಚಾರಣೆಗಾಗಿ ಉಪ ವಿಭಾಗಾಧಿಕಾರಿಗಳು, ರಾಯಚೂರು ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ಮತ್ತು ರಾಯಚೂರು ತಹಶೀಲ್ದಾರರು ಹಾಗೂ ಅರ-ಕೇರಾ ತಹಶೀಲ್ದಾರನ್ನು ಇವರನ್ನು ಲೈಸನಿಂಗ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ಸಮಿತಿಯ ಅಧ್ಯಕ್ಷರಿಗೆ ಸೂಚನೆ: ವಿವಿಧ ಸಮಿತಿಗಳ ಅಧ್ಯಕ್ಷರು ರಾಯಚೂರಿನ ಉಪವಿಭಾಗಾಧಿಕಾರಿಗಳೊಡನೆ ಸಮನ್ವಯ ಸಾಧಿಸಿ ತಮ್ಮ ಸಮಿತಿಗೆ ವಹಿಸಲಾದ ಕಾರ್ಯಗಳ ಕುರಿತು ಕೂಡಲೇ ಕಾರ್ಯಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಅಧಿಕಾರಿಗಳಿಗೆ ಸೂಚನೆ: ಈ ಸೇನಾ ನೇಮಕಾತಿ ರ್‍ಯಾಲಿಯು ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ರಚಿಸಲಾದ ವಿವಿಧ ಸಮಿತಿಯಲ್ಲಿ ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿ ಮತ್ತು ಸದಸ್ಯರಾಗಿರುವ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಯು ತಮಗೆ ವಹಿಸಲಾದ ಕಾರ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

## ಶಾಲೆಯ ಸೇವಾ ನಿವೃತ ಶಿಕ್ಷಕ ವಿಶ್ವನಾಥ ಸ್ವಾಮಿವರಿಗೆ ಆತ್ಮೀಯ ಸಸ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತಾಲೂಕಿನ ಮುರ್ಕಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶಾಲೆ ಸಿಬ್ಬಂದಿ ಹಾಗೂ ಶಾಲಾ ಸಮಿತಿಯಿಂದ ಶುಕ್ರವಾರ ಆಯೋಜಿಸಿದ್ದ ಸೇವಾ ನಿವೃತ ಶಿಕ್ಷಕ ವಿಶ್ವನಾಥ ಸ್ವಾಮಿ ಅವರ ಬೀಳ್ಕೊಡುಗೆ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಬೀದರ ಡಯಟ್ ಕಾಲೇಜಿನ ಪ್ರಾಧ್ಯಾಪಕ ಲಕ್ಷ್ಮಣ ತುರೆ ರಾಷ್ಟ ಮಾತನಾಡಿ, ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅತಿ ಮಹತ್ವದ್ದು, ತಮ್ಮ ಸಮಯ ಮತ್ತು ದಕ್ಷತೆಯಿಂದ ಪ್ರಯಾಣಿಕವಾಗಿ ಕಾರ್ಯ ನಿಭಾಯಿಸಿದ್ದಾರೆ. ಶಿಕ್ಷಕ ವೃತಿ ಇತರೆ ವೃತಿಗಳಿಂತೆ ಶ್ರೇಷ್ಠವಾದದ್ದು, ಹೀಗಾಗಿ ಹೊಣೆಗಾರಿಕೆ ಅರಿತು ಶಿಕ್ಷಕ ಹುದ್ದೆಗೆ ಘನತೆ ಹೆಚ್ಚಿಸಬೇಕು. ವಿದ್ಯಾರ್ಥಿಗಳ ಸಾಮರ್ಥ ಗುರುತಿಸಿ ಅವರ ಅಂತಶಕ್ತಿ ಅರಳಿಸುವ ಕಾರ್ಯ ಶಿಕ್ಷಕರದ್ದಾಗಿದೆ. ಆ ಹಿನ್ನೆಲೆಯಲ್ಲಿ ಶಾಲೆ ಪ್ರತಿಯೊಬ್ಬ ಶಿಕ್ಷಕರು ತಮ್ಮ ಜವಾಬ್ದಾರಿಯನ್ನು ಸಪರ್ಕವಾಗಿ ನಿಭಾಹಿಸಿದರೆ ವಿದ್ಯಾರ್ಥಿಗಳು ಭಾವಿ ಜೀವನದಲ್ಲಿ ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ಅಂತಹ ಮಹಾನ ವೈಜ್ಞಾನಿಕವಾಗಲು ಸಾಧ್ಯ ಎಂದು ಹೇಳಿದರು. ಹಿರಿಯ ಶಿಕ್ಷಕ ರಾಮ ರಾಮಪುರೆ ಪ್ರಾಸ್ತಾವಿಕ ಮಾತನಾಡಿ, ವಿಶ್ವನಾಥ ಸ್ವಾಮಿ ಅವರು ವಿವಿಧ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಮಾಣಿವಾಗಿ ಮತ್ತು ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರ ಕಾರ್ಯ ಅಸ್ಮರಣೀಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ಅಧ್ಯಕ್ಷ ಮುಖ್ಯ ಗುರು ವಾಗಂಬರ ಗಾಯಕವಾಡ ಹಿಸಿದರು.

ಡಾ. ಅಮರಸಿಂಗ ಠಾ-ಕೂರ, ಅಶ್ವಿನಿ ಸೂರ್ಯವಂಶಿ, ರಿಜ್ವಾನ ಪರ್ವಿನ್ ಜ್ಯೋತಿ ಚಾಂಡೇಶ್ವರಿ, ಲಕ್ಷ್ಮೀ ಬಿರಾದಾರ, ಸಂಬಾಜಿ ಕೊಂಡಿವಾಲೆ, ಶೃತಿ, ಎಸ್‌ಡಿಎಂಸಿ ಅಧ್ಯಕ್ಷ ಜಗನ್ನಾಥ ಹಲಮಂಡಗೆ , ಸಂತೋಷ ಬಾರೋಳೆ, ಕಮಲನಗರ ತಾಲೂಕು ಪ್ರೌಢಶಾಲೆಯ ಶಿಕ್ಷಕರ ಸಂಘದ ತಾಲೂಕುಧ್ಯಕ್ಷ ಸೂರ್ಯಕಾಂತ ಬಿರಾದಾರ, ಕೆಪಿಎಸ್ ಸ್ಕೂಲ್ ಪ್ರಭಾರಿ ಎಚ್‌ಎಂ ಸಂಜೀವಕುಮರ ಡೋಂಗರೆ, ತಾಲೂಕಾಧ್ಯಕ್ಷ ಬಸವರಾಜ ಪಾಟೀಲ್, ಬಾಲಾಜಿ ಗವಳಿ. ಸಚಿನ ಶಿಂಧೆ ಸೇರಿದಂತೆ ತಾಲೂಕಿನ ವಿವಿಧ ಗ್ರಾಮದ ಮುಖ್ಯ ಶಿಕ್ಷಕರು ಗ್ರಾಮದ ಗಣ್ಯ ನಾಗರಿಕ ಮತ್ತು ಶಾಲೆ ಮಕ್ಕಳು ಇದ್ದರು. ಸ್ವಾಗತ ಗೀತೆ ಅರುಣಾ ಫಿರಂಗೆ ಹಾಡಿದರು. ಶಿಕ್ಷಕ ಅರವಿಂದ ಬಿರಾದಾರ ನಿರೂಪಿಸಿದರು. ನಬಿ ವಂದಿಸಿದರು.

# ಶಾಲಾ ಮಕ್ಕಳಿಗಾಗಿ ಪ್ರತಿ ಶುಕ್ರವಾರ ಆಧಾರ್ ಕಾರ್ಡ್ ತೆಗೆಯಲು ತಹಶೀಲ್ದಾರ್ ಪಂಚಾಳ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸಾಥಿ ಯೋಜನೆಯಡಿಯಲ್ಲಿ ಜಿಲ್ಲಾ ನ್ಯಾಯಾಧೀಶರ ಆದೇಶದಂತೆ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲಾ ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಮತ್ತು ಜನನ ಪ್ರಮಾಣ ಪತ್ರ ತೆಗೆದುಕೊಳಲು ತುಂಬಾ ಅಲೆದಾಡುವ ಪರಿಸ್ಥಿತಿ ಇತ್ತು. ಈ ಸಮಸ್ಯೆ ಬಗ್ಗೆ ಹರಿಸಲು ಜಿಲ್ಲಾ ನ್ಯಾಯಾಧೀಶರು ಶಿಕ್ಷಣ ಇಲಾಖೆ ಸೂಚಿಸಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳ ಆದೇಶದಂತೆ ಶನಿವಾರ ಆಧಾರ್ ಕೇಂದ್ರಕ್ಕೆ ಮಕ್ಕಳನ್ನು ಕರೆದು-ಕೊಂಡು ಬಂದಾಗ ಆಧಾರ್ ಕೇಂದ್ರದಲ್ಲಿ ಕಿಕ್ಕಿರಿದು ಜನಸ್ತೋಮ ಕಂಡು ಮಕ್ಕಳಿಗೆ ಆಗುತ್ತಿರುವ ತೊಂದರೆಯನ್ನು ಅರಿತು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್ ತಾಲೂಕ ದಂಡಾಧಿಕಾರಿಗಳಿಗೆ ಕರೆ ಮಾಡಿ ಮಾಹಿತಿ ನೀಡಿದ ತಕ್ಷಣವೇ ಆಧಾರ್ ಕೇಂದ್ರಕ್ಕೆ ತಹಶೀಲ್ದಾರರು ಹಾಗೂ ತಾಲೂಕ ದಂಡಾಧಿಕಾರಿ ಮಂಜುನಾಥ್ ಪಂಚಾಳ ಭೇಟಿ ನೀಡಿ, ಶಾಲಾ ಮಕ್ಕಳಿಗೆ ತೊಂದರೆ ಆಗದಂತೆ ವಾರದ ಪ್ರತಿ ಶುಕ್ರವಾರ ಶಾಲಾ ವಿದ್ಯಾರ್ಥಿಗಳಿಗಾಗಿ ಆಧಾರ್ ಕಾರ್ಡ್ ತೆಗೆಯಲು ಸೂಚಿಸಿದರು. ಈ ಸಂದರ್ಭದಲ್ಲಿ ಸಾವಿತ್ರಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ, ಬಿ.ಆರ್.ಸಿ. ರಾಮಲು, ಸಿ.ಆರ್.ಪಿ. ರಾಮಚಂದ್ರ, ಸರ್ಕಾರಿ ಕನ್ಯಾ ಮಾದರಿ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಸುನೀತಾ ಹಮ್ಮಿಲಪುರಕ್ಕರ್ ಉಪಸ್ಥಿತರಿದ್ದರು.

# ಆಗಸ್ಟ್ 10 ರಂದು ಸಿಂಧನಮಡು ಸಹಜಾನಂದ ಸ್ವಾಮಿಜಿ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಆ, 02, ಪ್ರತಿ ವರ್ಷದಂತೆ ಈ ವರ್ಷವು ಶ್ರೀ ಕ್ಷೇತ್ರ ಸಿಂಧನಮಡು ಗ್ರಾಮದ ಆರಾಧ್ಯ ದೈವ ಶ್ರೀ ಶಿವ ಸಹಜಾನಂದ ಸ್ವಾಮಿ ರವರ ಆರಾಧನೆ ಮಹೋತ್ಸವ ವನ್ನು ಶ್ರೀ ಶಾಲಿವಾಹನ ಶಕೆ 1947 ವಿಶ್ವಾವಸು ನಾಮ ಸಂವತ್ಸರ ಶ್ರಾವಣ ಮಾಸದ ಬಹುಳ ಪ್ರತಿಫದ 01 ರವಿವಾರ



ದಿ, 10-08-2025 ರಂದು ಅತೀ ವಿಜೃಂಭಣೆ ಇಂದ ಜರುಗುವುದು ಆದ ಕಾರಣ ಭಕ್ತಾದಿಗಳು ಈ ಆರಾಧನೆ ಮಹೋತ್ಸವದಲ್ಲಿ ಪಾಲ್ಗೊಂಡು ಗುರುವಿನ ಕೃಪೆಗೆ ಪಾತ್ರರಾಗಬೇಕೆಂದು

ಶ್ರೀ ಮಠದ ಪೂಜ್ಯರಾದ ಶ್ರೀ ಸಂತೋಷ ಸ್ವಾಮಿ ಮಹಾರಾಜರು ಆತ್ಮೀಯತೆಯಿಂದ ಆಹ್ವಾನಿಸಿದ್ದಾರೆ.

# ಪ್ರತೀಕ ಚವ್ಹಾಣ ಪ್ರಕರಣ ಎಸ್ಐಟಿ ತನಿಖೆಯಾಗಲಿ: ರವೀಂದ್ರ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 02 : ಮಗನ ಕಾಮಕ್ಕೆಕುಮ್ಮಕ್ಕುನೀಡುತ್ತಿರುವ ಔರಾದ ಕ್ಷೇತ್ರದ ಹಾಲಿ ಶಾಸಕ ಪ್ರಭು ಚವ್ಹಾಣ ಅವರನ್ನು ಕೂಡಲೇಬಂಧಿಸಬೇಕು.ಹಾಗೂ ಯುವತಿಯರಜೀವನಹಾಳು ಮಾಡಿದ ಪ್ರಭು ಚವ್ಹಾಣ ಅವರ ಪುತ್ರ ಪ್ರತೀಕ ಚವ್ಹಾಣ ಪ್ರಕರಣ ಕುರಿತು ಎಸ್ಐಟಿ ತನಿಖೆಯಾಗಬೇಕೆಂದು ಏಕತಾ ಫೌಂಡೇಶನ್ ಅಧ್ಯಕ್ಷರವೀಂದ್ರ ಸ್ವಾಮಿ ತಿಳಿಸಿದರು. ನಗರದ ಜಿಲ್ಲಾಪತ್ರಿಕಾಭವನದಲ್ಲಿಶನಿವಾರ ನಡೆದಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿದಅವರು ಇತ್ತಿಚಿಗೆ ಮಹಾರಾಷ್ಟ್ರರಾಜ್ಯದಲಾತೂರ ಜಿಲ್ಲೆಯ ನೆರೆಯ ಉದಗೀರ ನಗರದ ಯುವತಿ ಸಂಧ್ಯಾ ರಾಠೋಡ್ ಅವರನ್ನುಕಳೆದ ವರ್ಷ ವಿವಾಹವಾಗುವುದಾಗಿ ನಂಬಿಸಿ ಬೆಂಗಳೂರು,ಶಿರಡಿ ಸೇರಿದಂತೆ ಅನೇಕ ಕಡೆ ಕ-ರೆದೊಯ್ದು ಆಕೆಯ ಶೀಲ ಹಾಳುಮಾಡಿರುವುದು ಅಲ್ಲದೆ ಆಕೆಯೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದನ್ನುಮುರಿದು ಹಾಕಿರುವುದಾಗಿ ಹೇಳಿ ಮೊನ್ನೆಯಷ್ಟೆ ಶಾಸಕ ಪ್ರಭು ಚವ್ಹಾಣ ಅವರ ಜನ್ಮದಿನದ ಹಿಂದಿನ ದಿನ ಕು. ಸಂಧ್ಯಾ ರಾಠೋಡ್ ಅವರ ತಾಯಿ ಮನೆಗೆ ಬಂದಾಗ ಅವರ ಮೇಲೆ ಹಲ್ಲೆ ಮಾಡಿದ್ದೂ ಅಲ್ಲದೆ ತನ್ನ ಪ್ರಭಾವ ಬಳಸಿ ಅವರ ಮೇಲೆಯೇ ಕೇಸ್ ದಾಖಲಿಸಿರುವುದು ನಾಚಿಕೆಗೇಡಿನ ಸಂಗತಿ ಎಂದು ಹರಿಹಾಯ್ದರು. ಈ ಹಿಂದೆ ಔರಾದ ತಾಲೂಕಿನ ಪೂಜಾ ತಂದೆ ಗಂಗಾಧರ ರಾಠೋಡ್ ಎನ್ನುವ ಯುವತಿಯೊಂದಿಗೂ ಪ್ರತೀಕ ಚವ್ಹಾಣ ನಿಶ್ಚಿತಾರ್ಥ ಮಾಡುವುದಾಗಿ ನಂಬಿಸಿ ಅವರಿಂದ 26 ಎಕರೆ ಜಮೀನು ವಶಪಡಿಸಿಕೊಂಡು ಅವರ ಕುಟುಂಬವನ್ನು ಬೀದಿಗೆ ತಂದಿರುತ್ತಾರೆ. ಇನ್ನೋರ್ವ ಯುವತಿಯೊಂದಿಗೂ ಪ್ರತೀಕ ಚವ್ಹಾಣ ತನ್ನ ಕಾಮದಾಹ ತೀರಿಸಿಕೊಂಡದ್ದಲ್ಲದೆ ಇಂತಹ ಅನೇಕ ಕೃತ್ಯ ಎಸಗಿದ್ದಾರೆ. ಮಗನ ಕಾಮದಾಹಕ್ಕೆ ಒಬ್ಬ ತಂದೆಯಾಗಿ ಬುದ್ಧಿ ಹೇಳುವ ಬದಲು ಮಗನ ಪರವಾಗಿ ನಿಂತು ಪತ್ರಿಕಾಗೋಷ್ಠಿ ನಡೆಸಿ ಈ ಪ್ರಕರಣ ಬೇ-ರೆಡೆಕೊಂಡೊಯ್ಯಲು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಹಾಗೂ ಇತರರ ಹೆಸರು ಪ್ರಸ್ತಾಪ ಮಾಡಿ ಈ ಪ್ರಕರಣದಿಂದನುಣುಚಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂದು ಕಿಡಿಕಾರಿದರು. ಕಳೆದ 15 ವರ್ಷಗಳಿಂದಔರಾದತಾಲೂಕಿನಲ್ಲಿ ಕಾನೂನುಸುವ್ಯವಸ್ಥೆ ನೆಲಕಚ್ಚಿದೆ. ಭೂಕಬಳಿಕೆಮುಗಿಲುಮುಟ್ಟಿದೆ. ಅತ್ಯಾಚಾರತಾಂಡವವಾಡುತ್ತಿದೆ. ತನ್ನ ರಾಜಕೀಯ ಪ್ರಭಾವ ಬಳಸಿ ಈ ಮೇಲಿನ ಕೃತ್ಯಗಳಿಗೆ ಕುಮ್ಮಕ್ಕುನೀಡುತ್ತಿರುವ ಪ್ರಭು ಚವ್ಹಾಣ ಓರ್ವ ಭ್ರಷ್ಟಾಚಾರಿ ಎನ್ನುವುದರಲ್ಲಿ ಸಂದೇಹವಿಲ್ಲ. ಏಕತಾ ಫೌಂಡೇಶನ್ ಜೊತೆ ಗುರುತಿಸಿಕೊಂಡಿರುವ ಔರಾದ ಹಾಗೂ ಕಮಲನಗರ ತಾಲೂಕಿನ ಹಲವು ಮುಖಂಡರ ಮೇಲೆ ಸುಳ್ಳು ಮೊಕದ್ದಮೆ ದಾಖಲಿಸಿ ಅವರನ್ನು ಔರಾದ ಹಾಗೂ ಕಮಲನಗರ ತಾಲೂಕಿನಲ್ಲಿ ಭಯದ ವಾತಾವರಣ ನಿರ್ಮಾಣ ಮಾಡಿದ್ದಾರೆ. ವಿಧಾನಸೌಧವನ್ನು ರಾಜ್ಯದ ಆಡಳಿತದ ದೇಗುಲವೆಂದು ಕರೆಯಲ್ಪಡುವ ನಾವುಗಳು ಕೇರಳದ ವಯನಾಡಿನ ಹಾಲಿ ಸಂಸದೆ ಪ್ರಿಯಂಕಾ ಗಾಂಧಿಯವರ ಖಾಸಗಿ ಅಂಗಾಂಗವನ್ನು ಝೂಮ್ ಮಾಡಿ ನೋಡುವ ಮೂಲಕ ಮಗನಿಗಿಂತ ತಾನು ನೂರು ಪಟ್ಟು ಕಾಮುಕ ಎಂಬುದನ್ನು ಪ್ರಭು ಚವ್ಹಾಣ ರುಜುವಾತು ಪಡಿಸಿಕೊಂಡಿದ್ದಾರೆ.ಈವಿಚಾರವಾಗಿ ಇಡೀ ಕಲಾಪ ಒಂದು ದಿವಸ ಮುಂದೂಡಲಾಯಿತು. ಹಾಲಿ ಸಿಎಂ ಸಿದ್ಧರಾಮಯ್ಯನವರನ್ನು ಈ ಹಿಂದೆ ತಾನು ಪಶು ಸಂಗೋಪನ ಸಚಿವರಾಗಿದ್ದಾಗ ಜೈಲಿಗೆ ಹಾಕುವುದಾಗಿ ಬೆದರಿಸಿದ್ದರು. ಪಶುವಿಗಿಂತ ಕಡೆಯಾಗಿ ಗುರುತಿಸುತ್ತಿರುವ ಇವರ ಕರ್ಮಕಾಂಡಕ್ಕೆ ಸಿದ್ಧರಾಮಯ್ಯನವರು ಯಾವ ಶಿಕ್ಷೆ ಕೊಡಬೇಕು? ಎಂಬುದನ್ನು ವಿಚಾರ ಮಾಡಲಿ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದರೂ ಈ ಹಿಂದೆ ಬಿಜೆಪಿ ಸರ್ಕಾರವಿದ್ದರೂ ಇವರ ಪ್ರಭಾವ ಅದೇ ರೀತಿ ಬಳಸುತ್ತಾರೆಂದರೆ ಈ ಸರ್ಕಾರಗಳಿಗೆ ಏನಾಗಿದೆ ಎಂಬುದು ಗೊತ್ತಾಗುತ್ತಿಲ್ಲ. ಸಿದ್ಧರಾಮಯ್ಯನವರ ಸರ್ಕಾರ ಬಹಳನಿಷ್ಠಾವಂತಸರ್ಕಾರವೆಂದು ಹಲವರು ನಂಬಿದ್ದಾರೆ. ಅದನ್ನು ಮನಗಂಡು ಪ್ರಭು ಚವ್ಹಾಣ ಹಾಗೂ ಅವರ ಮಗನ ಮೇಲೆ ಸುಮೊಟೊ ಕೇಸ್ ದಾಖಲಿಸಿ ಬಂಧಿಸಬೇಕು. ಮೂವರು ಯುವತಿಯರ ಜೀವನ ಹಾಳು ಮಾಡಿದ ಪ್ರತೀಕ ಚವ್ಹಾಣ ಅವರ ಈ ಪ್ರಕರಣ ಎಸ್ಐಟಿ ತನಿಖೆಯಾಗಬೇಕು ಎಂದು ತಿಳಿಸಿದ ಅವರು ನೊಂದ ಯುವತಿಯರಿಗೆ ನ್ಯಾಯ ದೊರೆಯುವವರೆಗೂ ಏಕತಾ ಫೌಂಡೇಶನ್ ಅವರ ಬೆನ್ನಿಗೆನಿಲ್ಲಲಿದೆ. ಅತ್ಯಾಚಾರದ ಆರೋಪ ಎದುರಿಸುತ್ತಿರುವ ಪ್ರತೀಕ ಚವ್ಹಾಣ ಅವರ ಪ್ರಕರಣ ನಿಶ್ಚಿತಾರ್ಥಕ್ಕೂ ಮೊದಲು ಬೆಂಗಳೂರಿನ ಹಾಲಿಡೇ ಇನ್ ಹೊಟೇಲ್ ನಲ್ಲಿ ಯುವತಿಯೊಂದಿಗೆ ನಡೆದ ಅತ್ಯಾಚಾರ ಕುರಿತು ಪ್ರಕರಣವನ್ನು ಬೆಂಗಳೂರಿಗೆ ವರ್ಗಾಯಿಸಲಿ ಎಂದು ರವೀಂದ್ರ ಸ್ವಾಮಿ ತಿಳಿಸಿದರು. ತೇಜರಾವ ಮೂಳೆ, ಅಶೋಕ ಪಾಟೀಲ ಹೊಕ್ರಾಣಾ, ಸಂದೀಪ ಪಾಟೀಲ ಹಂಗರಗಾ, ಧನಾಜಿ ಕಾಂಬಳೆ, ಪ್ರಭು ಸ್ವಾಮಿ, ಹಣ್ಮು ಪಾಜಿ, ಪ್ರಕಾಶ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಿದ್ಧಾರೂಢರ ಗ್ರಂಥ ಅಧ್ಯಾತ್ಮಿಕ ಖಜಾನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.2:ಶ್ರೀ ಸಿದ್ಧಾರೂಢರ ಚರಿತ್ರೆಯ ಗ್ರಂಥವು ಅಧ್ಯಾತ್ಮಿಕ ಖಜಾನೆಯಾಗಿದೆ ಎಂದು ಬೀದರಿನ ಗುರುದೇವಾಶ್ರಮ ಮತ್ತು ಬಬಖಡಿ ಆಶ್ರಮದ ಶ್ರೀ ಗಣೇಶಾನಂದ ಮಹಾರಾಜರು ಹೇಳಿದರು.

ತಾಲೂಕಿನ ತಳವಾಡ(ಕೆ) ಗ್ರಾಮದ ಶ್ರೀ ಮಹಾದೇವ ಮಂದಿರದಲ್ಲಿ ಶ್ರಾವಣಮಾಸ ನಿಮಿತ್ಯ ಆಯೋಜಿಸಿದ್ದ ಶ್ರೀ ಸಿದ್ಧಾರೂಢರ ಕಥಾಮೃತ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶ್ರೀ ಸಿದ್ಧಾರೂಢರಚರಿತ್ರಾಮೃತಗ್ರಂಥವು ಅಧ್ಯಾತ್ಮಿಕ ಖಜಾನೆಯಾಗಿದೆ. ಈ ಗ್ರಂಥದ ದೃಷ್ಟಿ ಆತ್ಮಜ್ಞಾನದ ಕಡೆಇದೆ. ತಗತ್ತನ್ನೆಲ್ಲ ತಿಳಿದ ಮನುಷ್ಯತಾನ್ಯಾರೆಂದು ತಿಳಿದಿಲ್ಲ. ಅದನ್ನುತಿಳಿಸಿಕೊಡುವಕಾರ್ಯ ಶ್ರೀ ಸಿದ್ಧಾರೂಢರ ಗ್ರಂಥ ಮಾಡಿಕೊಡುತ್ತದೆ. ನಮ್ಮ ಜ್ಞಾನ ನಮಗೆ ಆಗದ ಹೊರತು ಮುಕ್ತಿ ಸಾಧ್ಯವಿಲ್ಲ. ಹೀಗಾಗಿ ಆತ್ಮ ಜ್ಞಾನ ಮಾಡುವಂತಹ ಗ್ರಂಥಗಳನ್ನೇ ನಾವು ಓದಬೇಕು. ಮನಸ್ಸಿನಲ್ಲಿ ವಿನಯ ಬಂದರೆ ಅಧ್ಯಾತ್ಮದ ಕಡೆ ಮುಖ ಮಾಡಲು ಸಾಧ್ಯ. ಸಣ್ಣವನಾದರೆ ದೇವರು ಸಿಗುತ್ತಾನೆ. ಹೀಗಾಗಿ ಬಸವಣ್ಣನವರು ಎನಗಿಂತ ಕಿರಿಯರಿಲ್ಲ, ಶಿವಶರಣರಿಗಿಂತ ಹಿರಿಯರಿಲ್ಲ ಎಂದು ಹೇಳಿದ್ದು. ಯಾವುದೇ ಸತ್ಕಾರ್ಯಕ್ಕೆ ಭಗವಂತನ ದಯವಿರಬೇಕು. ಮಾಯಾಮಯ ಜಗತ್ತಿನಲ್ಲಿ ಪರಮಾತ್ಮನಸ್ಮರಣೆಕಷ್ಟದಾಯಕ. ಮಾಯಾ ಜಂಜಾಟದಿಂದ ಎದ್ದು ಪರಮಾತ್ಮನ ಕಡೆ ಮುಖ ಮಾಡಬೇಕಾದರೆ ಅನಂತ ಜನ್ಮದ ಪುಣ್ಯಬೇಕು ಎಂದರು. ಮನಸ್ಸಿನಲ್ಲಿರುವ ವಿಕಾರ ಶೂನ್ಯವಾದಂತಹ ಮಗುವಿನ ಅವಸ್ಥೆನಮ್ಮದಾಗಬೇಕು. ವಿನಯ ವಿದ್ದಲ್ಲಿ ಮಧುರತೆ ಬರುತ್ತದೆ. ಗ್ರಂಥಕರ್ತ ಶಿವದಾಸರು ವಿನಯಪೂರ್ವಕವಾಗಿ ಶ್ರೀ ಸಿದ್ಧಾರೂಢರಿಗೆ ಸಂಪೂರ್ಣ ಸಮರ್ಪಕರಾಗಿಗ್ರಂಥರಚಿಸಿದ್ದಾರೆ. ಹೀಗಾಗಿ ಈ ಗ್ರಂಥ ಇಷ್ಟೊಂದು ಮಧುರವಾಗಿದೆ ಎಂದರು.

ಆತ್ಮ ಚೇತನವಾಗಿದೆ. ಶರೀರ ಜಡವಿದೆ. ಚೇತನ ಮೂರ್ತಿ ಸದ್ಗುರುವಿನ ಕೃಪೆ ಯಾದರೆ ಎಲ್ಲವೂ ಸಾಧ್ಯ. ದೇಹದ ಜೊತೆಇದ್ದರೆ

ದು:ಖವಿದೆ. ಆದರೆ ಆತ್ಮದ ಜೊತೆ ಇದ್ದರೆ ಪರಮಸುಖ ವಿರುತ್ತದೆ. ಎಚ್ಚರದಲ್ಲಿರುವ ಸ್ಥೂಲ ಶರೀರ, ಕನಸಿನಲ್ಲಿರುವ ಸೂಕ್ಷ ??ಶರೀರ, ನಿದ್ರೆಯಲ್ಲಿರುವ ಕಾರಣ ಶರೀರಗಳೆಲ್ಲವನ್ನೂ ತಿಳಿಯುವಾತ ಚೇತನ ರೂಪ ಆತ್ಮವಾಗಿದ್ದಾನೆ. ಅವನ ಅರಿವು ಮೂಡಿಸಲು ಶ್ರೀ ಸಿದ್ಧಾರೂಢರ ಗ್ರಂಥ ಪಠಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜಕುಮಾರ ಬಿರಾದಾರ ತೊಗಲೂರ, ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ

ದಾಬಶೆಟ್ಟಿ, ಮಲ್ಲಿಕಾರ್ಜುನ ನುಚ್ಚಾ, ಶಿವಕುಮಾರ ಘಂಟೆ, ರಮೇಶ ಮರೂಕರ, ವಿಜಯಕುಮಾರ, ಮಲ್ಲಿಕಾರ್ಜುನ ರಾಚಣ್ಣ ತಳವಾಡ(ಕೆ) ಇದ್ದರು.

# ಡಾ. ಬಸವಲಿಂಗ ಪಟ್ಟದ್ದೇವರು ಸಾಹಿತ್ಯ ಪ್ರಶಸ್ತಿಗೆ ಪ್ರೊ.ಸಿದ್ದು ಯಾಪಲಪರವಿ ಗದಗ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.2: ಅಮರಾವತಿ ಶಿವಯ್ಯ ಹಿರೇಮಠ ಪ್ರತಿಷ್ಠಾನ ಭಾಲ್ಕಿವತಿಯಿಂದಕೊಡಮಾಡುವ ಪ್ರಸಕ್ತಸಾಲಿನ ಡಾ.ಬಸವಲಿಂಗ ಪಟ್ಟದ್ದೇವರು ಸಾಹಿತ್ಯ ಪ್ರಶಸ್ತಿಗೆ ಗದಗನ ಪ್ರೊ.ಸಿದ್ದು ಯಾಪಲಪರವಿ ಅವರನ್ನು ಆಯ್ಕೆ ಮಾಡಲಾಗಿದೆ. ಈ ಪ್ರಶಸ್ತಿಯನ್ನು ನಾಡೋಜ ಡಾ.ಬಸವಲಿಂಗಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಆ.22 ರಂದು ಸಾಯಂಕಾಲ 6 ಗಂಟೆಗೆ ಪ್ರಶಸ್ತಿ ಪ್ರಧಾನ ಮಾಡಲಾಗುವುದು ಎಂದು ಅಮರಾವತಿ ಶಿವಯ್ಯ ಹಿರೇಮಠ ಪ್ರತಿಷ್ಠಾನದ ಅಧ್ಯಕ್ಷೆ ಡಾ.ಮಕ್ತುಂಬಿ ಎಂ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಶಸ್ತಿಪುರಸ್ಕೃತರ ಪರಿಚಯ:

ಕಲ್ಯಾಣಕರ್ನಾಟಕದ ಕೊಪ್ಪಳ ಜಿಲ್ಲೆಯ ಕಾರಟಗಿಯ ಶರಣೆ ಪಾರಮ್ಮ ಶರಣ ಸಿದ್ಧಬಸಪ್ಪ ಯಾಪಲಪರವಿ ದಂಪತಿಗಳ ಉದರದಲ್ಲಿ ದಿ: 12-04-1965 ರಂದು ಜನಿಸಿದರು. ಕಾರಟಗಿಯ ಸರಕಾರಿ ಶಾಲೆಯಲ್ಲಿ ಓದಿ ಉನ್ನತ ಶಿಕ್ಷಣ ಪಡೆಯಲು ಗದಗಿನ ಜಗದ್ಗುರು ತೋಂಟದಾರ್ಯ ಮಠದ ಡಾ.ತೋಂಟದ ಸಿದ್ಧಲಿಂಗಮಹಾಸ್ವಾಮಿಗಳವರ ಪ್ರೇರಣೆಯಿಂದ ಧಾರವಾಡದ ಕರ್ನಾಟಕಕಾಲೇಜಿಗೆಸೇರಿದರು. ಅಲ್ಲಿ ಸಾಹಿತಿಗಳ ಒಡನಾಟ, ಸಾಹಿತ್ಯದಅಧ್ಯಯನದಮೂಲಕ



ಒಳಗಿರುವಬರಹಗಾರರು. ಇವರು ಎಂ.ಎ.ಇಂಗ್ಲೀಷ ಅಧ್ಯಯನ ಮಾಡಿ ಇಂಗ್ಲೀಷಪ್ರಾಧ್ಯಾಪಕರಾಗಿ ಗದುಗಿನ ಕನಕದಾಸ ಶಿಕ್ಷಣ ಸಮಿತಿಯ ಪದವಿಪೂರ್ವ ಕಾಲೇಜಿನಲ್ಲಿ ಸೇವೆ ಸಲ್ಲಿಸಿದರು. ತಿಮ್ಮಾಪುರದ ಕೆ.ವಿ.ಎಸ್.ಆರ್. ಕಾಲೇಜಿನಲ್ಲಿ ಪ್ರಾಚಾರ್ಯರಾಗಿ ನಿವೃತ್ತರಾಗಿದ್ದಾರೆ. ಇವರು ಓದಿದ್ದು ಇಂಗ್ಲೀಷ, ಕಲಿಸಿದ್ದು ಕನ್ನಡಸಾಹಿತ್ಯವಾದರೆಬರೆದದ್ದು ಮಾತ್ರ ತಾಯಿ ಭಾಷೆ. ನೆಲದ ಮರೆಯ ನಿಧಾನ, ಎತ್ತಣ ಮಾಮರ ಎತ್ತಣ ಕೋಗಿಲೆ, ಒಂದು ಬಿರುಗಾಳಿಯ ಕಥೆ, ಪಿಸುಮಾತುಗಳ ಜುಗಲ್, ಅಸಂಗತ ಬರಹಗಳು, ಮಗಲಾಯಿ ಹುಡುಗನ ಫಾರೆನ್ ಟೂರ್, ಡೋಂಟ್ ಬಿ ಹ್ಯಾಪಿ, ಕಾಲ್ದಾರಿಯ ಕನರಿಕೆ, ಹಗಲಿನಲ್ಲಿಯೇಸಂಜೆಯಾಯಿತು. ದಣಿವರಿಯದದಾರಿ, ಬೀಸೋಗಾಳಿ ಮುಂತಾದ ಕೃತಿಗಳನ್ನು ಬರೆದು ಕನ್ನಡ ಸಾಹಿತ್ಯ ಶ್ರೀಮಂತಗೊಳಿಸಿದ್ದಾರೆ. ಕವನ, ಚರಿತ್ರೆ, ಪ್ರವಾಸ ವರ್ಣನೆ, ವೈಚಾರಿಕಲೇಖನ, ಚಿಂತನೆಗಳು ಮುಂತಾದ ಕ್ಷೇತ್ರಗಳಲ್ಲಿ ಸಾಹಿತ್ಯ ರಚಿಸಿದ್ದಾರೆ. ಅಷ್ಟೇ ಅಲ್ಲದೆ, ಸಾಮಾಜಿಕ ಮಾಧ್ಯಮಗಳನ್ನು ಬಳಸಿಕೊಂಡು ನಿರಂತರ ಬರವಣಿಗೆಮತ್ತುಉಪನ್ಯಾಸಗಳು ನೀಡುತ್ತಿದ್ದಾರೆ. ವಿಶೇಷವಾಗಿ ಬಸವಾದಿ ಶರಣರ ಚಿಂತನೆಗಳು ಜನಮನಕ್ಕೆಮುಟ್ಟಿಸುವದಿಶೆಯಲ್ಲಿ ವಚನ ಟಿ.ವಿ. ವ್ಯವಸ್ಥಾಪಕ ನಿರ್ದೇಶಕರಾಗಿ ಅವರು ಮಾಡುತ್ತಿರುವ ಕಾರ್ಯಗಳು ಅಪೂರ್ವವಾಗಿವೆ. ನಾಡಿನ ಅನೇಕ ಶೈಕ್ಷಣಿಕ ಮತ್ತು ಸಾಹಿತ್ಯ ಸಂಸ್ಥೆಗಳ ಜವಾಬ್ದಾರಿ ವಹಿಸಿಕೊಂಡು ಅರ್ಥಪೂರ್ಣ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಸಮಗ್ರಸೇವೆಯನ್ನುಗುರುತಿಸಿ, ಪ್ರಸಕ್ತ ಸಾಲಿನ ಪೂಜ್ಯ ಶ್ರೀ ಡಾ.ಬಸವಲಿಂಗಪಟ್ಟದ್ದೇವರು ಸಾಹಿತ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

# ಭಕ್ತಿ ಭಾವದಿಂದ ಲಿಂಗ ಪೂಜೆ ಮಾಡಿ:ಮಾತಾಜಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಅ.2: ಪ್ರವಚನ ಕೇಳುವುದು ಮತ್ತು ಪಾಲ್ಗೊಳ್ಳುವುದು ಅತ್ಯಂತ ಸಂಭ್ರಮ ತಂದು ಕೊಡುತ್ತದೆ ಎಂದು ಸಂಗಮೇಶ್ವರ ಎಸ್. ಮುರ್ಕೆ ಅವರು ನುಡಿದರು.

ಮುಧೋಳ ಗ್ರಾಮದ ಗುರು ಬಸವೇಶ್ವರ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ ತಿಂಗಳ ಅನುಭವ ಮಂಟಪ ಕಾರ್ಯಕ್ರಮ -7 ಹಾಗೂ ಶ್ರಾವಣ ಮಾಸದ ನಿಮಿತ್ಯವಾಗಿ ಮುಧೋಳ (ಬಿ) ಗ್ರಾಮದಲ್ಲಿ ವಿಶ್ವಧರ್ಮ ಪ್ರವಚನದ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು. ಹಡಪದ ಅಪ್ಪಣ್ಣನವರು ನಿಷ್ಠಾವಂತ ಯೋಗ ಸಾಧಕರಾಗಿ ಪರಮಜ್ಞಾನಿಗಳಾಗಿ ಬದುಕಿ ಬಾಳಿದವರು ಎಂದು ಹೇಳಿದರು. 12 ನೇ ಶತಮಾನದ ಶರಣ-ರಾದ ಹಡಪದ ಅಪ್ಪಣ್ಣನವರ ಕುರಿತು ಕೆಲವು ಸುಂದರ ವ್ಯಾಖ್ಯಾನಗಳೊಂದಿಗೆ ಎಲ್ಲರಿಗೂ ತಿಳಿಯುವ ಧಾಟಿಯಲ್ಲಿ ತಿಳಿಸಿಕೊಟ್ಟರು.

ಗ್ರಾಮೀಣ ಭಾಗದಲ್ಲಿ ಗುರುಬಸವೇಶ್ವರ ಅನುಭವ ಮಂಟಪ ನಿರ್ಮಿಸಿ ಇಂತಹ ಅಧ್ಯಾತ್ಮಿಕ ಮತ್ತು ಸಾಮಾಜಿಕ ಕಾರ್ಯ ಮುಧೋಳ(ಬಿ) ದಲ್ಲಿ ನಡೆಯುತ್ತಿರುವದು ಅಪರೂಪದ ಸಂಗತಿ ಎಂದು ಸಂಗಮೇಶ್ವರ ಎಸ್ ಮುರ್ಕೆ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ದಿನನಿತ್ಯದಂತೆ ಪರಮ ಪೂಜ್ಯ ಮಾತಾಜಿ ಅವರು ಪ್ರವಚನ ಉದ್ದೇಶಿಸಿ ಇಷ್ಟ ಲಿಂಗದ ಬಗ್ಗೆ ತಿಳಿಸಿದ್ದರು ಆಡಂಬರದ ಭಕ್ತಿ ಭಾವನೆಯನ್ನು ಖಂಡಿಸಿ, ಸರಳ ರೀತಿಯಲ್ಲಿ ಲಿಂಗವು ಅಂಗದ ಮೇಲೆ ಇಟ್ಟು ಬ್ರಹ್ಮ ಸ್ವರೂಪಿಗಳನ್ನುನೆನೆಯುವುದೇ ಲಿಂಗ ಪೂಜೆ ಎಂದರು.

ಈ ದಿನದ ಭಕ್ತಿ ಸೇವೆಯ ದಾಸೋಹಿಗಳಾದ ಶರಣೆ ಶರಣಮ್ಮ

ಹಾಗೂ ಶರಣರಾದ ರವೀಂದ್ರ ಕಲಬುರ್ಗಿ ತೋರಣಾ ಇವರಿಗೆ ಪೂಜ್ಯ ಮಾತಾಜಿಯವರು ಸನ್ಮಾನಿಸಿದರು. ಸಂಗಮೇಶ್ವರ ಎಸ್ ಮುರ್ಕೆ ಅವರಿಗೆ ಶಿವಕುಮಾರ್ ಕುಂಬಾರ ಅವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗುರು ಬಸವೇಶ್ವರ

ಅನುಭವಮಂಟಪದಅಧ್ಯಕ್ಷರಾದ ನಾಗಯ್ಯ ಸ್ವಾಮಿ ಹಾಗೂ ಉಪಾಧ್ಯಕ್ಷರಾದ ಕುಂಬಾರ ಸರ್ ಹಾಗೂ ಸಧ್ಯಸರು ಮತ್ತು ಅಣ್ಣನ ಬಳಗದವರು ಅಕ್ಕನ ಬಳಗದವರು ಉಪಸ್ಥಿದ್ದರು.

ಕಾರ್ಯಕ್ರಮದ ಮೊದಲು ಶರಣ ನಾಗನಾಥ್ ಶಂಕು ಸ್ವಾಗತ ಕೊರಿದರು.

ಕಾರ್ಯಕ್ರಮವು ಮಂಗಳ ದೊಂದಿಗೆಮುಕ್ತಾಯಗೊಂಡಿತು.

# ಒಂದೇ ಕಟ್ಟಡದಲ್ಲಿ ಎರಡ್ಮೂರು ಶಾಲೆಗಳು: ಕ್ರಮಕ್ಕೆ ಆಗ್ರಹ

ಕಲಬುರಗಿ: ಆ.2: ಒಂದೇ ಕಟ್ಟಡದಲ್ಲಿ ಎರಡು, ಮೂರು ಶಾಲೆಗಳು ನಡೆಯುತ್ತಿದ್ದು, ಅಂತಹ ಶಾಲೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಸಂದೀಪ್ ಪಿ. ಭರಣಿ ಅವರು ಒತ್ತಾಯಿಸಿದರು.



ಶನಿವಾರ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದ ಅವರು, ಜಿಲ್ಲೆಯಲ್ಲಿ ಒಂದೇ ಕಟ್ಟಡದಲ್ಲಿ 2-3 ಶಾಲೆಗಳನ್ನು ಅಕ್ರಮವಾಗಿ ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಹಲವಾರು ಕಡೆ ಒಂದೇ ಕಟ್ಟಡದಲ್ಲಿ 2-3 ಶಾಲೆಗಳನ್ನು ನಡೆಸುತ್ತಿರುವ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಈಗಾಗಲೇ ಹಲವಾರು ಬಾರಿ ಇಲಾಖೆಗೆ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ. ಶಿವಶಕ್ತಿನಗರ, ತಾಜಸುಲ್ತಾನಪೂರ್ ರಸ್ತೆಯಲ್ಲಿರುವ ನಿಸರ್ಗ ಆಂಗ್ಲ ಮಾಧ್ಯಮ ಶಾಲೆ ಇದ್ದು, ಇದೇ ಕಟ್ಟಡದಲ್ಲಿ ನವಪ್ರಜ್ಞಾ ಶಾಲೆ ಹಾಗೂ ಒಂದು ನಿಸರ್ಗ ಬಿಸಿಎ, ಬಿಕಾಂ ಕಾಲೇಜನ್ನು ಅಕ್ರಮವಾಗಿ ನಡೆಸುತ್ತಿದ್ದಾರೆ. ಆದರೆ ಇಲ್ಲಿ ಯಾವುದೇ ಆಟದ ಮೈದಾನ ಸಹ ಇಲ್ಲ ಎಂದು ಅವರು ನಿದರ್ಶನಗಳನ್ನು ಒದಗಿಸಿದರು.

ಕಾಟನ್ ಮಾರ್ಕೆಟ್ ಹತ್ತಿರದ ಕೃಷ್ಣನಗರದಲ್ಲಿ ಶ್ರೀ ಬಾಲಾಜಿ ಆಂಗ್ಲ ಮಾಧ್ಯಮ ಶಾಲೆ ಮತ್ತು ದೇವಾಜಿನಾಯಕ ಕನ್ನಡ ಹಿರಿಯ ಪ್ರಾಥಮಿಕ ಶಾಲೆ (ಅನುದಾನಿತ) ಶಾಲೆಗಳನ್ನು ಅಕ್ರಮವಾಗಿ ನಡೆಸುತ್ತಿದ್ದಾರೆ. ಇಲ್ಲಿಯೂ ಸಹ ಯಾವುದೇ ಆಟದ ಮೈದಾನ ಸಹ ಇಲ್ಲ. ಬಸವ ಕನ್ನಡ ಕಾನ್ವೆಂಟ್ ಶಾಲೆ, ಚೇತನ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಇನ್ನೂ ಹಲವಾರು ಶಾಲೆಗಳಲ್ಲಿ ಮಕ್ಕಳಿಗೆ ಆಟವಾಡಲು ಯಾವುದೇ ಆಟದ ಮೈದಾನಗಳು ಇಲ್ಲ ಎಂದು ಅವರು ವಿವರಿಸಿದರು.

ಅಕ್ರಮ ಶಾಲೆಗಳ ಸಂಪೂರ್ಣ ಮಾಹಿತಿ ಹಾಗೂ ಒಂದೇ ಕಟ್ಟಡದಲ್ಲಿ 2 ಸಹ ಕೇಳಲಾಗಿತ್ತು. ಆದರೆ ಸದರಿ ಶಾಲೆಯ ಆಡಳಿತ ಮಂಡಳಿಯವರು ಅಥವಾ ಇಲಾಖೆಯವರು ಈ ಕುರಿತು ಯಾವುದೇ ಮಾಹಿತಿಯನ್ನು ನೀಡಿಲ್ಲ. ಅಂದರೆ ಸದರಿ ಶಾಲೆಗಳು ಅಧಿಕೃತ ಅನುಮತಿಗಳನ್ನು ಪಡೆದು ನಡೆಸುತ್ತಿಲ್ಲ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಇಂತಹ ಶಾಲೆಗಳ ಪರವಾನಿಗೆ ಕೂಡಲೇ ರದ್ದುಗೊಳಿಸಬೇಕು ಎಂದು ಅವರು ಒತ್ತಾಯಿಸಿದರು.

ನಗರದಲ್ಲಿ ಒಂದು ಪರವಾನಿಗೆಯನ್ನು ಪಡೆದು ಅದರ ಅಡಿ ಅಕ್ರಮವಾಗಿ ಶಾಲೆಗಳನ್ನು ನಡೆಸುತ್ತಿದ್ದಾರೆ. ಶಾಲೆಯನ್ನು ನಡೆಸಲು ಅನುಮತಿ ಪಡೆಯಲು ಶಾಲೆಯಲ್ಲಿ ಕಡ್ಡಾಯವಾಗಿ ಮಕ್ಕಳಿಗೆ ಆಟವಾಡಲು ಮೈದಾನ ತಪ್ಪದೇ ಹೊಂದಿರಬೇಕು. ಆದಾಗ್ಯೂ, ಹಲವಾರು ಶಾಲೆಗಳಲ್ಲಿ ಯಾವುದೇ ಆಟದ ಮೈದಾನಗಳು ಇಲ್ಲ ಎಂದು ಅವರು ದೂರಿದರು.

2025ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಫಲಿತಾಂಶದಲ್ಲಿ ರಾಜ್ಯದಲ್ಲಿಯೇ ಕೊನೆಯ ಸ್ಥಾನ ಪಡೆದಿದ್ದು, ಇದಕ್ಕೆ ಶಿಕ್ಷಣ ಇಲಾಖೆಯೇ ನೇರವಾಗಿ ಕಾರಣವಾಗಿದ್ದು, ಅಕ್ರಮವಾಗಿ ಶಾಲೆಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು ಸಹ ಇದ-ಕ್ಕೆ ಹೊಣೆಗಾರರಾಗಿರುತ್ತವೆ ಎಂದು ಅವರು ಆಕ್ರೋಶ ಹೊರಹಾಕಿದರು.

ನಗರದ ಶಾಲೆಗಳ ನವೀಕರಣ ಮುಗಿದರೂ ಸಹ ಹಿಂದಿನ ದಿನಾಂಕಗಳನ್ನು ನಮೂದಿಸಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಅಕ್ರಮ ಮತ್ತು ಕಾನೂನು ಬಾಹಿರವಾಗಿ ನವೀಕರಣ ಮಾಡಿಕೊಡುತ್ತಿದ್ದಾರೆ. ಕನ್ನಡ ಮಾಧ್ಯಮ ಅನುಮತಿ ಪಡೆದು ಇಂಗ್ಲೀಷ್ ಮಾಧ್ಯಮ ಶಾಲೆಗಳನ್ನು ನಡೆಸುತ್ತಿದ್ದಾರೆ ಎಂದು ದೂರಿದ ಅವರು 2020ರಿಂದ 2025ರವರೆಗೆ ಇಂಗ್ಲೀಷ್ ಮಾಧ್ಯಮಕ್ಕೆ ಯಾವುದೇ ದಾಖಲಾತಿಗಳು ಬರದೇ ಇರುವ ಕಾರಣ ಯಾವುದೇ ಪರವಾನಿಗೆಯನ್ನು ಪಡೆಯದೇ ನೇರವಾಗಿ ಇಂಗ್ಲೀಷ್ ಮಾಧ್ಯಮದ ತರಗತಿಗಳನ್ನು ಮುಂದುವರೆಸುತ್ತಿದ್ದಾರೆ ಎಂದು ಆರೋಪಿಸಿದರು.

ಜಿಲ್ಲೆಯ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ನುರಿತ ಶಿಕ್ಷಕರು ಇಲ್ಲ. ಪಾಲಕರಿಂದ ಲಕ್ಷಾಂತರ ರೂ.ಗಳ ಡೊನೇಷನ್ ಹಣ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳು 9ನೇ 10ನೇ ಉತ್ತೀರ್ಣರಾದ ಶಿಕ್ಷಕರನ್ನು ಕಡಿಮೆ ವೇತನ ನೀಡಿ ದುಡಿಸಿಕೊಳ್ಳುತ್ತಿದ್ದಾರೆ. ಇದ-ರಿಂದಾಗಿ ವಿದ್ಯಾರ್ಥಿಗಳ ಶಿಕ್ಷಣ ಗುಣಮಟ್ಟ ಕಡಿಮೆಯಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಈಗಾಗಲೇ ಶಾಲೆಗಳು ಇರುವ ಅಕ್ಕಪಕ್ಕದ 500 ಮೀಟರ್ ಅಂತರಗಳಲ್ಲಿ ಯಾವುದೇ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡಬಾರದು ಎಂದು ನಿಯಮವಿರುತ್ತದೆ. ಆದರೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಣದ ಆಸೆಗಾಗಿ ಅಕ್ರಮವಾಗಿ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡುತ್ತಿದ್ದಾರೆ.

# ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ರಾಜ್ಯ ಅಸಂಘಟಿತಕಾರ್ಮಿಕರಸಾಮಾಜಿಕ ಭದ್ರತಾ ಮಂಡಳಿಯಿಂದ ನೀಡಲಾಗುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯು 91 ಅಸಂಘಟಿತ ವಲಯದ ಕಾರ್ಮಿಕರಿಗೆ ಅನುಕೂಲವಾಗಲಿದೆ ಎಂದು ಕಾರ್ಮಿಕ ಸಚಿವರಾದ ಸಂತೋಷ ಎಸ್. ಲಾಡ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಮಧುಶ್ರೀಗಾರ್ಡನ್‌ನಲ್ಲಿ ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತಕಾರ್ಮಿಕರಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಕೊಪ್ಪಳ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತ ದೇಶದಲ್ಲಿ ಶೇ 98ರಷ್ಟು ಜನರು ಅಸಂಘಟಿತ ಕಾರ್ಮಿಕರಿದ್ದು, ನಮ್ಮ ರಾಜ್ಯದಲ್ಲಿ ಶೇ. 83 ರಿಂದ 85ರಷ್ಟು ಜನರು ಈ ಅಸಂಘಟಿತ ಕಾರ್ಮಿಕರ ವಲಯದಲ್ಲಿದ್ದಾರೆ. ಸುಮಾರು 1 ಕೋಟಿ 60 ಲಕ್ಷ ಅಸಂಘಟಿತ ಕಾರ್ಮಿಕರು ನಮ್ಮಲ್ಲಿ ನೋಂದಾಯಿಸಿಕೊಂಡಿದ್ದಾರೆ. ಕಟ್ಟಡ ಮತ್ತು ಇತರೆ ನಿರ್ಮಾಣ ಮಂಡಳಿಯಡಿ ಬರುವ ಕಾರ್ಮಿಕರಿಗೆ ನೀಡುವ ಸೌಲಭ್ಯಗಳನ್ನು ಅಸಂಘಟಿತ ವಲಯದ ಕಾರ್ಮಿಕರಿಗೂ ನೀಡುವಂತೆ ಬಹಳಷ್ಟು ಜನರು ಕೇಳಿಕೊಂಡಿದ್ದರು. ಆದರೆ, ಮಂಡಳಿಯಲ್ಲಿ ನೋಂದಾಯಿತರಾದವರಿಗೆ ಮಾತ್ರ ಸೌಲಭ್ಯಗಳನ್ನು ನೀಡಲು ಅವಕಾಶವಿದೆ. ಅಸಂಘಟಿತ ವಲಯದ ಕಾರ್ಮಿಕರಿಗೆ ಅನುಕೂಲ ಮಾಡಿಕೊಡಬೇಕೆಂಬ ಉದ್ದೇಶದಿಂದ 91 ವಲಯಗಳ ಕಾರ್ಮಿಕರಿಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ಜಾರಿಗೆ ತರಲಾಗಿದೆ. ಅಸಂಘಟಿತ ಕಾರ್ಮಿಕರಿಗೆ ಇರುವ ಯೋಜನೆಗಳು ಮತ್ತು ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕೆಂಬ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಕಾರ್ಮಿಕ ಇಲಾಖೆಯ ಮೂಲಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಆಯೋಜನೆ ಮಾಡಲಾಗುತ್ತಿದೆ ಎಂದರು.

ಆನ್‌ಲೈನ್ ಆ್ಯಪ್ ಮೂಲಕ ಅಮೇಜಾನ್, ಫ್ಲಿಪ್‌ಕಾರ್ಡ್, ಸ್ವಿಗ್ಗಿ, ಜೂಮ್ಯಾಟೋಗಂತಹ ಕಂಪನಿಗಳಲ್ಲಿ ನೋಂದಾಯಿಸಿಕೊಂಡು ಟ್ರಾನ್ಸ್ಪೋರ್ಟ್ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರವು ವಿಶೇಷವಾದ ಮಸೂದೆಯನ್ನು ತಂದಿದ್ದು, ಕರ್ನಾಟಕ ರಾಜ್ಯದಲ್ಲಿ ಇಂತಹ ಸಮರ್ಪಕವಾದ ಬಿಲ್ ಜಾರಿಗೆ ತಂದಿರುವುದು ದೇಶದಲ್ಲಿ ಎಲ್ಲಿಯೂ ಇಲ್ಲ. ಇದರ ಜೊತೆಗೆ ಸಿನಿ ಬಿಲ್‌ನ್ನು ತಂದಿದ್ದು, ಸಿನಿಮಾ ಕ್ಷೇತ್ರದಲ್ಲಿ ದುಡಿಯುವ ಮೇಕಪ್ ಆರ್ಟಿಸ್ಟ್, ಡ್ಯಾನ್ಸರ್, ಪೋಷಕ ಕಲಾವಿದರು, ಪೌರಾಣಿಕ ನಾಟಕಗಳು ಮತ್ತು ಗ್ರಾಮ ಮಟ್ಟದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ತೊಡಗಿರುವ ಹಲವಾರು ಕಲಾವಿದರಿಗೆ ಇದರಿಂದ ಅನುಕೂಲವಾಗಲಿದೆ. ಖಾಸಗಿ ಬಸ್, ಲಾರಿ, ಆಟೋ, ಟಂಟಂ ಹೀಗೆ ಯಾವುದೇ ಸರಕು ಮತ್ತು ಸೇವಾ ಕಂಪನಿಗಳಲ್ಲಿ ವಾಹನ ಚಾಲಕರು, ಕ್ಲೀನರ್‌ಗಳು ಮತ್ತು ಇತರೆ ಕಾರ್ಮಿಕರ ಜೀವಹಾನಿಗೆ 5 ಲಕ್ಷದವರೆಗೆ ಪರಿಹಾರ ನೀಡಲಾಗುವುದು. ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಜಿಲ್ಲೆಯ ರಸ್ತೆ ಅಪಘಾತಗಳ ವಲಯಗಳನ್ನು ಗುರುತಿಸಿ ಅಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದರು.

ಯಾವುದೇ ಸಣ್ಣ-ಸಣ್ಣ ಕಂಪನಿಗಳು ಎಸ್.ಸಿ ಮತ್ತು ಎಸ್.ಟಿ ಅಭ್ಯರ್ಥಿಗಳಿಗೆ ಕೆಲಸ ನೀಡಿದರೆ, ಎರಡು ವರ್ಷದವರೆಗೆ ಅಭ್ಯರ್ಥಿಗಳ ಇ.ಎಸ್.ಐ



ಮತ್ತು ಪಿ.ಎಫ್ ಮೊತ್ತವನ್ನು ಕಾರ್ಮಿಕ ಇಲಾಖೆಯಿಂದ ಆಶಾದೀಪ ಯೋಜನೆಯಡಿ ಸಂಬಂಧಿಸಿದ ಕಂಪನಿಗಳಿಗೆ ಮರುಪಾವತಿಸಲಾಗುತ್ತಿದ್ದು, ಇದರಿಂದ ಸ್ಥಳೀಯರಿಗೆ ಉದ್ಯೋಗ ಸಿಗುತ್ತದೆ ಮತ್ತು ಕಂಪನಿಗಳಿಗೂ ಅನುಕೂಲವಾಗುತ್ತದೆ. ಈ ಯೋಜನೆಯ ಬಗ್ಗೆ ಸಂಬಂಧಿಸಿದ ಕಾರ್ಖಾನೆಗಳಿಗೆ ಅಧಿಕಾರಿಗಳು ಮಾಹಿತಿ ನೀಡಬೇಕು. ಹೊರಗುತ್ತಿಗೆ ಆಧಾರದಲ್ಲಿ ವಿವಿಧ ಇಲಾಖೆಗಳಲ್ಲಿ ಕೆಲಸ ಮಾಡುವ ನೌಕರರಿಗೆ ರಾಜ್ಯಾದ್ಯಂತ ಏಜೆನ್ಸಿ ಬದಲಿಗೆ ಸೋಸೈಟಿ ಮೂಲಕವೇ ವೇತನ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಜಂಟಿ ಕಾರ್ಮಿಕ ಆಯುಕ್ತರಾದ ಡಾ. ಎಸ್.ಬಿ. ರವಿಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿ, ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡಗಳನ್ನು ವಿತರಿಸುವುದರ ಜೊತೆಗೆ ಅವರಿಗೆ ಅರಿವು ಮೂಡಿಸುವ ಕಾರ್ಯಕ್ರಮ ರಾಜ್ಯದಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ. 1 ಕೋಟಿಗೂ ಅಧಿಕ ಅಸಂಘಟಿತ ಕಾರ್ಮಿಕರು ನಮ್ಮ ರಾಜ್ಯದಲ್ಲಿ ಇದ್ದಾರೆ. ಹಮಾಲರು. ಮಡಿವಾಳರು. ಟೈಲರಗಳು. ಚಿಂದಿ ಆಯುವವರು. ಅಲೆಮಾರಿ ಹಾಗೂ ಅರೆ ಅಲೆಮಾರಿಗಳು. ಕ್ಷೌರಿಕರು. ಬೀದಿ ಬದಿ ವ್ಯಾಪಾರಿಗಳು. ಮೆಕ್ಯಾನಿಕಗಳು. ಕಟ್ಟಡ ಕಾರ್ಮಿಕರು. ಅಕ್ಕಸಾಲಿರು. ಡೆಲಿವರಿ ಬಾಯ ಸೇರಿದಂತೆ 91 ವರ್ಗದ ಅಸಂಘಟಿತ ಕಾರ್ಮಿಕರು ಇದರಲ್ಲಿ ಬರುತ್ತಾರೆ. ಅಸಂಘಟಿತ ಕಾರ್ಮಿಕರು ಅಪಘಾತದಲ್ಲಿ ಮರಣ ಹೊಂದಿದಾಗ ಅವರಿಗೆ 5 ಲಕ್ಷ ರೂ ಪರಿಹಾರ ನೀಡಲಾಗುತ್ತದೆ. ಮಹಿಳೆಯರಿಗೆ ಹೆರಿಗೆ ಭತ್ಯ. ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ಶಿಪ್ ಸೇರಿದಂತೆ ಇತರೆ ಹಲವಾರು ಯೋಜನೆಗಳಿದ್ದು, ತೆರೆಯಮರೆಯಲ್ಲಿ ದುಡಿಯುತ್ತಿರುವ ಲಕ್ಷ್ಯಾಂತರ ಅಸಂಘಟಿತ ಕಾರ್ಮಿಕರನ್ನು ಗುರುತಿಸುವ ಕೆಲಸವನ್ನು ಕಾರ್ಮಿಕ ಇಲಾಖೆಯಿಂದ ಮಾಡುತ್ತಿದ್ದೇವೆ ಎಂದು ಹೇಳಿದರು.


ಸಂವಿಧಾನ ಪೀಠಿಕೆ ವಾಚನ ಮಾಡುವ ಮೂಲಕ ಕಾರ್ಯಕ್ರಮ ಪ್ರಾರಂಭಿಸಲಾಯಿತು. 91ಕ್ಕು ಹೆಚ್ಚಿನ ಅಸಂಘಟಿತ ಕಾರ್ಮಿಕರಿಗೆ ಸಚಿವರು ಸ್ಮಾರ್ಟ್ ಕಾರ್ಡ್ ವಿತರಣೆ ಮಾಡಿದ ನಂತರ ಆಶಾದೀಪ ಯೋಜನೆ ಅಡಿ ಎಸ್.ಸಿ.ಎಸ್.ಟಿ ಉದ್ಯೋಗಿಗಳ ಇ.ಎಸ್.ಐ & ಇ.ಪಿಫ್ ಮೊತ್ತ ಮರುಪಾವತಿ ಚೆಕ್‌ಗಳ ವಿತರಣೆ ಹಾಗೂ ಖಾಸಗಿ ವಾಣಿಜ್ಯ ಚಾಲಕರ ಮಕ್ಕಳಿಗೆ 10 ಸಾವಿರ ರೂ. ಚೆಕ್‌ಗಳನ್ನು ವಿತರಣೆ ಮಾಡಿದರು. ವಿವಿಧ ಸ್ಟಾಲ್‌ಗಳ ಮೂಲಕ ಕಾರ್ಮಿಕ ಇಲಾಖೆಯ ಯೋಜನೆಗಳ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತ, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀ ನಿವಾಸ, ಡಾ. ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷರಾದ ಮುಂಡರಗಿ ನಾಗರಾಜ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಕಾರ್ಮಿಕ ಇಲಾಖೆ ಕಲಬುರಗಿ ಪ್ರಾದೇಶಿಕ ಆಯುಕ್ತರಾದ ಡಾ. ವೆಂಕಟೇಶ ಶಿಂಧಿಹಟ್ಟಿ, ಕಲಬುರಗಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತರಾದ ಮಹ್ಮದ್ ಬಶೀರ್ ಅನ್ಸಾರಿ, ಕೊಪ್ಪಳ ಉಪವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ, ಕೊಪ್ಪಳ ನಗರಸಭೆ ಸದಸ್ಯರಾದ ಗುರುರಾಜ ಹಲಗೇರಿ ಮತ್ತು ಮುತ್ತುರಾಜ ಕುಷ್ಟಗಿ, ಕೊಪ್ಪಳ ಉಪ ವಿಭಾಗದ ಕಾರ್ಮಿಕ ಅಧಿಕಾರಿಗಳಾದ ಸುಧಾ ಗರಗ, ಕಾರ್ಮಿಕ ನಿರೀಕ್ಷಕರಾದ ಕೊಪ್ಪಳ ವೃತ್ತದ ಮಂಜುಳಾ ವಿಶ್ವನಾಥ, ಗಂಗಾವತಿ ವೃತ್ತದ ಎಂ.ಅಶೋಕ ಹಾಗೂ ಕುಷ್ಟಗಿ ವೃತ್ತದ ನಿವೇದಿತಾ, ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು, ಜಿಲ್ಲೆಯ ವಿವಿಧ ಕಡೆಯಿಂದ ಆಗಮಿಸಿದ ಅಸಂಘಟಿತ ಕಾರ್ಮಿಕರು ಹಾಗೂ ಕಾರ್ಮಿಕ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

## ನಿಗಮದ ಅಧ್ಯಕ್ಷರ ಪ್ರವಾಸ

ಕಲಬುರಗಿ:ಆ.02-'ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಮತಕ್ಷೇತ್ರದ ಶಾಸಕರಾದ ಕನೀಜ್ ಫಾತೀಮಾ ಅವರು ಇದೇ ಆಗಸ್ಟ್ 3 ಹಾಗೂ 4 ರಂದು ಕಲಬುರಗಿಯಲ್ಲಿ ಸಾರ್ವಜನಿಕರ ಕುಂದು-ಕೊರತೆ ವಿಚಾರಣೆ ನಡೆಸಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

## ಬಸ್ ನಿಲ್ದಾಣದಲ್ಲಿ ಹೆಚ್ಚುತ್ತಿರುವ ಕಳ್ಳತನ ಪ್ರಕರಣಗಳು ಕೂಡಲೆ ಪಿಟಿ ಜೆಡ್ ಕ್ಯಾಮೆರಾ ಬಳಸಲು ಮನವಿ.



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಪಟ್ಟಣದ ಬಸ್ ನಿಲ್ದಾಣ ಶಾಲಾ ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು, ದೂರದ ಊರಿಗೆ ಹೋಗುವ ಪ್ರಯಾಣಿಕ-ರಿಂದ ಸದಾ ತುಂಬಿರುತ್ತದೆ, ಬಸ್ ನಿಲ್ದಾಣದಲ್ಲಿ ಕ್ಯಾಮರಾಗಳು ಅಳವಡಿಕೆಯಾಗಿದ್ದರೂ ಸಹ ಯಾವುದೇ ಪ್ರಯೋಜನವಿಲ್ಲ ಎನ್ನುವಂತಾಗಿದೆ ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಕಳ್ಳತನ ಪ್ರಕರಣಗಳು ಕ್ಯಾಮೆರಾ ಮುಖಾಂತರ ಪರಿಶೀಲನೆ ಮಾಡಿದಾಗ ಯಾವುದೇ ಸ್ಪಷ್ಟ ಚಿತ್ರ ಅಲ್ಲಿ ಮೂಡದೆ ಇರುವ ಕಾರಣ ಕಳ್ಳರ ಪತ್ತೆ ಹಚ್ಚಲು ಯಾವುದೇ ಪ್ರಯೋಜನವಾಗುತ್ತಿಲ್ಲ ಗುಣಮಟ್ಟದ ಕ್ಯಾಮರಾ ಬಳಕೆ ಮಾಡುವುದರಿಂದ ಕಳ್ಳರ ಗುರುತು ಸಿಗಲು ಕಾರಣವಾಗುತ್ತದೆ ಇದರಿಂದ ಪೊಲೀಸ್ ಇಲಾಖೆಯವರಿಗೂ ಸಹಿತ ಪತ್ತೆ ಹಚ್ಚಿ ಪ್ರಯಾಣಿಕರು ಕಳೆದುಕೊಂಡ ಹಣ ಅಥವಾ ಅವರ ವಸ್ತುಗಳನ್ನು ಹಿಂದಿರುಗಿಸಲು ಸಹಾಯವಾಗುವ ಕಾರಣಕ್ಕಾಗಿ ಪಿಟಿ ಜೆಡ್ ಕ್ಯಾಮೆರಾ ಬಳಕೆ ಮಾಡಲು ಮತ್ತು ಬೆಳಿಗ್ಗೆ ಸಾಯಂಕಾಲದ ಸಮಯದಲ್ಲಿ ವಿದ್ಯಾರ್ಥಿಗಳು ಶಾಲಾ ಕಾಲೇಜು ಬರಲು ಮತ್ತು ಹೋಗಲು ಅವರ ಅನುಪಾತಕ್ಕೆ ತಕ್ಕ ಹಾಗೆ ಬಸ್‌ಗಳು ಇಲ್ಲದಿರುವ ಕಾರಣದಿಂದಾಗಿ ಜೆಣಟಿಜಜಜುಟಿಜಜತು ಬಿದ್ದು ಬರುವ ವಿದ್ಯಾರ್ಥಿಗಳ ಸುರಕ್ಷತೆ ಹಿತದೃಷ್ಟಿಯಿಂದ ಪ್ರತ್ಯೇಕ ಬಸ್ ಕಲ್ಪಿಸಲು ಬಸ್ ಘಟಕದ ವ್ಯವಸ್ಥಾಪಕರ ಪರವಾಗಿ ಘಟಕದ ಸಿಬ್ಬಂದಿ ಮೇಲ್ವಿಚಾರಕರಾದ ರಾಮರೆಡ್ಡಿ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಿನ ಅಧ್ಯಕ್ಷ ಶರಣ ಬಸ್ಸಪ್ಪ ಎಲ್ಹೇರಿ ಮನವಿ ನೀಡಿ ಶೀಘ್ರವೆ ಕಾರ್ಯರೂಪಕ್ಕೆ ತರಲು ತಿಳಿಸಿದರು.

ಗುರುಮಠಕಲ್ ತಾಲೂಕಿನ ಗೌರವ ಅಧ್ಯಕ್ಷರಾದ ಭೀಮಶಂಕರ್ ಪಡಿಗೆ, ಮೌನೇಶ್ ಮಾದವರ್, ಶರಣು ಮೇಧಾ, ಮಹೇಶ್ ಅಳಿಗೆರಾ, ಬನ್ನು ಕಾಳಬೆಳಗುಂದಿ, ವೆಂಕಟೇಶ್ ಚಿಟಿಕೆನಪಲ್ಲಿ, ಜಗದೀಶ್ ನಸಲ್ ವಾಯಿ, ಕಾಶೀನಾಥ್ ರಾಥೋಡ್, ದೇವಾಸಿಂಗ್, ತಾಯಪ್ಪ, ವೆಂಕಟೇಶ್ ಬೋಯಿನ, ಅನಿಲ್ ಹಿಮ್ಲಾಪೂರ್ ಉಪಸ್ಥಿತರಿದ್ದರು.

## ಜವಾಹರ ನವೋದಯ ವಿದ್ಯಾಲಯದಲ್ಲಿ ಪಿಯುಸಿಗೆ ಪ್ರವೇಶ ಆರಂಭ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 02-ಪ್ರಸ್ತುತ ಶೈಕ್ಷಣಿಕ ವರ್ಷ 2025-26 ನೇ ಸಾಲಿಗೆ ಪಿಯುಸಿ ಪ್ರಥಮ ವರ್ಷದ ವಿಜ್ಞಾನ ವಿಷಯದ ತರಗತಿಗೆ ಪ್ರವೇಶ ಪ್ರಕ್ರಿಯೆ ಆರಂಭವಾಗಿದೆ. ರಾಯಚೂರ ಜಿಲ್ಲೆಯ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ಆಗಸ್ಟ್ 10ರ ಬುಧವಾರ ಸಂಜೆ 4.30 ರೊಳಗೆ ವಿದ್ಯಾಲಯಕ್ಕೆ ಬಂದು ಪ್ರವೇಶ ಪಡೆಯಬಹುದು. ಪ್ರವೇಶಕ್ಕೆ ಯಾವುದೇ ಶುಲ್ಕ ಇರುವದಿಲ್ಲ. ವಿದ್ಯಾಲಯಕ್ಕೆ ಬರುವಾಗ ವಿದ್ಯಾರ್ಥಿಗಳು 10ನೇ ತರಗತಿಯ ಅಂಕಪಟ್ಟಿ, ಆಧಾರ್ ಕಾರ್ಡ್ ಮತ್ತು ವಿದ್ಯಾರ್ಥಿಯ ಪೋಟೊಗಳು ತೆಗೆದುಕೊಂಡು ಬಂದು ಪ್ರವೇಶ ಪಡೆಯಲು ತಿಳಿಸಲಾಗಿದೆ.

ಅಥವಾ https://docs.google.com/forms/d/e/1FAIpQLSe3FxTplR_g9sH-WaarhwdY6d2PUQOVM9n-HqS2WKud4B8P72RA/viewform?usp=header ಲಿಂಕ್ ಬಳಸಿ ಆನ್‌ಲೈನದಲ್ಲಿ ಕೂಡ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಪ್ರಾಂಶುಪಾಲರು, ಜವಾಹರ ನವೋದಯ ವಿದ್ಯಾಲಯ ಮುದಗಲ್, ಲಿಂಗಸೂರ ತಾಲೂಕು, ರಾಯಚೂರ ಜಿಲ್ಲೆ ಇವರ ಮೊಬೈಲ್ 7204109046 /9703473495 ಗೆ ಸಂಪರ್ಕಿಸಬಹುದು.

ಆಯ್ಕೆ ಪ್ರಕ್ರಿಯೆಯು 10ನೇ ತರಗತಿಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ನಡೆಯುತ್ತಿದೆ ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಕಟಣೆ ತಿಳಿಸಿದೆ.

## ಅಕ್ರಮವಾಗಿ ಅನ್ಯ ರಾಜ್ಯದ ರಸಗೊಬ್ಬರ ಮಾರಾಟ ಮಾಡುವವರಿಗೆ ಕಡಿವಾಣ ಹಾಕಲು ಕರ್ನಾಟಕ ರಕ್ಷಣಾ ವೇದಿಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ತಾಲೂಕಿನ ತಹಶೀಲ್ದಾರ್‌ಗಳಾದ ಶಾಂತಗೌಡ ಬೀರಾದರ ಅವರಿಗೆ ತಮ್ಮ ಕಚೇರಿ ಸಿಬ್ಬಂದಿ ಪಹಣಿ, ಇನ್ನಿತರ ಕೆಲಸದ ನಿಮಿತ್ಯ ಬಂದ ಸಾರ್ವಜನಿಕರಿಗೆ ಸರಿಯಾದ ಪ್ರತಿಕ್ರಿಯೆ ನೀಡದಿರುವ ಹಾಗೂ ಸಭೆ, ಕಾರ್ಯಕ್ರಮಗಳ ಕುರಿತು ಸರಿಯಾದ ಮಾಹಿತಿ ಸಂಘಟನೆ ಹಾಗೂ ಪತ್ರಕರ್ತರಿಗೆ ನೀಡದೆ ಶಿಷ್ಟಾಚಾರದ ಉಲ್ಲಂಘನೆ ಮಾಡಿರುವುದರ ಕುರಿತಾಗಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಿನ ಅಧ್ಯಕ್ಷ ಶರಣಬಸ್ಸಪ್ಪ ಎಲ್ಹೇರಿ ತಿಳಿಸಿದರು. ಅದಕ್ಕೆ ಉತ್ತರವಾಗಿ ತಹಶೀಲ್ದಾರ್ ಅವರು ಇದು ಮತ್ತೆ ಪುನರಾವರ್ತನೆ ಆಗದಂತೆ ಸಿಬ್ಬಂದಿಗೆ ಎಚ್ಚರಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ವರ್ತಿಸಲು ಸೂಚನೆ ನೀಡಿದರು.

ರೈತರಿಗೆ ಯೂರಿಯಾ, ರಸಗೊಬ್ಬರ ಕೊರತೆ ಸೇರಿದಂತೆ ನಿಗದಿತ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುವವರ ವಿರುದ್ಧ ಕ್ರಮ ತೆಗೆದು ಕೊಳ್ಳಲು ಹಾಗೂ ಗ್ರಾಮೀಣ ಭಾಗದಲ್ಲಿ ತೆಲಂಗಾಣದಿಂದ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರ ತಂದು ಅಕ್ರಮ ಮಾರಾಟ ಮಾಡುತ್ತಿರುವವರ ವಿರುದ್ಧ ಕ್ರಮ ತೆಗೆದುಕೊಳ್ಳಲು ಮನವಿ ನೀಡಿದರು.

ಗುರುಮಠಕಲ್ ತಾಲೂಕಿನ ಗೌರವ ಅಧ್ಯಕ್ಷರಾದ ಭೀಮಶಂಕರ್ ಪಡಿಗೆ, ಮೌನೇಶ್ ಮಾದವರ್, ಶರಣು ಮೇಧಾ, ಮಹೇಶ್ ಅಳಿಗೆರಾ, ಬನ್ನು ಕಾಳಬೆಳಗುಂದಿ, ವೆಂಕಟೇಶ್ ಚಿಟಿಕೆನಪಲ್ಲಿ, ಜಗದೀಶ್ ನಸಲ್ ವಾಯಿ, ಕಾಶೀನಾಥ್ ರಾಥೋಡ್, ದೇವಾಸಿಂಗ್, ತಾಯಪ್ಪ, ವೆಂಕಟೇಶ್ ಬೋಯಿನ, ಅನಿಲ್ ಹಿಮ್ಲಾಪೂರ್ ಉಪಸ್ಥಿತರಿದ್ದರು.

ವರ್ಷ ಕಳೆದರು ನೀಡದ ಮಾಹಿತಿ, ಪುರಸಭೆ ಅಧಿಕಾರಿಗಳ ಕಾರ್ಯಕ್ಷಮತೆ ಕುರಿತು ಪ್ರಶ್ನೆ?

## ಮಾಹಿತಿ ನೀಡಿ ಇಲ್ಲವಾದರೆ ಪ್ರತಿಭಟನೆ ಪರಿಣಾಮಕ್ಕೆ ಸಿದ್ದರಾಗಿ – ಶರಣ ಬಸ್ಸಪ್ಪ ಎಲ್ಹೇರಿ.




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ: ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಪರ ಸಂಘಟನೆಗಳ ಒಕ್ಕೂಟ ಗುರುಮಠಕಲ್ ತಾಲೂಕು ಘಟಕದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಇಂದು ಗುರುಮಠಕಲ್ ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳಾದ ಶ್ರೀಮತಿ ಭಾರತಿ ದಂಡೊತಿ ಅವರಿಗೆ ಮನವಿ ಸಹಿತ ಪ್ರತಿಭಟನೆಯ ಎಚ್ಚರಿಕೆ ನೀಡಿದ್ದಾರೆ.

**ಗುರುಮಠಕಲ್:**

ಪಟ್ಟಣದಲ್ಲಿರುವ ಉದ್ಯನವನ ಹಾಗೂ ಅರಕೇರಾ ನೀರಿನ ಘಟಕದ ಕುರಿತು ಪುರಸಭೆ ಕಾರ್ಯಾಲಯಕ್ಕೆ ಮಾಹಿತಿ ಹಕ್ಕು ಕಾಯ್ದೆ 2005ರ ನಿಯಮ 6 (1) ಮತ್ತು 7 (1) ಅಡಿಯಲ್ಲಿ ಕಳೆದ ವರ್ಷ 26-07-2024ರಂದು ಮಾಹಿತಿ ಕೇಳಲಾಗಿದ್ದು, ಇಲ್ಲಿಯವರೆಗೆ ಸುಮಾರು ಒಂದು ವರ್ಷ ಕಳೆದರು ಮಾಹಿತಿ ನೀಡದಿರುವ ಪುರಸಭೆಯ ಮುಖ್ಯಾಧಿಕಾರಿಗಳಿಗೆ ಮೂರು ದಿನಗಳ ಒಳಗಾಗಿ ಒಟ್ಟು ಉದ್ಯಾನವನಗಳ ಸಂಖ್ಯೆ ಹಾಗೂ 2006 ರಿಂದ 2025ರ ವರೆಗೆ ಉದ್ಯಾನವನಗಳಿಗೆ ಬಂದಂತಹ ಹಣದ ವಿವರ ಮತ್ತು ಗುರುಮಠಕಲ್ ಪುರಸಭೆಯಲ್ಲಿ 2006 ರಿಂದ ಅರಕೇರಾ ವಾಟರ್ ಪಿಲ್ಟರ್ ಮತ್ತು ಪುರಸಭೆಯಲ್ಲಿ ಇಲ್ಲಿಯವರೆಗೆ ಖರೀದಿ ಮಾಡಿರುವ ಬ್ಲಿಚಿಂಗ್ ಪೌಡರ್‌ನ ವಿವರ ಮತ್ತು ಗುತ್ತಿಗೆದಾರರ ವಿವರ ನೀಡಲು ಮನವಿ ನೀಡಿ, ಒಂದು ವೇಳೆ ಮಾಹಿತಿ ನೀಡದಿದ್ದರೆ ಪುರಸಭೆ ಕಾರ್ಯಾಲಯದ ಮುಂಬಾಗದಲ್ಲಿ ಪ್ರತಿಭಟನೆ ಕೂಡುವದಾಗಿ ಕರವೇ ತಾಲೂಕಿನ ಅಧ್ಯಕ್ಷ ಶರಣಬಸ್ಸಪ್ಪ ಎಲ್ಹೇರಿ ಎಚ್ಚರಿಕೆ ನೀಡಿದರು.

ಗುರುಮಠಕಲ್ ತಾಲೂಕಿನ ಗೌರವ ಅಧ್ಯಕ್ಷರಾದ ಭೀಮಶಂಕರ್ ಪಡಿಗೆ, ಮೌನೇಶ್ ಮಾದವರ್, ಶರಣು ಮೇಧಾ, ಮಹೇಶ್ ಅಳಿಗೆರಾ, ಬನ್ನು ಕಾಳಬೆಳಗುಂದಿ, ವೆಂಕಟೇಶ್ ಚಿಟಿಕೆನಪಲ್ಲಿ, ಜಗದೀಶ್ ನಸಲ್ ವಾಯಿ, ಕಾಶೀನಾಥ್ ರಾಥೋಡ್, ದೇವಾಸಿಂಗ್, ತಾಯಪ್ಪ, ವೆಂಕಟೇಶ್ ಬೋಯಿನ, ಅನಿಲ್ ಹಿಮ್ಲಾಪೂರ್ ಉಪಸ್ಥಿತರಿದ್ದರು.

## ರಾಜೀ ಸಂಧಾನದ ಮೂಲಕ ಪ್ರಕರಣಗಳ ಇತ್ಯರ್ಥಕ್ಕೆ ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ 90 ದಿನಗಳ ವಿಶೇಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:2-ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಬರುವ ಅಕ್ಟೋಬರ್ 7 ವರೆಗೆ ರಾಜಿ ಸಂಧಾನದ ಮೂಲಕ ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ 90 ದಿನಗಳ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಶ್ರೀ ಮರಳು ಸಿದ್ದಾರಾಧ್ಯ ಅವರು ಹೇಳಿದರು.

ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ಪತ್ರಿಕಾ ಗೋಷ್ಠಿ ನಡೆಸಿದ ಅವರು ಈ ಅಭಿಯಾನ ಅಂಗವಾಗಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗುತ್ತದೆ ಎಂದು ಹೇಳಿದರು.




ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ ನ್ಯಾಯಾಧಿಕರಣದ ಪ್ರಕರಣಗಳು, ಚೆಕ್ಕು ಸಾಮಾನ್ಯದ ಪ್ರಕರಣಗಳು, ವಾಣಿಜ್ಯ ಪ್ರಕರಣಗಳು, ಸೇವಾ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಯ ಪ್ರಕರಣಗಳು, ಗ್ರಾಹಕ ವ್ಯಾಜ್ಯ ಪ್ರಕರಣಗಳು, ಡಿ ಆರ್ ಟಿ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು ಹಾಗೂ ಇತ-ರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಇದು ಸುವರ್ಣಾವಕಾಶವಾಗಿದ್ದು, ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳುವಂತೆ ಅವರು ತಿಳಿಸಿದರು.

ಸಾರ್ವಜನಿಕರು ತಮ್ಮ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಇಚ್ಚೀಸಿದಲ್ಲಿ ನ್ಯಾಯಾಲಯಗಳಿಂದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿ ಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆಸಿಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಛಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಾಗೂ ತಾಲೂಕು ನ್ಯಾಯಾಲಯಗಳು ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು.

ರಾಷ್ಟ್ರೀಯ ಲೋಕ ಅದಾಲತ್ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ರಾಜ್ಯಾದ್ಯಂತ ಹಾಗೂ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಆವರಣಗಳಲ್ಲಿ ಬರುವ ಸೆಪ್ಟೆಂಬರ್ 13ರಂದು ರಾಷ್ಟ್ರೀಯ ಲೋಕ ಅದಾಲತ್‌ಗಳನ್ನು ಆಯೋಜಿಸಿದ್ದು, ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವರು ತಿಳಿಸಿದ್ದಾರೆ.

ಅಂದು ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧಿಕರಣದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಕಾರ್ಮಿಕ ವಿವಾದಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕೈಗಾರಿಕೆ ಕಾರ್ಮಿಕರ ವೇತನ ಕ್ಕೆ ಸಂಬಂಧಿಸಿದ ಕ್ಲೇಮುಗಳು, ಭೂಸ್ವಾಧೀನ ಪ್ರಕರಣಗಳು, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿ ನ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ,

ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧಿಕರಣದ ಪ್ರಕರಣಗಳು, ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ವೈವಾಹಿಕ/ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಛೇಧನೆಯನ್ನು) ಹೊರತುಪಡಿಸಿ, ಚೆಕ್ಕು ಅಮಾನ್ಯದ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

ಹೆಚ್ಚಿನ ಮಾಹಿತಿಗಾಗಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಟೋಲ್ ಫ್ರೀ ಸಂಖ್ಯೆ 1800-425-90900 ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು,

ಯಾದಗಿರಿ ಜಿಲ್ಲೆ ನ್ಯಾಯಾಲಯದ ಆವರಣ, ದೂ ಸಂ 08473253243 ಗೆ ಸಂಪರ್ಕಿಸಬಹುದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಅವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸಾಂಸ್ಕೃತಿಕ ತರಬೇತಿಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ: ಗಾದಿಲಿಂಗಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.02–ಶಾಸ್ತ್ರೀಯನೃತ್ಯ ಕಲೆಯು ಕ್ರಿಯಾತ್ಮಕದಿಂದಲೇ ಹುಟ್ಟುತ್ತದೆ. ಈ ಕ್ರಿಯೆ ಸಕ್ರಿಯವಾಗಿ ನಡೆದುಕೊಂಡು ಹೋದರೆ ಈ ಕಲೆಯು ನಿರಂತರವಾಗಿರುತ್ತದೆ. ವಿದ್ಯಾರ್ಥಿಗಳು ಓದಿನ ಜೊತೆಗೆ ಸಾಂಸ್ಕೃತಿಕ ತರಬೇತಿಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಎಂದು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಗಾದಿಲಿಂಗಪ್ಪ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕೌಲ್ ಬಜಾರ್ ನ ಪರಿಶಿಷ್ಟ ವರ್ಗಗಳ ಸರ್ಕಾರಿ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ "ಶಾಸ್ತ್ರೀಯನೃತ್ಯ"ಕಲಿಕಾ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೋತ್ಸಾಹದಾಯಕ ಕಲೆಗಳಲ್ಲಿ ಒಂದಾದ ಶಾಸ್ತ್ರೀಯ ನೃತ್ಯವು ಜೀವನಕ್ಕೆ ಉತ್ಸಾಹ ತುಂಬುತ್ತದೆ.



ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ವಿವಿಧ ಕಲೆಗಳಲ್ಲಿ ಯಾವುದೇ ಭಯವಿಲ್ಲದೆ ಭಾಗವಹಿಸಿ ತಮ್ಮದೇ ಆದ ಛಾಪು ಮೂಡಿಸಬೇಕು ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳ ಪ್ರತಿಭೆಗಳನ್ನು ಹೊರಹಾಕಲು ಇಂತಹ ಕಲಿಕಾ ತರಬೇತಿಯನ್ನು ಆಯೋಜಿಸಲಾಗಿದೆ. ಇಂತಹ ಅವಕಾಶಗಳನ್ನು ಉಪಯೋಗಿಸಿಕೊಂಡು ವಿದ್ಯಾರ್ಥಿಗಳು ಮುಖ್ಯವಾಹಿನಿಗೆ ಬರಬೇಕು. ಈ ತರಬೇತಿಯು 6 ತಿಂಗಳು ಕಾಲ ನಡೆಯಲಿದ್ದು, ವಾರಕ್ಕೆ ಮೂರು ದಿನದಂತೆ 2 ಗಂಟೆಗಳ ಅವಧಿ ತರಬೇತಿ ನೀಡಲಾಗುತ್ತದೆ. ಆಸಕ್ತಿಹೊಂದಿದ ಎಲ್ಲ ವಿದ್ಯಾರ್ಥಿಗಳು ತರಬೇತಿಯಲ್ಲಿ ಪಾಲ್ಗೊಂಡು ತಮ್ಮಲ್ಲಿರುವ ಕಲೆಯನ್ನು ಪ್ರದರ್ಶಿಸಬಹುದು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಬಳಿಕ ವಿದ್ಯಾರ್ಥಿನಿಯರಿಗೆ "ಶಾಸ್ತ್ರೀಯ ನೃತ್ಯ" ಕಲಿಕಾ ತರಬೇತಿ ನಡೆಸಲಾಯಿತು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರಾದ ಲಕ್ಷ್ಮೀ ಪ್ರಸನ್ನ, ನೃತ್ಯ ತರಬೇತಿ ಕಲಾವಿದರಾದ ಡಿ.ಇಂದ್ರಾಣಿ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಸರ್ಕಾರಿ ಆದರ್ಶ ವಿದ್ಯಾಲಯ: 6ನೇ ತರಗತಿಯಲ್ಲಿ

# ಖಾಲಿಯಿರುವ ಸೀಟ್‌ಗಳ ದಾಖಲಾತಿ ಕೌನ್ಸೆಲಿಂಗ್ ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.02–ನಗರದ ಈದ್ಗಾ ರಸ್ತೆಯ ಹಿರಾಳ್ ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಪ್ರಸ್ತಕ ಸಾಲಿಗೆ 6ನೇ ತರಗತಿಯಲ್ಲಿ ಖಾಲಿಯಿರುವ ಸೀಟ್ ಗಳಿಗಾಗಿ ದಾಖಲಾತಿಸಿಕೊಳ್ಳಲು ಅರ್ಹ ಮೆರಿಟ್ ಮೂಲಕ ವಿದ್ಯಾರ್ಥಿಗಳನ್ನು ಕೌನ್ಸೆಲಿಂಗ್ ಮಾಡಿ ದಾಖಲಾತಿ ಮಾಡಿಕೊಳ್ಳಲಾಗುವುದು ಎಂದು ಶಾಲೆಯ ಕುರುಗೋಡು ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

ಆ.11 ಮತ್ತು 12 ರಂದು ಸಾಮಾನ್ಯವರ್ಗದ ವಿದ್ಯಾರ್ಥಿಗಳ ದಾಖಲಾತಿ ಹಾಗೂ ಆ.13 ಮತ್ತು 14 ರಂದು ಮೀಸಲಾತಿ ವರ್ಗದ ದಾಖಲಾತಿ ಪ್ರಕ್ರಿಯೆ ನಡೆಯಲಿದೆ.

ಈಗಾಗಲೇ 1:30 ರ ಅನುಪಾತದ ಅರ್ಹ ಮಕ್ಕಳ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ.

*ಬೇಕಾದ ದಾಖಲೆ:*

ಪ್ರವೇಶಾತಿ ಅರ್ಜಿ, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಬ್ಯಾಂಕ್‌ಪಾಸ್ ಪುಸ್ತಕ, ತಂದೆ–ತಾಯಿಯ ಆಧಾರ್ ಕಾರ್ಡ್ ಪ್ರತಿ, ಅಂಗವಿಕಲ ವಿದ್ಯಾರ್ಥಿಯಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ, ವಿದ್ಯಾರ್ಥಿಯ 4 ಭಾವಚಿತ್ರ, ಬೇರೆ ತಾಲ್ಲೂಕಿನ ವಿದ್ಯಾರ್ಥಿಗಳಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, 5ನೇ ತರಗತಿಯ ಮೂಲ ಅಂಕಪಟ್ಟಿಯ 2 ಜೆರಾಕ್ಸ್, ಪ್ರವೇಶ ಪರೀಕ್ಷೆಯ ಹಾಲ್ ಟಿಕೆಟ್, ವಿದ್ಯಾರ್ಥಿಯ ಆರೋಗ್ಯ ಕಾರ್ಡ್, ಪಾಲಕರ ಮೊಬೈಲ್ ಸಂಖ್ಯೆ, ಪಡಿತರ ಪುಸ್ತಕದ ಜೆ–ರಾಕ್ಸ್ ಪ್ರತಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾಭ್ಯಾಸದ ಜೊತೆಗೆ ಕಲೆಗಳಲ್ಲಿ ಭಾಗವಹಿಸಿ: ರಾಜೇಶ್ವರಿ.ಬಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.02–ಜಾನಪದ ಸಂಗೀತ ಕಾರ್ಯಕ್ರಮಗಳು ಕಲಾವಿದರಿಗೆ ವೇದಿಕೆಯನ್ನು ಕಲ್ಪಿಸುತ್ತವೆ. ವಿದ್ಯಾರ್ಥಿಗಳು ಇಂತಹ ಅವಕಾಶಗಳನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜೇಶ್ವರಿ.ಬಿ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕೋಟೆಯ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯರಿಗೆ "ಜಾನಪದ ಸಂಗೀತ" ಕಲಿಕಾ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಜೀವನಾಡಿಯಂತಿರುವ ದೇಶಿಯ ಕಲೆ ಉಳುವಿಗೆ ಹಾಗೂ ನಮ್ಮ ಸಂಸ್ಕೃತಿಯನ್ನು ಬಿಂಬಿಸುವ ಮೂಲಜಾನಪದಸಂಗೀತ ಇತ್ತೀಚೆಗೆ ನೇಪಥ್ಯಕ್ಕೆ ಸರಿಯುತ್ತಿರುವುದು ಕಳವಳಕಾರಿಯಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಇಂತಹ ತರಬೇತಿ ಕಾರ್ಯಕ್ರಮಗಳನ್ನು ನೀಡಿ ಪ್ರೋತ್ಸಾಹಿಸುತ್ತದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಕಲೆಗಳಲ್ಲಿ ಭಾಗವಹಿಸಿ ನಿಮ್ಮನ್ನು ನೀವು ಗುರುತಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಪ್ರಾಸ್ತಾವಿಕವಾಗಿ ಮಾತನಾಡಿ, ನಶಿಸಿಹೋಗುತ್ತಿರುವ ಕಲೆಗಳನ್ನು ಮರುಕಳಿಸಲು ಈ ಕಲಿಕಾ ತರಬೇತಿಯನ್ನು ಆಯೋಜಿಸಲಾಗಿದೆ .ಈ ತರಬೇತಿಯು 6 ತಿಂಗಳು ಕಾಲ ನಡೆಯಲಿದ್ದು, ವಾರಕ್ಕೆ ಮೂರು ದಿನದಂತೆ 2 ಗಂಟೆಗಳ ಅವಧಿ ತರಬೇತಿ ನೀಡಲಾಗುತ್ತದೆ. ಆಸಕ್ತಿಹೊಂದಿದ ವಿದ್ಯಾರ್ಥಿಗಳು ತರಬೇತಿಯಲ್ಲಿ ಭಾಗವಹಿಸಿ ತಮ್ಮಲ್ಲಿರುವ ಕಲೆಯನ್ನು ಪ್ರದರ್ಶಿಸಬಹುದು ಎಂದು ಕರೆ ನೀಡಿದರು.

ಚಿಗುರು ಕಲಾ ತಂಡದ ಜಾನಪದ ಗಾಯಕ ಹಾಗೂ ತರಬೇತುದಾರ ಎಸ್.ಎಂ.ಹುಲುಗಪ್ಪ ಅವರು ಮಾತನಾಡಿ, ಶಿಕ್ಷಣದಲ್ಲಿ ಸಂಗೀತ ಕಲಿಸಿದಂತೆ, ಜಾನಪದ ಕಲೆಯನ್ನು ಒಂದು ವಿಷಯವನ್ನಾಗಿ ಪ್ರಾಥಮಿಕ ಹಂತದಿಂದಲೇ ಬೋಧನೆ ಮಾಡಬೇಕು. ಮರೆಯಾಗುತ್ತಿರುವ ಜಾನಪದ ಕಲೆ ಮುಂದಿನ ಪೀಳಿಗೆಯವರಿಗೆ ಪರಿಚಯವಾಗಲಿದೆ. ಜಾನಪದ ಸಂಗೀತದ ಮೂಲಕ ಜಾನಪದ ಕಲೆಗಳನ್ನು ಉತ್ತುಂಗಕ್ಕೆ ತೆಗೆದು–ಕೊಂಡು ಹೋಗಲು ವಿದ್ಯಾವಂತರ ಪಾತ್ರ ಅಮೋಘವಾಗಿದೆ ಎಂದರು.

ಬಳಿಕ ಚಿಗುರು ಕಲಾ ತಂಡದಿಂದ ವಿದ್ಯಾರ್ಥಿನಿಯರಿಗೆ "ಜಾನಪದ ಸಂಗೀತ" ಕಲಿಕಾ ತರಬೇತಿ ನಡೆಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರಾದ ಉಷಾ ಕುಮಾರಿ, ನಿಲಯ ಪಾಲಕರಾದ ಸ್ವಪ್ನ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಪರಿಸರ ಕಾಳಜಿ ಮೂಡಿಸಲು ಸುಂದರ್ ಲಾಲ್ ಬಹುಗುಣ ಹಸಿರು ಪಡೆ ಉದ್ಘಾಟನೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಬೆಟಗೇರಿಯ ಸರಕಾರಿ ಪ್ರೌಢ ಶಾಲೆಯಲ್ಲಿ ಸುಂದರ್ ಲಾಲ್ ಬಹುಗುಣ ಹಸಿರು ಪಡೆ ಯ ಉದ್ಘಾಟನಾ ಸಮಾರಂಭ ಮತ್ತು ತಾಯಿಯ ಹೆಸರಲ್ಲಿ ಒಂದು ಗಿಡ ಅಭಿಯಾನದ ಪ್ರಯುಕ್ತ ವಿದ್ಯಾರ್ಥಿಗಳಿಗೆ ಗಿಡಗಳನ್ನು ದತ್ತು ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸಸಿಗೆ ನೀರುನಣಿಸುವ ಮೂಲಕ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಾಲೂಕ ಪಂಚಾಯತ್ ಮಾಜಿ ಸದಸ್ಯರಾದ ವೀರೇಶ ಸಜ್ಜನ್ ಇಂದಿನ ಸಂಧರ್ಭದಲ್ಲಿ ಪರಿಸರ ಸಂರಕ್ಷಣೆ ಮಾಡುವುದು ಅತೀ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಶಾಲೆಯಲ್ಲಿ ಸುಂದರ್ ಲಾಲ್ ಬಹುಗುಣ ಅವರ ಹೆಸರಿನಲ್ಲಿ ಹಸಿರು ಪಡೆ ಸ್ಥಾಪಿಸಿ ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸುತ್ತಿರುವ ಶಿಕ್ಷಕರ ಕಾರ್ಯ ಮೆಚ್ಚುವಂತಹದು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾರ್ಯಕ್ರಮದ ಸಂಚಾಲಕ ಮತ್ತು ಭೌತವಿಜ್ಞಾನ ಶಿಕ್ಷಕ ಮರ್ದಾನಲಿ ಗಡಾದ ಮಾನವ ಅನ್ನ ನೀರು ಇಲ್ಲದೆ ಕೆಲವು ದಿನ ಬದುಕಬಹುದು ಆದರೆ ಗಾಳಿ ಇಲ್ಲದೆ ಒಂದು ಕ್ಷಣವೂ ಬದುಕಲು ಸಾಧ್ಯವಿಲ್ಲ. ಪರಿಸರ ಸಂರಕ್ಷಣೆ ಮಾಡುವಲ್ಲಿ ಯುವಜನರ ಮತ್ತು ವಿದ್ಯಾರ್ಥಿಗಳ ಪಾತ್ರ ಅತಿ ಮುಖ್ಯವಾಗಿದೆ. ನಮ್ಮ ಸೈನಿಕರು ದೇಶದ ಗಡಿಯನ್ನು ಕಾದು ನಮ್ಮನ್ನು ರಕ್ಷಣೆ ಮಾಡುವಂತೆ ನಮ್ಮ ಶಾಲೆಯ ವಿದ್ಯಾರ್ಥಿಗಳು ಸೈನಿಕರಂತೆ ಗಿಡಗಳನ್ನು ರಕ್ಷಣೆ ಮಾಡಬೇಕು, ಚಿಪ್ಕೋ ಚಳುವಳಿಯ ರೂವಾರಿ ಖ್ಯಾತ ಪರಿಸರವಾದಿ ಸುಂದರ್ ಲಾಲ್ ಬಹುಗುಣ ಅವರ ಹೆಸರಿನಲ್ಲಿ ಹಸಿರು ಪಡೆ ಆರಂಭಿಸಲಾಗಿದೆ ಎಂದರು.

ಶಿಕ್ಷಕರಾದ ಗಿರಿಯಪ್ಪ ಹಾರನಹಳ್ಳಿ ಸುಂದರ್ ಲಾಲ್ ಬಹುಗುಣ ಅವರ ಜೀವನ ಮತ್ತು ಸಾಧನೆಯನ್ನು ವಿವರಿಸಿದರು. ಸಸಿನೆಟ್ಟು ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಶಂಕ್ರಪ್ಪ ಬಡಿಗೇರ್ ಮತ್ತು ದೇವಪ್ಪ ಬಚಕ್ಕನವರ್ ಮುಖ್ಯೋಪಾಧ್ಯಾಯರು ಪರಶುರಾಮ್ ಸಾಲ್ಮನಿ, ಶರಣಪ್ಪ ಮಡಿವಾಳರ್ , ಶಿಕ್ಷಕರಾದ ರವಿಕಿರಣ್ ಟಿಕಾರೆ, ನಾರಾಯಣಪ್ಪ ಬಿಸನಳ್ಳಿ, ರಾಜಸಾಹೇಬ್ ಬಳಿಗಾರ, ಸೋಮಣ್ಣ ಪರಶುರಾಮ್, ಬಸವರಾಜ, ಸುನಿತಾ ಯಾಳಗಿ, ಶ್ವೇತಾ ಇತರರು ಇದ್ದರು.

# ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಗಳನ್ನು ಸ್ಥಾಪಿಸಲು ದೃಢ ನಿರ್ಧಾರ ಕೈಗೊಂಡು ಯಶಸ್ವಿ ಉದ್ಯಮಿಗಳಾಬೇಕು: ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್

ಕಲಬುರಗಿ:ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶದಲ್ಲಿ ಮಹಿಳಾ ಉದ್ಯಮಿಗಳಿಗೆ ಹಂಚಿಕೆಯಾದ ಕೈಗಾರಿಕಾ ಪ್ರದೇಶದಲ್ಲಿ ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಧೃಡ ನಿರ್ಧಾರವನ್ನು ಕೈಗೊಂಡು ಆರ್ಥಿಕವಾಗಿ ಸಬಲರಾಗಿ ಯಶಸ್ವಿ ಉದ್ಯಮಿಗಳಾಗಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಇತ್ತೀಚೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶ 2ನೇ ಹಂತದಲ್ಲಿ ಬರುವ ಮಹಿಳಾ ಪಾರ್ಕನಲ್ಲಿ ಹಂಚಿಕೆಯಾಗಿರುವ ನಿವೇಶಗಳ ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸರ್ಕಾರ ಗುರುತಿಸಿದ 40 ಎಕರೆ ಜಾಗದಲ್ಲಿ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಜಿಲ್ಲಾಡಳಿತದ ವತಿಯಿಂದ ಅಗತ್ಯ ಸಹಕಾರವನ್ನು ಮತ್ತು ಉದ್ಯಮಿಗಳಿಗೆ ಬೇಕಾದ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಕರ್ಯಗಳನ್ನು ಮತ್ತು ಅಗತ್ಯದ ಸಹಕಾರವನ್ನು ನೀಡಲಾಗುವುದು ಎಂದು ಅವರು ಹೇಳಿದರು.

2017–18 ನೇ ಸಾಲಿನಲ್ಲಿ 40 ಎಕರೆ ಸ್ಥಳದಲ್ಲಿ ಮಹಿಳೆಯರಿಗೆ ಉದ್ಯಮವನ್ನು ಪ್ರಾರಂಭಿಸಲು 230 ನಿವೇಶನ ಹಂಚಿಕೆ ಮಾಡಲಾಗಿದ್ದು, ಇಲ್ಲಿಯವರೆಗೆ ಕೇವಲ 7 ಘಟಕದಲ್ಲಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಇನ್ನೂಳಿದ ಎಲ್ಲ ನಿವೇಶನಗಳು ಹಂಚಿಕೆದಾರರಿಗೆ ಅವರ ಕೈಗಾರಿಕೆ ಪ್ರಾರಂಭಿಸಲು ವಿವಿಧ ಕೈಗಾರಿಕೆ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಅಗತ್ಯ ಸೌಲಭ್ಯ ನೀಡಲಾಗುವುದು ಎಂದು ಹೇಳಿದರು.

ಹಂಚಿಕೆದಾರರು ತಮ್ಮ ಕುಂದು ಕೊರತೆಗಳ ಮಾಹಿತಿಯನ್ನು ಸಭೆಯ ಗಮನಕ್ಕೆ ತಂದಾಗ ಜಿಲ್ಲಾಧಿಕಾರಿ ತಮ್ಮ ಅಹವಾಲುಗಳಿಗೆ ಸ್ಪಂದಿಸುವುದಾಗಿ ಹೇಳಿದರು.

ನಂದೂರು ಕೈಗಾರಿಕಾ ಪ್ರದೇಶದಲ್ಲಿ ನೀರಿನ ಕೊರತೆ ಬಗೆಹರಿಸಲು 5 ಬೋರ್‌ವೆಲ್‌ಗಳನ್ನು ಕೊರೆಸಲಾಗಿದೆ ಮತ್ತು ಪ್ರತಿಯೊಬ್ಬ ಉದ್ಯಮಿಗಳು ಇ –ಖಾತಾ ಮಾಡಿಸಿಕೊಳ್ಳಬೇಕು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯವಾದ ಪಟ್ಟಿಯನ್ನು ತಯಾರಿಸಿಕೊಂಡು ಅದನ್ನು ನಾಮಫಲಕಗಳಿಗೆ ಅಳವಡಿಸಿ ಉದ್ಯಮಿಗಳಿಗೆ ಬೇಕಾದ ಅಗತ್ಯ ಮಾಹಿತಿಯನ್ನು ನೀಡುವುದರ ಮುಖಾಂತರ ಉದ್ಯಮಿಗಳನ್ನು ಅಧಿಕಾರಿಗಳು ಪ್ರೋತ್ಸಾಹಿಸಬೇಕೆಂದು ಹೇಳಿದರು.

ಜಿಲ್ಲೆಯಲ್ಲಿಯುವ ಉದ್ಯಮಿಗಳನ್ನು ಪ್ರೋತ್ಸಾಹಿಸಲು ಕಾರ್ಯಾಗಾರ ತರಬೇತಿಗಳ ಮೂಲಕ ಅವರಿಗೆ ಉದ್ಯಮಗಳನ್ನು ಸ್ಥಾಪಿಸಲು ಅವರನ್ನು ಸಧೃಡರನ್ನಾಗಿ ಮಾಡುವ ಉದ್ದೇಶದಿಂದ ಇಂತಹ ಕಾರ್ಯಾಗಾರ ಹಮ್ಮಿಕೊಳ್ಳಲಾಗುತ್ತಿದೆ, ಜಿಲ್ಲೆಯ ಉದ್ಯಮಿಗಳೆಲ್ಲರು ಭಾಗವಹಿಸಬೇಕೆಂದು ಅವರಿಗೆ ಹೇಳಿದರು.

ಮಹಿಳೆಯರ ಸುರಕ್ಷತೆ ದೃಷ್ಟಿಯಿಂದ ಕೈಗಾರಿಕಾ ಪ್ರದೇಶದ ಸುತ್ತಲು ಬೀದಿ ದೀಪಗಳನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು, ಮತ್ತು ಕೈಗಾರಿಕಾ ಪ್ರದೇಶದ ಸುತ್ತಲು ಅನೈತಿಕ ಮತ್ತು ಅಹಿತಕರ ಘಟನೆಗಳು ಜರುಗದಂತೆ ಪೊಲೀಸ್ ಇಲಾಖೆಯಿಂದ ಅಗತ್ಯ ಸಹಕಾರ ಪಡೆದು ಕೈಗಾರಿಕಾ ಪ್ರದೇಶದ ಸುತ್ತಮುತ್ತಲು ಬಿಟ್ ಪೊಲೀಸ್ ವ್ಯವಸ್ಥೆಯನ್ನು ಮಾಡಿ ಯಾವುದೇ ರೀತಿಯ ಅನೈತಿಕ ಮತ್ತು, ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ಅಗತ್ಯ ಕ್ರಮವಹಿಸಲಾಗುವುದು ಎಂದು ಹೇಳಿದರು.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಜಂಟಿನಿರ್ದೇಶಕ ಅಬ್ದುಲ್ ಅಜೀಂ ಅವರು ಮಾತನಾಡಿ, ನಂದೂರು ಕೆಸರಟಗಿ, 40 ಎಕರೆ ಕೈಗಾರಿಕಾ ಪ್ರದೇಶದದಲ್ಲಿ ಉದ್ಯಮಿಗಳು ಜಾಗವನ್ನು ಖರೀದಿಸಿ ಅಲ್ಲಿ ಯಾವುದೇ ರೀತಿಯ ಘಟಕಗಳನ್ನು ಆರಂಭ ಮಾಡದೇ ಇರುವ ಕಾರಣ ಜಿಲ್ಲೆಯಲ್ಲಿ ಉದ್ಯಮಿಗಳು ಪ್ರೋತ್ಸಾಹಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಸಭೆಯನ್ನು ಹಮ್ಮಿಕೊಂಡಿದ್ದು, ಸಭೆಗೆ ಆಗಮಿಸಿ ಉದ್ಯಮಿಗಳು ತಮ್ಮ ಉದ್ಯಮ ಸ್ಥಾಪನೆಗೆ ಬೇಕಾದ ಮೂಲಭೂತ ಸೌಕರ್ಯಗಳು ಮತ್ತು ಜಿಲ್ಲಾಢಳಿತದಿಂದ ಬೇಕಾದ ಸಹಕಾರ ಪಡೆಯಲು ಘಟಕಗಳನ್ನು ಸ್ಥಾಪಿಸಲು ಇರುವ ಸಮಸ್ಯೆಗಳು ಕುರಿತು ಜಿಲ್ಲಾ ಕೈಗಾರಿಕಾ ಇಲಾಖೆ ಗಮನಕ್ಕೆ ತಂದು ಸಮಸ್ಯೆ ಪರಿಹಾರ ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಿ ಯಶಸ್ವಿ ಉದ್ಯಮಿಗಳಾಬೇಕೆಂದು ಹೇಳಿದರು.

ಫರ್ನಿಚರ್ ಇಂಡಸ್ಟ್ರೀಯ ಯಶಸ್ವಿ ಉದ್ಯಮಿ ಒಬ್ಬರು ಮಾತನಾಡಿ, ನಾವು ಉದ್ಯಮದಲ್ಲಿ ಯಶಸ್ವಿಯನ್ನು ಕಾಣಬೇಕಾದರೆ ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸಿ ದೃಢ ನಿಶ್ಚಯದಿಂದ ಘಟಕಗಳನ್ನು ಪ್ರಾರಂಭಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ. ಬೇರೆಯವರ ಮೇಲೆ ಆರೋಪಗಳನ್ನು ಮಾಡದೇ ಘಟಕದಲ್ಲಿ ಶ್ರಮವಹಿಸಿ ಕಾರ್ಯನಿರ್ವಹಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ ಎಂದು

ಇದೇ ಸಂದರ್ಭದಲ್ಲಿ ಕೆ.ಐ.ಎ.ಡಿ.ಬಿ. ಕಾರ್ಯನಿರ್ವಾಹಕ ಅಭಿಯಂತರ ಅಶೋಕ ಖಂಡ್ರೆ, ಕೈಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕು ನಳಿನಿ ಮಹಾಗಾಂವಕರ್ ಕೆ.ಐ.ಎ.ಡಿ.ಬಿ. ಸಹಾಯಕ ಕಾರ್ಯನಿವಾಹಕ ಅಭಿಯಂರರು ಪರಮೇಶ್ವರ, ಪಿ.ಡಿ.ಓ. ಸುರೇಖಾ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಸೇರಿದಂತೆ ಉದ್ಯಮಿಗಳು ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಸಚಿವ ಜಮೀರ್ ಹುಟ್ಟುಹಬ್ಬ: ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಹಗರಿಬೊಮ್ಮನಹಳ್ಳಿ.ಆ.02 ರಾಜ್ಯದ ವಸತಿ ಸಚಿವ ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಅವರ 59 ನೇ ವರ್ಷದ ಹುಟ್ಟು ಹಬ್ಬದ ಪ್ರಯುಕ್ತ ಮಾಜಿ ಶಾಸಕ ಶಿರಾಜ್ ಶೇಕ್ ಅಭಿಮಾನಿ ಬಳಗದಿಂದ ರೋಗಿಗಳಿಗೆ ಹಾಲು, ಹಣ್ಣು ಬ್ರೆಡ್ ವಿತರಿಸಲಾಯಿತು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಒಳ, ಹೊರ ರೋಗಿಗಳಿಗೆ ಹಾಲು, ಹಣ್ಣು ಬ್ರೆಡ್ ವಿತರಣೆ ಮಾಡಿ ಅಭಿಮಾನಿ ಬಳಗದ ಸುರೇಶ ರಾಥೋಡ್ ಮಾತನಾಡಿ ಸಚಿವರಾದ ಜಮೀರ್ ಸರ್ ಅವರಿಗೆ ಒಳ್ಳೆಯ ಅರೋಗ್ಯ, ಆಯುಷ್ಯ ವೃದ್ಧಿಸಲಿ ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಉತ್ತಮ ಕೆಲಸ ಮಾಡುವ ಮೂಲಕ ರಾಜ್ಯಕ್ಕೆ ಒಳ್ಳೆಯ ಹೆಸರು ಮಾಡಲಿ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಹುಡೇದ್ ಗುರುಬಸವರಾಜ್, ಸೈಯದ್ ಯೂಸುಫ್, ಎಣ್ಣೆ ಭಾಷ, ರೋಶನ್, ಹನುಮಜ್ಜ, ರಾಜಸಾಬ್, ಅಭಿಬುಲ್ಲಾ ಸಾಬ್, ಸೋಗಿ ಕೊಟ್ರೇಶ್ ಅಂಬೇಡ್ಕರ್ ಸಂಘದ ತಾಲೂಕು ಅಧ್ಯಕ್ಷ ದೊಡ್ಡಬಸಪ್ಪ, ಕಡಿಗಿ ದಾದಾಪೀರ್, ಶಾಬುದ್ದಿನ್, ಸುಭಾನ್ ಹಲಿ, ಮಹಮದ್ ಸಾಬ್, ಕಾಸಿಂ ಸಾಬ್, ಲೋಕಪ್ಪ, ದೊಡ್ಡಬಸಪ್ಪ, ಗುಲ್ಜಾರ್, ಇತರರಿದ್ದರು.

# ರಾಘವ ಜಯಂತಿ ಪುಷ್ಪ ನಮನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.02: ನಾಟ್ಯ ಕಲಾ ಪ್ರಪೂರ್ಣ, ಕನ್ನಡ ಮತ್ತು ತೆಲುಗು ಭಾಷೆಯ ರಂಗಭೂಮಿ ಖ್ಯಾತಿಯ ಬಳ್ಳಾರಿ ರಾಘವ ಅವರ 145 ನೇ ಜಯಂತಿ ಅಂಗವಾಗಿ ಇಂದು ನಗರದ ಗಡಗಿ ಚೆನ್ನಪ್ಪ ಸರ್ಕಲ್ ನಲ್ಲಿರುವ ರಾಘವರ ಪ್ರತಿಮೆಗೆ ಜಿಲ್ಲಾ ಕಲಾವಿದರ ಸಂಘ ಮತ್ತು ರಾಘವ ಅಸೊಶಿಯೇಶನ್ ನಿಂದ ಪುಷ್ಪ ನಮನ ಸಲ್ಲಿಸಲಾಯ್ತು.

ರಾಘವ ಮೆಮೋರಿಯಲ್ ಅಸೋಸಿಯೇಷನ್ ಅಧ್ಯಕ್ಷ ಕೆ.ಕೋಟೇಶ್ವರ ರಾವ್ , ಕಾರ್ಯದರ್ಶಿ ಪ್ರಕಾಶ್ ರಾವ್, ಕಲಾವಿದರ ಸಂಘದ ಜಿಲ್ಲಾ ಅಧ್ಯಕ್ಷ ಎಲ್ಲನಗೌಡ ಶಂಕರಬಂಡೆ, ಮೃತ್ಯುಂಜಯ ಕಪ್ಪಗಲ್ಲು ಮೊದಲಾದವರು ಇದ್ದರು.

# ಮಾದಿಗ ಸಂಘಟನೆಗಳ ಒಕ್ಕೂಟದಿಂದ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಅರೆ ಬೆತ್ತಲೆ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ. ಆ:2 ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಒಳ ಮೀಸಲಾತಿ ಜಾರಿಗೆ ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಇಂದು ನಗರದಲ್ಲಿ

ಮಾದಿಗ ಸಂಘಟನೆಗಳ ಒಕ್ಕೂಟದಿಂದ ಅರೆ ಬೆತ್ತಲೆ

ಪ್ರತಿಭಟನಾ ಮೆರವಣಿಗೆ ನಡೆಯಿತು.

ನಗರದ ಅಂಬೇಡ್ಕರ್ ಸಂಘದ ಜಿಲ್ಲಾ ಕಚೇರಿ ಮುಂಭಾಗದಿಂದ ನೂರಾರು ಜನರಿಂದ

ಆರಂಭಗೊಂಡ ಪ್ರತಿಭಾಟನಾ ಮೆರವಣಿಗೆ ನಗರದ ಗಡಗಿ ಚೆನ್ನಪ್ಪ ಸರ್ಕಲ್ ನಲ್ಲಿ ಸರ್ಕಾರದ ವಿರುದ್ದ ಘೋಷಣೆ ಕೂಗಲಾಯ್ತು. ಅಲ್ಲದೆ ಇಲ್ಲಿ ಸಮುದಾಯದ ಮುಖಂಡರೊಬ್ಬರು ತಲೆ ಬೋಳಿಸಿಕೊಂಡು ಸರ್ಕಾರದ ವಿರುದ್ದ ತನ್ನ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನೆ ಮೆರವಣಿಗೆ ಸಾಗಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರ ಸಲ್ಲಿಸಲಾಯ್ತು.

ಒಳ ಮೀಸಲಾತಿಯ ಬೇಡಿಕೆ ಮತ್ತು ಹೋರಾಟ ಕಳೆದ 35 ವರ್ಷಗಳಿಂದ ನನೆಗುದಿಗೆ ಬಿದ್ದಿದೆ. ಕಳೆದ ಆಗಸ್ಟ ಒಂದರಂದು ಸರ್ವೋಚ್ಛ ನ್ಯಾಯಾಲಯದ ತೀರ್ಪು ಸ್ಪಷ್ಟವಾಗಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಸಮುದಾಯಗಳಿಗೂ ಜನಸಂಖ್ಯೆಗೆ ಅನುಗುಣವಾಗಿ ಒಳಮೀಸಲಾತಿ ನೀಡಲು ರಾಜ್ಯ ಸರ್ಕಾರಗಳಿಗೆ ಆದೇಶವನ್ನು ನೀಡಿದೆ.

ಆದರೂ, ಕರ್ನಾಟಕ ಸರ್ಕಾರವು ಈ ಸರ್ವೋಚ್ಛ ನ್ಯಾಯಾಲಯದ ತೀರ್ಪನ್ನು ಜಾರಿಗೊಳಿಸಲು ಅನಗತ್ಯವಾಗಿ ವಿಳಂಬ ಮಾಡುತ್ತಿರುವುದು ಸಮುದಾಯದಲ್ಲಿ ತೀವ್ರ




ಅಸಮಾಧಾನಕ್ಕೆ ಕಾರಣ ಆಗಿದೆ.

ಸುಪ್ರೀಂಕೋರ್ಟ್ ತೀರ್ಪಿನ ನಂತರ ಹರಿಯಾಣ, ತೆಲಂಗಾಣ , ಆಂಧ್ರಪ್ರದೇಶ ಸರ್ಕಾರಗಳು ಒಳ ಮೀಸಲಾತಿ ಜಾರಿ ಮಾಡಿ ಸಾಮಾಜಿಕ ನ್ಯಾಯದ ವಿಷಯದಲ್ಲಿ ಮೇಲ್ಪಂಕ್ತಿ ಹಾಕಿದ್ದಾರೆ.

ಕರ್ನಾಟಕ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದು ಜಾತಿಗಳಲ್ಲಿ ಅದರಲ್ಲೂ ಮಾದಿಗ ಮತ್ತು 29 ಉಪಜಾತಿಗಳಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ .

ಕಾಂತರಾಜ್ ಆಯೋಗದ ಜಾತಿಗಣತಿಯ ವರದಿ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿಗಳ ನಿರ್ಲಕ್ಷ್ಯದಿಂದ ಕೊನೆಗೆ ಕಸದ ಬುಟ್ಟಿ ಸೇರಿತು. ನಾಗಮೋಹನ್ ದಾಸ್ ವರದಿಯ ಬಗೆಗಿನ ಗೊಂದಲಗಳು , ಸರ್ಕಾರದ ನಿರ್ಲಕ್ಷದ ಧೋರಣೆಯ ಬಗ್ಗೆ ಎಚ್ಚರಿಕೆಯ ಘಂಟೆ ಬಾರಿಸುತ್ತಿದ್ದೇವೆ. ತಕ್ಷಣ ಒಳಮೀಸಲಾತಿ ಜಾರಿಮಾಡಬೇಕೆಂಬುದು ನಮ್ಮ ಆಗ್ರಹವಾಗಿದೆಂದು ಮನವಿ ಪತ್ರದಲ್ಲಿ ಉಲ್ಲೇಖಿಸಿದೆ.

ಜಿಲ್ಲೆಯ ವಿವಿಧ ತಾಲೂಕುಗಳ ಮಾದಿಗ ಸಮುದಾಯದ ಮುಖಂಡರು ಪಕ್ಷಾತೀತವಾಗಿ ಆಗಮಿಸಿ ಈ ಹೋರಾಟದಲ್ಲಿ ಪಾಲ್ಗೊಂಡಿದ್ದರು.

# ರಸಗೊಬ್ಬರ:ಬಿಜೆಪಿ ಪ್ರತಿಭಟನೆ ಹಾಸ್ಯಾಸ್ಪದ:ಗುತ್ತೇದಾರ

ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ:ಅ.2:ಜನಪರ, ಅಭಿವೃದ್ಧಿಪರ ಕೆಲಸ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಸುಳ್ಳು ಆಪಾದನೆಗಳನ್ನು ಮಾಡುತ್ತಾ ಪುಕ್ಕಟೆ ಪ್ರಚಾರಕ್ಕಾಗಿ ಜಿಲ್ಲೆಯಲ್ಲಿ ಬಿಜೆಪಿ ಪಕ್ಷದ ಮುಖಂಡರು ಪ್ರತಿಭಟನೆ ನಡೆಸುತ್ತಿರುವದು ಖಂಡನೀಯ. ಕೇಂದ್ರ ಬಿಜೆಪಿ ಸರಕಾರ ರಾಜ್ಯಕ್ಕೆ ಬೇಡಿಕೆ ಇರುವಷ್ಟು ರಸಗೊಬ್ಬರ ಪೂರೈಕೆ ಮಾಡದ



ಕಾರಣ ರಾಜ್ಯದ ರೈತರಿಗೆ ರಸಗೊಬ್ಬರ ಸಮರ್ಪಕವಾಗಿ ಸಿಗದೇ ಕೊರತೆಯುಂಟಾಗಿದೆ. ಬಿಜೆಪಿ ಯವರು ತಮ್ಮ ತಪ್ಪನ್ನೇ ಅರಿಯದೇ ಬೀದಿಗಿಳಿದು ಪ್ರತಿಭಟನೆ ಮಾಡುತ್ತಿರುವದು ಹಾಸ್ಯಾಸ್ಪದವಾಗಿದೆ ಎಂದು ಶಾಸಕ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಗದೇವ ಗುತ್ತೇದಾರ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 9449732000

## ಆದರ್ಶ ಶಿಕ್ಷಕ ಸಮುದಾಯದ ಪ್ರೀತಿಗೆ ಪಾತ್ರ–ನಾಗರಾಜ್




ಶಾಲೆಯ ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮದ ಹಿರಿಯರು ಶಿಕ್ಷಕ ಬಸವರಾಜ ಅನಗವಾಡಿ ದಂಪತಿಗಳನ್ನು ಚಕ್ಕಡಿಯಲ್ಲಿ ಕೂಡ್ರಿಸಿ, ಸಕಲ ವಾದ್ಯ ವೈಭವಗಳೊಂದಿಗೆ ಗ್ರಾಮದಲ್ಲಿ ಭವ್ಯ ಮೆರವಣಿಗೆ ಮಾಡಿದರು.

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಶಿಕ್ಷಕರು ಮಕ್ಕಳ ಶ್ರೇಯಸ್ಸಿಗಾಗಿ ಕರ್ತವ್ಯ ನಿರ್ವಹಿಸಿ ಸಮುದಾಯ ಹಾಗೂ ಮಕ್ಕಳ ಪ್ರೀತಿಗೆ ಪಾತ್ರರಾಗಬೇಕು ಎಂದು ತಾಲೂಕು ಅಕ್ಷರದಾಸೋಹ ಸಹಾಯಕ ನಿರ್ದೇಶಕ ನಾಗರಾಜ ದೇಶಪಾಂಡೆ ಹೇಳಿದರು.

ತಾಲೂಕಿನ ಮನ್ನಿಕಟ್ಟಿ ಗ್ರಾಮದಲ್ಲಿ ಶನಿವಾರ ಸ್ಥಳೀಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಡೆದ ಗುರುವಂದನೆ ಹಾಗೂ ನಿವೃತ್ತ ಶಿಕ್ಷಕ ಬಸವರಾಜ ಅನಗವಾಡಿ ಅವರ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿ, ಯಾವ ಶಿಕ್ಷಕ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ಸಮುದಾಯದ ಪ್ರೀತಿಗೆ ಪಾತ್ರನಾಗುತ್ತಾನೋ ಅಂತಹ ಆದರ್ಶ ಶಿಕ್ಷಕ ಸದಾ ಸ್ಮರಣೀಯನಾಗುತ್ತಾನೆ ಎಂದರು.

ಮಕ್ಕಳು ತಮಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳ ಪ್ರಯೋಜನ ಪಡೆದು ಭವಿಷ್ಯ ರೂಪಿಸಿಕೊಂಡು ಕುಟುಂಬ ಹಾಗೂ ಸಮಾಜದ ಆಸ್ತಿಯಾಗಿ ಬೆಳೆಯಬೇಕು ಎಂದ ನಾಗರಾಜ್, ಮನ್ನಿಕಟ್ಟಿ ಶಾಲೆಯಲ್ಲೇ 30 ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾಗುತ್ತಿರುವ ಬಸವರಾಜ ಅನಗವಾಡಿ ಅವರ ವೃತ್ತಿ ಬದುಕು ಇತರ ಶಿಕ್ಷಕರಿಗೆ ಮಾದರಿಯಾಗಿದೆ ಎಂದು ಹೇಳಿದರು.

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ, ಶಾಲೆಯ ಮುಖ್ಯಗುರು ಎಂ.ಎನ್.ಕಮ್ಮಾರ ಮಾತನಾಡಿ, ಶಿಕ್ಷಕ ಅನಗವಾಡಿ ಅವರ ಕರ್ತವ್ಯ ನಿರ್ವಹಣೆ, ಕಾರ್ಯಕ್ಷಮತೆ ಯುವ ಶಿಕ್ಷಕರಿಗೆ ಮಾದರಿ ಎಂದರು.

ಸಮಾರಂಭದಲ್ಲಿ ಶಿಕ್ಷಕರು, ನಿವೃತ್ತ ಶಿಕ್ಷಕರನ್ನು ಹಳೆಯ ವಿದ್ಯಾರ್ಥಿಗಳು ಸನ್ಮಾನಿಸಿದರು. ಹನಮಪ್ಪಜ್ಜ ದೊಡ್ಡಪೂಜಾರಿ ಸಾನಿಧ್ಯ ವಹಿಸಿದ್ದರು. ಮನೋಹರ ಢಪಳಿ ಅಧ್ಯಕ್ಷತೆ ವಹಿಸಿದ್ದರು. ಗ್ರಾಪಂ ಅಧ್ಯಕ್ಷೆ ಪಾರ್ವತೆವ್ವ ಮಾದರ, ಸದಸ್ಯರಾದ ಹನಮಂತ ಪಲ್ಲೇದ, ಮುತ್ತಪ್ಪ ಹುಣಸೀಕಟ್ಟಿ, ಮಲ್ಲಮ್ಮ ಜುಮನಾಳ, ಎಸ್.ಡಿಎಂಸಿ ಸದಸ್ಯರು, ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ವಾಯ್.ಡಿ.ಕಿರಸೂರ, ಸುರೇಶ ಮನಗೂಳಿ, ಪಿಕೆಪಿಎಸ್ ಸದಸ್ಯ ವೆಂಕಟೇಶ ತಿಮ್ಮಾಪೂರ, ರಂಗಪ್ಪ ತಿಮ್ಮಾಪೂರ, ಉಮೇಶ ಜುಮನಾಳ, ಪ್ರಕಾಶ ಕೊಣ್ಣೂರ, ನೀಲಪ್ಪ ಕಟಗೇರಿ, ಗ್ರಾಮದ ಹಿರಿಯರು ಅತಿಥಿಗಳಾಗಿ ಪಾಲ್ಗೊಂಡಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ವಿನೋದ ಯಡಹಳ್ಳಿ ಸ್ವಾಗತಿಸಿದರು. ಮಾಲಾಶ್ರೀ ಗಡ್ಡಿ ನಿರೂಪಿಸಿದರು. ಶಾಂತಾ ಪತ್ತಾರ ವಂದಿಸಿದರು.

# ಭಕ್ತರ ಆರಾಧ್ಯದೈವ ಖಜಗಲ್ಲ ಮಡ್ಡಿ ಬಸವಣ್ಣ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ಸಣ್ಣ ಗ್ರಾಮ ಖಜಗಲ್ಲ. ರೈತಾಪಿ ಸಂಸ್ಕೃತಿಯನ್ನು ಉಳಿಸಿಕೊಂಡು ಬಂದಿರುವ ಈ ಗ್ರಾಮ ಸುಕ್ಷೇತ್ರ ಕೂಡಲಸಂಗಮದಿಂದ 4ಕಿ.ಮೀ ಅಂತರದಲ್ಲಿದ್ದು ಇಲ್ಲಿನ ಮಡ್ಡಿ ಬಸವಣ್ಣನ ಜಾತ್ರಾ ಮಹೋತ್ಸವ ಶ್ರಾವಣದ ಎರಡನೇ ಸೋಮವಾರ ನಡೆಯುತ್ತದೆ.

ಸ್ಥಳೀಯರ ಹೇಳಿಕೆ ಪ್ರಕಾರ ಊರಿನ ಹತ್ತಿರ ಎತ್ತರದ ದೊಡ್ಡ ಕಲ್ಲುಬಂಡೆ ಇತ್ತಂತೆ. ಆ ಕಲ್ಲಿನ ಮೂಲಕ ವೈರಿಗಳ ವೀಕ್ಷಣೆ ಮಾಡಲಾಗುತ್ತಿತ್ತು. ಅಲ್ಲಿ ಖಾಜಿ ಎಂಬ ಕಾವಲುಗಾರ ಸೈನಿಕನಿದ್ದನಂತೆ ಹೀಗಾಗಿ ಈ ಊರಿಗೆ ಖಾಜಿಕಲ್ಲು, ಖಜಗಲ್ಲು ಎಂಬ ಹೆಸರು ಬಂದಿದೆ ಎಂದು ಹೇಳಲಾಗುತ್ತಿದೆ. ಈ ಊರಲ್ಲಿ .ಬಸವಣ್ಣ, ಮಾರುತೇಶ್ವರ, ದ್ಯಾಮವ್ವ, ದುರಗವ್ವ, ಭರಮದೇವರು, ಲಗಮವ್ವ, ಜುಮ್ಮನಾಳ ಸಿದ್ದಪ್ಪ ಮುತ್ಯಾನ ಕಟ್ಟೆ ಹೀಗೆ ದೇವರುಗಳಿದ್ದು ಜೊತೆ ಸಾಮರಸ್ಯದ ಮಸೀದಿಯೂ ಇಲ್ಲಿದೆ.

ಶತಮಾನದಷ್ಟು ಹಳೆಯದಾದ ಬಸವಣ್ಣ ದೇವರ ಗುಡಿ ಭಕ್ತ ಪರಂಪರೆಯ ಧಾರ್ಮಿಕ ಆರಾಧನೆಯ ಕೇಂದ್ರವಾಗಿದೆ. ಶಿವನ ವಾಹನ ನಂದಿ ಬಸವಣ್ಣ ಪ್ರತಿಷ್ಠಾಪನೆಗೊಂಡು ನಾನಾ ಹೆಸರುಗಳಿಂದ ಕರೆಯಿಸಿಕೊಳ್ಳುವ ವಾಡಿಕೆಯನ್ನು ಕಾಣುತ್ತೇವೆ. ಸ್ಥಳನಾಮಗಳಿಂದ ಹೆಸರುವಾಸಿಯಾದ ಬಾಗೇವಾಡಿ ಬಸವಣ್ಣ, ಕುಂಟೋಜಿ ಬಸವಣ್ಣ, ಹಳ್ಳೂರ ಬಸವಣ್ಣ, ಕರಡಿ ಬಸವಣ್ಣ, ಯರಝೋರಿ ಬಸವಣ್ಣ ದೇವರುಗಳು ಭಕ್ತ ಪರಂಪರೆಯಿಂದ ಪೂಜ್ಯಣೀಯ ಸ್ಥಾನ ಪಡೆದಿವೆ. ಹಾಗೇಯೇ ಖಜಗಲ್ ಬಸವಣ್ಣನ ಗುಡಿಗೆ ಮಡ್ಡಿ ಬಸವಣ್ಣ ಎಂಬ ಹೆಸರು ಬಂದಿದೆ. ಮಡ್ಡಿ ಹೊಲಗಳು, ಮಸಾರಿ ಹೊಲಗಳು ಈ ಭಾಗದಲ್ಲಿರುವುದರಿಂದಾಗಿ ಮಡ್ಡಿ ಬಸವಣ್ಣ ಎಂಬ ಹೆಸರು ರೂಢಿಯಲ್ಲಿದೆ.

16 ಹಳ್ಳಿಗಳ ಗೌಡಕಿಯನ್ನು ಮಾಡಿದ ಕೂಡಲಸಂಗಮದ ಪಾಟೀಲ ಮನೆತನದ ಹಿರಿಯ–ರಿಂದ ಈ ದೇವಾಲಯ ಕಟ್ಟಿಸಿದ ಬಗ್ಗೆ ಮಾಹಿತಿ ದೊರೆಯುತ್ತದೆ. ಅಯ್ಯನಗುಡಿ ಗಂಗಪ್ಪಯ್ಯ ಸಂಗಮನಾಥನ ಪರಮ ಭಕ್ತರು. ಶೈವ ಸಂಸ್ಕೃತಿಯ ಆರಾಧಕರು. ಈ ಭಾಗದ ಅನೇಕ ಹಳ್ಳಿಗಳ ಸರಹದ್ದಿನಲ್ಲಿ ಈ ಮನೆತನದ ವಾರಸುದಾರರಿಗೆ ಸಂಬಂಧಿಸಿದ ಹೊಲಗಳಿರುವಂತೆ ಖಜಗಲ್ಲ ಸೀಮೆಯಲ್ಲಿಯೂ ಇವರ ಭೂಮಿಗಳು ಇದ್ದವಂತೆ. ಹೀಗಾಗಿ ಅವರು ಈ ಊರಲ್ಲಿ ಬಸವಣ್ಣನ ಗುಡಿ ನಿರ್ಮಿಸಿದ್ದರು ಎನ್ನಲಾಗಿದೆ. ಇದಕ್ಕೆ ಪುಷ್ಠಿ ಕೊಡುವಂತೆ ದೇವಾಲಯದ ಗರ್ಭ ಗುಡಿಯ ಹೊರಭಾಗದ ಎಡ ಭಾಗದ ಕಪ್ಪು ಶಿಲಾ ಫಲಕಗಳಲ್ಲಿನ ಮಾಹಿತಿ ನಮಗೆ ಅಧಿಕೃತ ಮಾಹಿತಿ ಒದಗಿಸುತ್ತದೆ. ಕನ್ನಡ ಹಾಗೂ ಹಿಂದಿ ಬಳಕೆ–ಯ ಫಲಕಗಳಲ್ಲಿ ದೇವಸ್ಥಾನದ ನಿರ್ಮಾಣದ ಕಾಲಘಟ್ಟ 1914 ಎಂದು ಸ್ಪಷ್ಟಪಡಿಸಿದೆ ಈ ದೇವಾಲಯ 112 ವರ್ಷಗಳ ಹಿಂದೆ ಕಟ್ಟಿದ ದೇವಾಲಯ ಎಂದು ತಿಳಿಯಲು ನೆರವಾಗಿದೆ. ಹೊಸಗನ್ನಡದ ಆರು ಸಾಲಿನ ಈ ಫಲಕದಲ್ಲಿ ಬಸವೇಶ್ವರ ಪ್ರಸನ್ನ ಗಂಗಪ್ಪಗೌಡಾ ಸಂಗನಬಸಪ್ಪಗೌಡಾ ಪಾಟೀಲ ಸಂಗಮಕರ ಇವರಿಂದ ನಿರ್ಮಿಸಲ್ಪಟ್ಟಿದೆ ಎಂದು ಬರೆಯಲಾಗಿದೆ.

ಅದೇ ರೀತಿ ಗರ್ಭಗುಡಿಯ ಪ್ರವೇಶದ್ವಾರದ ಮೇಲ್ಭಾಗದಲ್ಲಿ



ಆಂಗ್ಲಭಾಷೆಯಲ್ಲಿ ಜಿ.ಎಸ್.ಪಾಟೀಲ ಸಂಗಮ ಎಂಬ ಶಿಲಾಫಲಕ ಕಾಣುತ್ತೇವೆ. ಸಂಗಮಕರ ಹೆಸರಿನ ಹಿನ್ನಲೆ ಅವಲೋಕಿಸುವಾಗ ಆ ಕಾಲಘಟ್ಟದಲ್ಲಿ ಈ ಭಾಗದಲ್ಲಿ ಮರಾಠಿ ಭಾಷೆಯ ಪ್ರಭಾವ ಇತ್ತೆಂದು ಸಂಗಮದ ಪಾಟೀಲ ಮನೆತನದ ಹಿರಿಯರಾದ ಜಿ.ಜಿ.ಪಾಟೀಲರು ತಿಳಿಸುತ್ತಾರೆ. ಈ ಬಸವಣ್ಣನ ಗುಡಿಯ ಬಗ್ಗೆ ಅವರ ಹಿರಿಯರು ಹೇಳಿದಂತೆ ತಮ್ಮ ಸಹೋದರ ಸಂಬಂಧಿ ಕುಟುಂಬದ ಎಲ್.ಎಮ್. ಪಾಟೀಲ ಅವರ ಮಾತೋಶ್ರೀ ಸೋನಾಬಾಯಿಗೌಡತಿಯವರು ದಿ. ಮಲಕಾಜಪ್ಪಗೌಡರ ಧರ್ಮಪತ್ನಿ ಸೋನವ್ವಗೌಡತಿಯವರು ಈ ಮಡ್ಡಿ ಬಸವಣ್ಣನನ್ನು ಭಕ್ತಿ ಶ್ರದ್ಧೆಯಿಂದ ಪೂಜಿಸಿ ಹರಕೆ ಹೊತ್ತು ಬಹುಕಾಲದವರೆಗೆ ಮಕ್ಕಳ ಭಾಗ್ಯ ಇರದ ಇವರಿಗೆ ಈ ಬಸವಣ್ಣನ ಪೂಜೆ ಹರಕೆಯ ಫಲವಾಗಿ ಮಕ್ಕಳ ಭಾಗ್ಯ ಲಭಿಸಿತು ಎಂದು ಹೇಳಲಾಗುತ್ತಿದೆ.

ಬಸವಣ್ಣನ ಗುಡಿಯ ಪೂಜಾ ಕೈಂಕರ್ಯಗಳನ್ನು ಕೋಟೂರ ಮನೆತನದವರು ನೆರವೇರಿಸಿಕೊಂಡು ಬಂದಿದ್ದಾರೆ. ಕೊಟ್ಟೂರದಿಂದ ಸಂಗಮಕ್ಕೆ ಆಗಮಿಸಿ ಸಂಗಮನಾಥನ ಪೂಜಾ ಹಾಗೂ ಇನಾಂ ಭೂಮಿಗಳಿಸಿದ ಪ್ರಸ್ತುತ ಸಂಗಮದ ಅರ್ಚಕರ ಕಾಲೋನಿಯಲ್ಲಿ ವಾಸಿಸುತ್ತಿರುವ ಕೋಟೂರ ಎಂಬ ಜಂಗಮ ಮನೆತನದವರಿಗೆ ಇಲ್ಲಿನ ಪೂಜಾರಿಕೆ ಇರುವುದು. ಮಡ್ಡಿ ಬಸವಣ್ಣನ ಗುಡಿ ಇರುವ ಹೊಲ ಈ ಮನೆತನದವರಿಗೆ ಉಂಬಳಿಯಾಗಿ ಪಾಟೀಲ ಮನೆತನದವರಿಂದ ದೊರೆತಿದ್ದು ಇವರೇ ಸಾಗುವಳಿ ಮಾಡುತ್ತಾ ಹೊಲವನ್ನು ಉಪಭೋಗಿಸುತ್ತಾ ಬಸವಣ್ಣನ ಗುಡಿಯ ಧಾರ್ಮಿಕ ಕಾರ್ಯಗಳನ್ನು ನಿರಂತರವಾಗಿ ಮನ್ನಡೆಸಿಕೊಂಡು ಬಂದಿದ್ದಾರೆ. ಬೇಡಿ ಬರುವ ಭಕ್ತರ ಇಷ್ಟಾರ್ಥಗಳನ್ನು ಮಡ್ಡಿ ಬಸವಣ್ಣ ಇಡೇರಿಸುತ್ತಾ ಖಜಗಲ್ ಹಾಗೂ ಸುತ್ತಮುತ್ತಲ ಗ್ರಾಮದ ಭಕ್ತರ ಆರಾಧ್ಯ ದೈವ ಎನಿಸಿದ್ದಾನೆ.

ಕೂಡಲಸಂಗಮ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಬಲಭಾಗದ ಹೊಲದಲ್ಲಿ ಆಕರ್ಷಕವಾಗಿ ನಿರ್ಮಾಣಗೊಂಡಿದೆ/ ಪೂರ್ವಭಿಮುಖವಾಗಿರುವ ಈ ಬಸವಣ್ಣದೇವರಿಗೆ ಸೂರ್ಯರಶ್ಮಿಯ ಆರತಿ ನಿತ್ಯ ಕಂಡುಬರುತ್ತದೆ. ಹೊರಭಾಗದಲ್ಲಿ ಎಂಟು ಕಲ್ಲಿನ ಕಂಬಗಳು, ಗರ್ಭಗುಡಿ ಪಾರ್ಶ್ವಕ್ಕೆ ನಾಲ್ಕು ಕಲ್ಲಿನ ಕಂಬಗಳು, ಕಲ್ಲಿನ ಮಾದರಿಯ ತೊಲೆಗಳಿಗೆ ಹೊಂದಿಕೊಂಡಂತೆ ಇರಲಾಗಿದ್ದು ದೇವಾಲಯದ ಆಧಾರ ಸ್ಥಂಬಗಳಾಗಿ ಕಂಡುಬರುತ್ತವೆ. ಸಂಪೂರ್ಣ ದೇವಾಲಯ ಕಲ್ಲಿನಿಂದ ನಿರ್ಮಾಣಗೊಂಡಿದೆ. ದೇವಾಲಯದ ಕಳಸ ಸಹಿತ ಗೋಪುರ ಭಕ್ತ ಮನಗಳಿಗೆ ಆನಂದವನ್ನು ಉಂಟು ಮಾಡುತ್ತದೆ. ದೇವಾಲಯದ ಬಲಭಾಗಕ್ಕೆ ಜಲಧಾರೆ ಕಲ್ಲಿನಿಂದ ನಿರ್ಮಾಣವಾಗಿದೆ. ದೇವಾಲಯದ ಪೂಜೆ ಅಭಿಷೇಕದ ಜಲ. ಈ ಜಲಧಾರೆಯ ಮೂಲಕ ಹೊರಬಂದು ಹೂವಿನ ಸಸಿಗಳಿಗೆ ಸೇರುತ್ತದೆ. ಆಧುನಿಕ ಶೈಲಿಯ ಹೊರ ರಕ್ಷಾ ಗೋಡೆ ಕಂಪೌಂಡ ದೇವಾಲಯದ ವ್ಯಾಪ್ತಿಯನ್ನು ನಿಗದಿಗೊಳಿಸಲು ನೆರವಾಗಿದೆ.

ಎತ್ತು ಅಥವಾ ಗೂಳಿಯ ರೂಪದ ಮಡ್ಡಿ ಬಸವಣ್ಣ ಬಲ ಶಕ್ತಿಯ ಸ್ವರೂಪವಾಗಿ ಇಲ್ಲಿ ನೆಲೆನಿಂತಿದ್ದಾನೆ. ಗರ್ಭಗುಡಿಯ ಬಾಗಿಲು ಚಿಕ್ಕದಾಗಿದ್ದು ಪುಷ್ಪದ ಕೆತ್ತನೆ ಸೂರ್ಯ ಚಂದ್ರ ಕೆತ್ತನೆ ಅಲಂಕಾರಿಕ ಬಾಗಿಲು ಚೌಕಟ್ಟು ಕಾಣುತ್ತೇವೆ. ಬಸವಣ್ಣ ವಿಗ್ರಹ ಪ್ರತ್ಯೇಕ ಪೀಠದ ಮೇಲೆ ಕೆತ್ತಲ್ಪಟ್ಟಿದೆ. ಕೊರಳ ಘಂಟೆಸರ, ಹಣೆಕಟ್ಟು, ಬಾಸಿಂಗ, ಕಾಲುಗಡಗ, ಅಲಂಕಾರಿಕ ಕೆಲವು ರಚನೆಗಳನ್ನು ಗಮನಿಸುವಾಗ ಕೈಲಾಸದಲ್ಲಿ ಶಿವನ ಮುಂದೆ ಕುಳಿತ ನಂದಿಯ ಚಿತ್ರಣ ನೆನೆಪಿಗೆ ಬರುತ್ತದೆ. ಹಿಂಭಾಗದಲ್ಲಿ ಪ್ರಭಾವಳಿ ಮಾದರಿಯ ಅಲಂಕಾರಿಕ ಮಾದರಿ ಇದೆ. ಗುರುತಿಸುತ್ತೇವೆ. ಜಾತ್ರೆಯ ಸಂದರ್ಭದಲ್ಲಿ ಅರ್ಚಕರು ಈ ಮಡ್ಡಿ ಬಸವಣ್ಣನಿಗೆ ಬೆಳ್ಳಿಯ ಮಗಡ, ಕಣ್ಣುಬೊಟ್ಟು, ಹೊಸ ವರ್ಣಮಯ ಗಲ್ಲೀಪುಗಳು, ಕೋಮ್ಮನಸು ಹಾರ, ಬಾಸಿಂಗಗಳನ್ನು ಹಾಕುವ ವಾಡಿಕೆಯಿದೆ. ಅಭಿಷೇಕ ಪೂಜೆ ಸಂಪನ್ನಗೊಂಡು ಭಸ್ಮ ಗಂಧ ಚಂಧನ ಕುಂಕುಮ ಬಿಲ್ವಪತ್ರೆ ಮುಂತಾದವುಗಳಿಂದ ಅಲಂಕೃತಗೊಳುವ ಬಸವಣ್ಣನ ಮೂರ್ತಿಯನ್ನು ಕಂಡು ಸಂಭ್ರಮಿಸುವದೇ ಭಕ್ತಮನಗಳಿಗೆ ಆನಂದವನ್ನುಂಟು ಮಾಡುತ್ತವೆ.

ಖಜಗಲ್ಲ ಮಡ್ಡಿ ಬಸವಣ್ಣನ ಜಾತ್ರೆ ಕಳಸೋತ್ಸವ ಪ್ರತಿ ವರ್ಷ ಶ್ರಾವಣ ಎರಡನೇ ಸೋಮವಾರ ನಡೆಸಿಕೊಂಡುಬರುವ ಸಂಪ್ರದಾಯವಿದೆ. ಕೂಡಲಸಂಗಮ–ಖಜಗಲ್ಲ ಸುತ್ತಲಿನ ಭಕ್ತ ವೃಂದ ನೇಮ ನಿತ್ಯದಿ ಪೂಜೆ, ಭಜನೆ ಮಹಾ ಪ್ರಸಾದ ಏರ್ಪಡಿಸಿ ಜಾತ್ರೆ ನಡೆಸುತ್ತಾರೆ. ಅಂದು ದೇವಾಲಯ ತಳಿರು ತೋರಣ ಫಲ ಪುಷ್ಪಗಳಿಂದ ಅಲಂಕಾರಗೊಂಡಿರುತ್ತದೆ. ಕೋಟೂರ ಪರಿವಾರದ ಅರ್ಚನೆ ಪೂಜೆಗಳು, ಹರಕೆ ಹೊತ್ತ ಭಕ್ತರ ಭಕ್ತಿ ಸಮರ್ಪಣೆ ನಡೆದು ಸರ್ವಧರ್ಮಿಯರು ಬಸವಣ್ಣನ ಅಂಗಳದಲ್ಲಿ ಕುಳಿತು ಅನ್ನ ಪ್ರಸಾದ ಸೇವಿಸಿ ಬಸವಣ್ಣನ ಕೃಪೆಗೆ ಪಾತ್ರರಾಗುತ್ತಾ ಬಂದಿದ್ದಾರೆ. ಆಬಾಲ ವೃದ್ಧರಾದಿಯಾಗಿ ಎಲ್ಲರೂ ಬಸವಣ್ಣನ ಜಾತ್ರೆಯಲ್ಲಿ ಭಾಗಿಯಾಗುತ್ತಾ ಬಂದಿದ್ದಾರೆ. ಮುಂಬರುವ ವರ್ಷಗಳಲ್ಲಿ ಈ ಜಾತ್ರೆಗೆ ಮತ್ತಷ್ಟು ಸಾಂಸ್ಕೃತಿಕ ಧಾರ್ಮಿಕ ಮನ್ನಣೆ ದೊರೆಯಲಿ ಎಂಬುದು ಈ ಭಾಗದ ಭಕ್ತರ ಆಶಯವಾಗಿದೆ.

**ಶ್ರೀಮತಿ ಪ್ರತಿಭಾ ಭೀಮು ವಾಲಿಕಾರ ಖಜಗಲ್ಲ**

## ನಾಳೆ ಜಿಲ್ಲಾ ಮಟ್ಟದ ವ್ಯಸನಮುಕ್ತ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಜಿಲ್ಲಾಡಳಿತ, ಜಿಲ್ಲಾಪಂಚಾಯತ, ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಗಸ್ಟ 4 ರಂದು ಲಿಂ. ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಅಂಗವಾಗಿ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸೋಮವಾರ ಜಿ.ಪಂ ನೂತನ ಸಭಾಭವನದಲ್ಲಿ ಬೆಳಿಗ್ಗೆ 10.30 ಗಂಟೆಗೆ ಜರುಗಲಿರುವ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಇಳಕಲ್ಲ ವಿಜಯಮಹಾಂತ ಸಂಸ್ಥಾನಮಠದ ಗುರುಮಹಾಂತ ಶ್ರೀಗಳು ವಹಿಸಲಿದ್ದು, ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್.ಮೇಟಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಹುಬ್ಬಳ್ಳಿಯ ಖ್ಯಾತ ವೈದ್ಯ ಡಾ.ಸಂಜೀವ ಕುರಗೋಡ ವಿಶೇಷ ಉಪನ್ಯಾಸ ನೀಡಲಿದ್ದಾರೆ.

## ಆ.6 ರಂದು ರಸ್ತಾಪುರದಲ್ಲಿ ಉಚಿತ ಆರೋಗ್ಯ ತಪಾಷಣೆ ಶಿಬಿರ–ಮಲ್ಲು ಆರಬೋಳ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ರಾಜ್ಯದ ಗ್ರಹ ಮಂತ್ರಿ ಶೋಸಿತ ಸಮಾಜದ ನಾಯಕರಾದ ಡಾ.ಜಿ,ಪರಮೇಶ್ವರವರ 74 ನೇಯ ಜನ್ಮದಿನದ ಅಂಗವಾಗಿ ತಾಲುಕಿನ ರಸ್ತಾಪುರ ಗ್ರಾಮದಲ್ಲಿ ಉಚಿತ ಅರೋಗ್ಯ ತಪಾಷಣೆ ಶಿಬಿರ ಮತ್ತು ಅನ್ನ ಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಕರ್ನಾಟಕ ಡಾ.ಜಿ,ಪರಮೇಶ್ವರ ಯುವ ಸೈನ್ಯ ಶಹಾಪುರ ತಾಲುಕಾ ಅಧ್ಯಕ್ಷರಾದ ಮಲ್ಲಿಕಾರ್ಜುನ ಆರಬೋಳ ತಿಳಿಸಿದರು, ಅವರು ನಗರದ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆಯಲ್ಲಿ ಪತ್ರಕರ್ತರಿಗೆ ಈ ವಿಷಯ ತಿಳಿಸಿದರು, ಈ ಕಾರ್ಯಕ್ರಮವನ್ನು ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಉಧ್ಘಾಟನೆ ಮಾಡಲಿದ್ದು, ಕರವೇ ಉತ್ತರಕರ್ನಾಟಕ ಅಧ್ಯಕ್ಷರಾದ ಡಾ.ಶರಣು ಗದ್ದುಗೆ ಸಾನಿಧ್ಯ ವಹಿಸುವರು, ಖ್ಯಾತ ವೈಧ್ಯರಾದ ಡಾ,ಚಂದ್ರಶೇಖರ ಸುಬೇದಾರ, ಉಪಸ್ಥಿತಿಯಲ್ಲಿ ಉಪನ್ಯಾಷಕರಾದ ಭೀಮಣ್ಣ ಮಂಡಗಳ್ಳಿ ಪ್ರಾಸ್ತಾವಿಕವಾಗಿ ಮಾತನಾಡುವರು, ಅಖಿಲ ಕರ್ನಾಟಕ ಡಾ, ಜಿ, ಪರಮೇಶ್ವರ ಯುವ ಸೈನ್ಯ ರಾಜ್ಯಾಧ್ಯಕ್ಷರಾದ ನಗತಾ ರಂಗನಾಥರವರು ಅಧ್ಯಕ್ಷತೆ ವಹಿಸುವರು, ಅಂದಿನ ಕಾರ್ಯಕ್ರಮದಲ್ಲಿ ಅನೇಕ ಗಣ್ಯರು ಹಿರಿಯರು ಆಗಮಿಸುವರು, ಎಂದು ತಿಳಿಸಿದ ಅವರು, ನುರಿತ ವೈಧ್ಯರಾದ ಡಾ, ಮೈಬೂಬಸಾಬ್, ಡಾ, ಭಾಗ್ಯಶ್ರೀ, ಸೇರಿದಂತೆ ಇತರೆ ವೈದ್ಯರು ಆಗಮಿಸಿ ಆರೋಗ್ಯ ತಪಾಷಣೆಯಲ್ಲಿ ಪಾಲ್ಗೊಳ್ಳುವರು ಎಂದು ಮಲ್ಲಿಕಾರ್ಜುನ ಆರಬೋಳ ಪತ್ರಿಕೆಗೆ ತಿಳಿಸಿದರು, ಈ ಸಮಯದಲ್ಲಿ ಮೌನೇಶ ಜಾರಕಿಹೊಳಿ, ಧರ್ಮಣ್ಣ ನಾಟೇಕಾರ, ವಿಶ್ವರಾಧ್ಯ ಬೀರನೂರ, ಹಾಜರಿದ್ದರು,

ಜಿಲ್ಲಾ ಅಗ್ರಣಿ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆ

## ಕುರಿ ಸಾಕಾಣಿಕೆ, ಶೆಡ್ ನಿರ್ಮಾಣಕ್ಕೆ ಸಾಲ ಒದಗಿಸಿ–ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಕುರಿಸಾಕಾಣಿಕೆ, ಶೆಡ್ ನಿರ್ಮಾಣಗಳಿಗೆ ಬ್ಯಾಂಕ್ ಸಾಲ ಒದಗಿಸಬೇಕು. ಆ ಮೂಲಕ ದುಡಿಯುವ ಕೈಗಳಿಗೆ ಆರ್ಥಿಕ ಸಹಾಯ ನೀಡುವ ಕಾರ್ಯವಾಗ ಎಂದು ಲೋಕಸಭಾ ಸದಸ್ಯ ಪಿ.ಸಿ.ಗದ್ದಿಗೌಡರ ತಿಳಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶನಿವಾರ ಜರುಗಿದ ಜಿಲ್ಲಾ ಅಗ್ರಣಿ ಬ್ಯಾಂಕಿನ ಡಿಸಿಸಿ, ಡಿ.ಎಲ್.ಆರ್.ಸಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದುಡಿಯುವ ಕೈಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಸಾಲ ಸೌಲಭ್ಯ ನೀಡುವ ಮೂಲಕ ಪ್ರೋತ್ಸಾಹಿಸಿದಾಗ ಮಾತ್ರ ಅವರು ಆರ್ಥಿಕವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಕೇಂದ್ರಸರಕಾರದ ಯೋಜನೆಗಳನ್ನು ಸರಿಯಾಗಿ ಅನುಷ್ಠಾನಗೊಳಿಸಬೇಕು. ಪ್ರತಿಯೊಂದು ಬ್ಯಾಂಕ್ ಖಾತೆಗಳನ್ನು ಈ ತಿಂಗಳೊಳಗೆ ಇ–ಕೆವೈಸಿಗೆ ಒಳಪಡಿಸುವ ಕಾರ್ಯವನ್ನು ಪೂರ್ಣಗೊಳಿಸುವಂತೆ ಸೂಚಿಸಿದ ಗದ್ದಿಗೌಡರ, ಸಾಲ ಮಂಜೂರಾತಿಗೆ ಕಾಲಮಿತಿಯಲ್ಲಿ ಅನುಮೋದನೆ ಆಗಬೇಕು. ಗ್ರಾಹಕರನ್ನು ಅಲೆದಾಡಿಸುವ ಕೆಲಸವಾಗಬಾರದು ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಪರಿಶಿಷ್ಟ ಜಾತಿ, ಪಂಗಡದ ಕಾಲೋನಿಯಲ್ಲಿರುವ ಅರ್ಹ ಫಲಾನುಭವಿಗಳಿಗೆ ಉಪಜೀವನಕ್ಕೆ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕುಗಳು ಸಾಲ ಪೂರೈಸಲು ಮುಂದಾಗಬೇಕು. ಫಲಾನುಭವಿಗಳನ್ನು ಹುಡುಕಿಕೊಂಡು ಇಲಾಖೆಗಳು ಹಾಗೂ ಬ್ಯಾಂಕರ್ಸ್‌ಗಳು ಹೋಗಬೇಕು. ಅಂದಾಗ ಮಾತ್ರ ಸಮುದಾಯದಲ್ಲಿ ಸುಧಾರಣೆ ಕಾಣಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ವಿವಿಧ ಯೋಜನೆಗಳ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಾಲ ಸೌಲಭ್ಯಕ್ಕಾಗಿ ಬ್ಯಾಂಕ್‌ಗೆ ಪಟ್ಟಿಯನ್ನು ಸಲ್ಲಿಸಲಾಗುತ್ತಿದ್ದರೂ ಸರಿಯಾದ ಸಮಯದಲ್ಲಿ ಸಾಲ ಮಂಜೂರಾತಿ ಆಗುತ್ತಿಲ್ಲ. ಈ ಬಗ್ಗೆ ಬ್ಯಾಂಕುಗಳು ಕ್ರಮವಹಿಸಬೇಕು. ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ಪಿಎಂಎಸ್‌ಬಿವಾಯ್, ಪಿ.ಎಂಜೆಜೆಬಿವಾಯ್ ಮತ್ತು ಎಪಿವಿ ನೊಂದಣಿಗಳ ಮಾಹಿತಿಯನ್ನು ಪಡೆದುಕೊಂಡರು.

ಭಾರತೀಯ ರಿಜರ್ವ ಬ್ಯಾಂಕ್‌ನ ಅಗ್ರಣಿ ಅಧಿಕಾರಿ ವಿಜಯಶ್ರೀ, ಅಡಮಾನ ಇಟ್ಟುಕೊಂಡಿರುವ ಬಂಗಾರ, ಬೆಳ್ಳಿ ವಸ್ತುಗಳನ್ನು ಇಂದು ತೆಗೆದುಕೊಂಡು ಮರುದಿನ ಮತ್ತೆ ಬ್ಯಾಂಕ್‌ಗಳಿಗೆ ಜಮಾ ಮಾಡಿದರೆ ಅದಕ್ಕೆ ಯಾವುದೇ ರೀತಿಯ ಚಾರ್ಜ ಮಾಡದಿರುವುದನ್ನು ಜನವರಿ 26 ರಿಂದ ಜಾರಿಗೊಳಿಸಲಾಗುವುದು ಎಂದು ಹೇಳಿದರು.

ಜಿಲ್ಲಾ ಅಗ್ರಣೀ ಬ್ಯಾಂಕಿನ ವ್ಯವಸ್ಥಾಪಕ ರಾಜಶೇಖರ ಹೂಗಾರ, ಪ್ರಸಕ್ತ ಸಾಲಿನ ಜೂನ್ ಅಂತ್ಯಕ್ಕೆ ಕೊನೆಗೊಂಡ ತ್ರೈಮಾಸಿಕ ಡಿಎಲ್‌ಆರ್‌ಸಿ ಸಭೆಯ ಕಾರ್ಯಸೂಚಿಯ ಬಗ್ಗೆ ಸಭೆಗೆ ತಿಳಿಸಿದರು. ಆದ್ಯತಾ ವಲಯದಲ್ಲಿ ಕೃಷಿಗೆ ಸಂಬಂಧಿಸಿದ ಶೇ.21 ರಷ್ಟು, ಬೆಳೆ ಸಾಲದಲ್ಲಿ ಶೇ.21.02, ಇತರೆ ಕೃಷಿ ಸಾಲದಲ್ಲಿ ಶೇ.20.76 ರಷ್ಟು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಶೇ.48.51 ರಷ್ಟು, ಇತರೆ ಆದ್ಯತಾ ವಲಯಕ್ಕೆ ಶೇ.7.91 ರಷ್ಟು ಸಾಲ ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣ ಸಾ ಭಾಂಡಗೆ, ನಬಾರ್ಡನ ಡಿಡಿಎಂ ಮಂಜುನಾಥ ರೆಡ್ಡಿ, ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಬ್ಯಾಂಕಿನ ಪ್ರತಿನಿಧಿಗಳು, ಆರ್ಥಿಕ ಸಾಕ್ಷರತೆ ಕೇಂದ್ರದ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಒಪೆಕ್ ಆಸ್ಪತ್ರೆಯಲ್ಲಿನ ಹೊರಗುತ್ತಿಗೆ ನೇಮಕಾತಿ ಪ್ರಕ್ರಿಯೆ ನ್ಯಾಯಾಲಯ ಆದೇಶದಂತೆ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 02–: ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಧೀನದ ರಾಜೀವ್ ಗಾಂಧಿ ಸೂಪರ್‌ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯಲ್ಲಿ ಬೋಧ–ಕೇತರ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆ.

ಈ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿಯಲ್ಲಿರುವ ಪ್ರಕರಣ ಸಂಖ್ಯೆ ಡಬ್ಲ್ಯೂ:200099/2024 (ಫಾಕ: 200099/2024) ಕಾರಣದಿಂದಾಗಿ ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಈ ಹಿಂದೆ ದಿನಾಂಕ 18.07.2025 ಮತ್ತು 01.08.2025 ಹೊರಡಿಸಿದ ತಿದ್ದುಪಡಿಯ ಅರ್ಜಿ ಆಹ್ವಾನವನ್ನು ಮಾನ್ಯ ಉಚ್ಚ ನ್ಯಾಯಾಲಯ ಕಲಬುರಗಿ ಮುಂದಿನ ಆದೇಶ ಬರುವವರೆಗೆ ಮುಂದೂಡಲಾಗಿದೆ ಎಂದು ಈ ಹಿಂದೆ ದಿನಾಂಕ 18.07.2025 ಮತ್ತು 01.08.2025 ರಂದು ಪತ್ರಿಕೆಗಳಲ್ಲಿ ಪ್ರಕಟವಾದ ತಿದ್ದುಪಡಿ ಕುರಿತಂತೆ ರಾಜೀವ್ ಗಾಂಧಿ ಸೂಪರ್‌ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯ ವಿಶೇಷಾಧಿಕಾರಿಗಳು ಹಾಗೂ ನಿರ್ದೇಶಕರು ಪ್ರಕಟಣೆ ಹೊರಡಿಸಿದ್ದಾರೆ.

## ಸರ್ವತೋಮುಖ ಬೆಳವಣಿಗೆಗೆ ಕ್ರೀಡಾ ಚಟುವಟಿಕೆ ಅವಶ್ಯ–ಶೆಲ್ಲಿಕೇರಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಶಿಕ್ಷಣದಿಂದ ಮಾತ್ರ ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಲು ಸಾಧ್ಯ. ಇಂದಿನ ಯುವ ಪೀಳಿಗೆ ಸಂಸ್ಕಾರವಂತರಾಗಿ ಆದರ್ಶ ಸಮಾಜ ರೂಪಗೊಳಿಸುವತ್ತ ಗಮನಹರಿಸಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಹೇಳಿದರು.

ತಾಲೂಕಿನ ಬೇವೂರಿನ ಆದರ್ಶ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಶನಿವಾರ ಜರುಗಿದ ಪ್ರಸಕ್ತ ಸಾಲಿನ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಗುರುವಿನ ಮಾರ್ಗದರ್ಶನದಲ್ಲಿ ನಡೆದಾಗ ಭವಿಷ್ಯದ ದಾರಿ ಸುಗಮವಾಗುತ್ತದೆ ಎಂದರು.

ವಿದ್ಯಾರ್ಥಿಗಳಿಗೆ ಪಠ್ಯ ಎಷ್ಟು ಮುಖ್ಯವೋ ಕ್ರೀಡೆ ಹಾಗೂ ಪಠ್ಯೇತರ ಚಟುವಟಿಕೆಗಳು ಸಹ ಪ್ರಮುಖವಾಗಿದ್ದು, ಸರ್ವತೋಮುಖ ಬೆಳವಣಿಗೆಗೆ ಇವು ಸಹಕಾರಿಯಾಗುತ್ತವೆ ಎಂದು ಶಿವಾನಂದ ಶೆಲ್ಲಿಕೇರಿ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಆದರ್ಶ ವಿದ್ಯಾವರ್ಧಕ ಸಂಸ್ಥೆಯ ಸದಸ್ಯ ಪಿ.ಬಿ.ಹೊಸಳ್ಳಿ, ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಂದ ಸಶಕ್ತ ಜೀವನ ಸಾಧ್ಯ. ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ಸಂಯಮ, ಮಾಡುವ ಕಾಯಕದಲ್ಲಿ ಶ್ರದ್ಧೆ ಅಳವಡಿಸಿಕೊಂಡು ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳಬೇಕು.

ಹಿರಿಯರು ಹಾಕಿಕೊಟ್ಟ ಪರಂಪರೆಯನ್ನು ಕಾಪಾಡಬೇಕು ಎಂದು ಹೇಳಿದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಪ್ರಾಚಾರ್ಯ ವ್ಹಿ.ಬಿ.ಅರಹುಣಸಿ ಸ್ವಾಗತಿಸಿದರು. ಮುಖ್ಯಗುರು ಯೋಗೇಶ ಲಮಾಣಿ ಪರಿಚಯಿಸಿದರು. ಪ್ರೊ. ಎಸ್.ಕೆ.ಮಾಡೊಳ್ಳಿ ನಿರೂಪಿಸಿದರು. ಎ.ಜಿ.ಮಾಗನೂರ ವಂದಿಸಿದರು. ಪ್ರಾಧ್ಯಾಪಕರಾದ ಜೆ.ಕೆ.ಮಲ್ಲಾಪೂರ, ಎಸ್.ಎನ್.ಬಾರ್ಕಿ, ಸಾಂಸ್ಕೃತಿಕ ವಿಭಾಗದ ಮಾರ್ಗದರ್ಶಕ ಎಸ್.ಕೆ.ಮಾಡೊಳ್ಳಿ, ಕ್ರೀಡಾ ವಿಭಾಗದ ಮಾರ್ಗದರ್ಶಕ ಪಿ.ಬಿ.ತಳವಾರ, ಆರ್.ಆರ್.ಯರಡೋಣಿ, ಶ್ರೀದೇವಿ ಕಮ್ಮಾರ, ವಿ.ಎಸ್.ನಿಲುಗಲ್ಲ, ಕೆ.ಡಬ್ಲ್ಯೂ. ಮಕಾನದಾರ, ಡಿ.ಎಸ್.ಮಾದರ, ವಿ.ಎಫ್.ಸನ್ನಿ, ಶ್ರೀಧರ ಬಡಿಗೇರ, ಅಂಜುಮ ಭಂಡಾರಿ ಇದ್ದರು.

## ಎಸ್ ಡಿಎಂಸಿಯ ಅಧ್ಯಕ್ಷರಾಗಿ ಯಮನೂರಪ್ಪ ಭಾನಾಪುರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರು ತಾಲೂಕಿನ ಕಕ್ಕಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇಂದು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (SDMC) ರಚನೆ ಮಾಡಲಾಯಿತು.

ಅವಳಿ ತಾಲೂಕಿನ ಬಿ ಆರ್ ಪಿ ಮಹೇಶ್ ಅಸೂಟಿ ಹಾಗೂ ಸಿಆರ್‌ಪಿ ಮಂಜುನಾಥಯ್ಯ ಅವರ ನೇತೃತ್ವದಲ್ಲಿ ಮುಖ್ಯೋಪಾಧ್ಯರು ಹಾಗೂ ಶಿಕ್ಷಕರನ್ನ ಒಳಗೊಂಡಂತೆ ಪಾಲಕರ ಸಭೆ ನಡೆಸಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (SDMC) ರಚನೆ ಮಾಡಿದರು. ಖಆಒಅಯ ಅಧ್ಯಕ್ಷರಾಗಿ ಸರ್ವಾನುಮತದಿಂದ ಯಮನೂರಪ್ಪ ರಾಮಪ್ಪ ಭಾನಾಪುರ್ ಅವರು ನೇಮಕಗೊಂಡರು. ಅದೇ ರೀತಿ ಉಪಾಧ್ಯಕ್ಷರಾಗಿ ಶ್ರೀಮತಿ ಮಾಲಾ ವಿಶ್ವಕರ್ಮ ಅವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಯ ಪ್ರಭುರಾಜ್ ಗುರಿಕಾರ, ಸಹ ಶಿಕ್ಷಕ ಶಂಭು, ಗ್ರಾಮ ಪಂಚಾಯತ್ ಸದಸ್ಯ ಯಮನೂರಪ್ಪ ಕಟ್ಟಿಮನಿ, ಊರಿನ ಮುಖಂಡರಾದ ಮೇಘರಾಜ್ ಬಳಗೇರಿ, ಸುರೇಶ್ ಬಾಳೋಟಗಿ, ಹಂಪಣ್ಣ ಕಟ್ಟಿಮನಿ, ಹಿರಿಯ ಪತ್ರಕರ್ತ ಈರಯ್ಯ ಕುರ್ತಕೋಟಿ, ವೆಂಕಟೇಶ್ ರಾಟಿಮನಿ, ಪ್ರಕಾಶ್ ಬಳಗೇರಿ, ತಿರುಪತಿ ಕಟ್ಟಿಮನಿ, ರುದ್ರಯ್ಯ, ಸುರೇಶ್ ಮನ್ನಾಪುರ್, ಸೋಮಪ್ಪ ಕಾರಭಾರಿ, ತಿರುಪತಿ ತಲ್ಲೂರು, ದುರ್ಗಪ್ಪ ಕಟ್ಟಿಮನಿ, ಕಿರಣ್ ಕುಮಾರ್ ರಾಥೋಡ್, ವಿಶ್ವನಾಥ್ ಕುಣಿ–ಕೇರಿ, ವಿಜಯಕುಮಾರ್ ಚೌಹಾನ್, ಸುರೇಶ್ ಬಾನಾಪುರ್, ರಮೇಶ್ ಇಟಗಿ, ರಮೇಶ್ ಚಿಕನೇಕೊಪ್ಪ, ಶ್ರೀಕಾಂತ್ ಕಟ್ಟಿಮನಿ, ಅಂಬರೀಶ್ ಮನ್ನಾಪುರ್ ಉಪಸ್ಥಿತರಿದ್ದರು.

# ಖಾಯಂ ಜನತಾ ನ್ಯಾಯಲಯದಲ್ಲಿ ಪ್ರಕರಣಗಳು ಬೇಗ ಇತ್ಯರ್ಥ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಆ.02 : ಖಾಯಂ ಜನತಾನ್ಯಾಯಾಲಯದಲ್ಲಿಸಾರ್ವಜನಿಕ ಮೂಲಭೂತ ಸಮಸ್ಯೆಗಳನ್ನು ರಾಜಿ ಸಂದಾನದ ಮೂಲಕ ತ್ವರಿತ ವಿಲೇವಾರಿ ಮಾಡಲಾಗುವುದು ಹಾಗೂ ಪ್ರಕರಣಗಳ ಕುರಿತು ಸಾರ್ವಜನಿಕರು ಜನತಾ ನ್ಯಾಯಾಲಯಕ್ಕೆ ಅರ್ಜಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ನ್ಯಾಯಾಧೀಶರು ಮತ್ತು ಖಾಯಂ ಜನತಾ ನ್ಯಾಯಾಲಯದ ಅಧ್ಯಕ್ಷರಾದ ಎಸ್.ಎಲ್.ಚವ್ಹಾಣ ಹೇಳಿದರು



ಶನಿವಾರದಂದು ಕಲಬುರಗಿಯ ಜಿಲ್ಲಾನ್ಯಾಯಲಯದ ಆವರಣದಲ್ಲಿರುವ ಎ.ಡಿ.ಆರ್ ಕಟ್ಟಡದಲ್ಲಿ ಜಿಲ್ಲಾ ನ್ಯಾಯಲಯದ ಆವರಣದಲ್ಲಿರುವ ಖಾಯಂ ಜನತಾ ನ್ಯಾಯಲಯದ ಕುರಿತು ಮಾಹಿತಿಯನ್ನು ನೀಡಲು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ರಾಜ್ಯದಲ್ಲಿ 06 ಖಾಯಂ ಜನತಾ ನ್ಯಾಯಲಯಗಳಿದ್ದು, ಅದರಲ್ಲಿ ಕಲಬುರಗಿ ನ್ಯಾಯಲಯದಲ್ಲಿ ಅತಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದರು. 1 ಕೋಟಿ ರೂಪಾಯಿಗಳವರೆಗಿನ ಪ್ರಕರಣಗಳನ್ನು ಈ ಜನತಾ ನ್ಯಾಯಾಲಯದಲ್ಲಿ ಯಾವುದೇ ಶುಲ್ಕವಿಲ್ಲದೆ ಪ್ರಕರಣದ ಅರ್ಜಿಯನ್ನು ಸಲ್ಲಿಸಬಹುದು ಎಂದರು.

ಈ ನ್ಯಾಯಲಯವು 2007 ರಿಂದ ಪ್ರಾರಂಭವಾಗಿದ್ದು, ಇಲ್ಲಿಯವರೆಗು ಪ್ರತಿ ತಿಂಗಳು 240 ರಿಂದ 250 ಪ್ರಕರಣಗಳಿಗೆ ಪರಿಹಾರ ನೀಡಲಾಗಿದೆ. ಸಾರ್ವಜನಿಕರು ಯಾವುದೇ ಭಯವಿಲ್ಲದೆ ಅರ್ಜಿಯನ್ನು ಸಲ್ಲಿಸಿ ತ್ವರಿತವಾಗಿ ಪರಿಹಾರ ಪಡೆದುಕೊಳ್ಳಬೇಕು ಎಂದು ಹೇಳಿದರು.

ಖಾಯಂ ಜನತಾ ನ್ಯಾಯಾಲಯದಲ್ಲಿ ಸಾರ್ವಜನಿಕ ಉಪಯುಕ್ತ ಸೇವೆಗಳಾದ ರಸ್ತೆಸಾರಿಗೆ, ಜಲಸಾರಿಗೆ ,ವಾಯುಸಾರಿಗೆ, ಟೆಲಿಗ್ರಾಂ, ವಿದ್ಯುತ್ ಪೂರೈಕೆಯಲ್ಲಿನ ಸಮಸ್ಯೆ, ಇನ್ಸುರೆನ್ಸ್, ಶಿಕ್ಷಣ, ರಿಯಲ್ ಎಸ್ಟೇಟ್ ಬ್ಯಾಂಕುಗಳ ಸಾಲಗಳ ವಸೂಲಾತಿ ಪ್ರಕರಣಗಳು ,ಪೋಸ್ಟಲ್ ,ಶಾಲಾ ಕಾಲೇಜುಗಳ ಪ್ರವೇಶಗಳ ಸಮಸ್ಯೆ, ಕಸವಿಲೇವಾರಿ ಸಮಸ್ಯೆಗಳು ಕುರಿತು ಸಾರ್ವಜನಿಕರು ಉಪಯುಕ್ತಸೇವೆಗಳ ಕುರಿತು ಅಗತ್ಯ ದಾಖಲೆಗಳೊಂದಿಗೆ ಖಾಯಂ ಜನತಾ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿದಾಗ ಅವುಗಳನ್ನು ಪರಿಶೀಲನೆಯನ್ನು ಮಾಡಿ ಅರ್ಜಿದಾರರು ಮತ್ತು ಸಂಬಂದಪಟ್ಟ ಇಲಾಖೆಯವರಿಗೆ ಸಮಸ್ಯೆಗಳನ್ನು ಆದಷ್ಟು ಬೇಗ ಪರಿಹರಿಸುವಂತೆ ಮಾಡಿ ಇಂತಹ ಪ್ರಕರಣಗಳನ್ನು ರಾಜಿ ಸಂದಾನದ ಮೂಲಕವಾಗಿ ಬಗೆಹರಿಸಲಾಗುವುದು ಎಂದು ಅವರು ತಿಳಿಸಿದರು.

ಸಾರ್ವಜನಿಕ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಖಾಯಂ ಜನತಾ ನ್ಯಾಯಾಲಯದಲ್ಲಿ ಒಬ್ಬರು ಜಿಲ್ಲಾನ್ಯಾಯಾದೀಶರು ಅಧ್ಯಕ್ಷರಾಗಿದ್ದು, ಇಬ್ಬರು ವಕೀಲರು ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರ ಇಂತಹ ಮೂಲ ಸಮಸ್ಯೆಗಳನ್ನು ರಾಜಿ ಸಂಧಾನದ ಮೂಲಕವಾಗಿ ತ್ವರಿತವಾಗಿ ಇತ್ಯರ್ಥಪಡಿಸಲಾಗುವುದು ಎಂದು ಹೇಳಿದರು. ಸಾರ್ವಜನಿಕರ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಅರ್ಜಿ ಸಲ್ಲಿಸುವಾಗ ಅರ್ಜಿದಾರರ ಸಂಪೂರ್ಣವಾದ ವಿವಿರ ಮತ್ತು ಸಂಬಂಧಪಟ್ಟ ಇಲಾಖೆಯವರ ಮಾಹಿತಿಯನ್ನು ನೀಡಬೇಕೆಂದು ಹೇಳಿದರು.

ಖಾಯಂ ಜನತಾ ನ್ಯಾಯಾಲಯಲಯದಲ್ಲಿ ಮೊದಲು ಪ್ರಕರಣವನ್ನು ರಾಜಿ ಸಂಧಾನದ ಮೂಲಕ ಬಗೆಹರಿಸಲು ಪ್ರಯತ್ನಿಸಲಾಗುವುದು ಒಂದು ವೇಳೆ ರಾಜಿ ಸಂದಾನವಾಗದಿದ್ದರೆ ಪ್ರಕರಣದ ಅಂತಿಮ ತೀರ್ಪು ಪ್ರಕಟಿಸಿ ಅವಾರ್ಡ ಮಾಡಲಾಗುತ್ತದೆ. ಖಾಯಂ ಜನತಾ ನ್ಯಾಯಲಯ ನೀಡಿದಷ್ಟೆ ಪರಿಣಾಮಕಾರಿಯಾಗಿರುತ್ತದೆ.

ಖಾಯಂ ಜನತಾ ನ್ಯಾಯಾಲಯದ ನೀಡಿದ ತೀರ್ಪು ಅಂತಿಮವಾಗಿದ್ದು ಇದನ್ನು ಪ್ರಶ್ನಿಸಲು ಮತ್ತು ಅಪೀಲು ಮಾಡುವಂತಿಲ್ಲಾ ಆದರೆ ಉಚ್ಚನ್ಯಾಲಯದಲ್ಲಿ ರಿಟ್ ದಾಖಲಿಸಬಹುದು ಎಂದರು.

ಇದೆ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾದೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆಯವರು ಉಪಸ್ಥಿತರಿದ್ದರು.

# ಔರಾದ್ ತಾಪಂ ಇಒ ಘಾಟೆಗೆ ಪ್ರಶಂಸೆ ಪತ್ರ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಅ.2:ತಾಲೂಕು ಪಂಚಾಯತಿ ಇಒ ಶಿವಕುಮಾರ ಘಾಟೆ ಅವರು ವಿವಿಧ ಇಲಾಖೆಯ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನ ಮಾಡಿದ ಕಾರಣ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಪ್ರಶಂಸೆ ಪತ್ರ ನೀಡಿ ಗೌರವಿಸಿದ್ದಾರೆ. ಶುಕ್ರವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸಚಿವ ಈಶ್ವರ ಖಂಡ್ರೆ ಅವರು ಕೇಂದ್ರ ಸರಕಾರದ ನೀತಿ ಆಯೋಗದ ಸಂಪೂರ್ಣತಾ ಅಭಿಯಾನದ ಅಡಿಯಲ್ಲಿ, ಒಂದು ವರ್ಷದ ಅವಧಿಯಲ್ಲಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಅನೇಕ ಯೋಜನೆಗಳನ್ನು ಹಮ್ಮಿಕೊಂಡಿರುವದನ್ನು ಪರಿಶೀಲಿಸಿ ನಿಗದಿತ ಗುರಿ ತಲುಪಿದ ಇಒ ಘಾಟೆ ಕೆಲಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಪ್ರಮುಖವಾಗಿ ಕೃಷಿ, ಶಿಕ್ಷಣ, ಆರೋಗ್ಯ, ಮತ್ತು ಮೂಲಸೌಕರ್ಯ ಅಭಿವೃದ್ಧಿಯ ಮೇಲೆ ಕೇಂದ್ರೀಕೃತವಾಗಿವೆ. ಕೃಷಿಯನ್ನು ಉತ್ತೇಜಿಸುವುದು, ಗ್ರಾಮ ಶೇಖರಣಾ ಯೋಜನೆ, ಮತ್ತು ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುವ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಡಿಜಿಟಲ್ ಶಿಕ್ಷಣವನ್ನು ಉತ್ತೇಜಿಸುವುದು, ಶಾಲಾ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಮತ್ತು ಶಿಕ್ಷಕರ ತರಬೇತಿಗೆ ಒತ್ತು ನೀಡುವುದು. ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವುದು, ಆರೋಗ್ಯಸೇವೆಗಳನ್ನು ಸುಲಭವಾಗಿ ಲಭ್ಯವಾಗುವಂತೆ ಮಾಡುವುದು ಮತ್ತು ರೋಗ ತಡೆಗಟ್ಟುವಿಕೆ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದು. ರಸ್ತೆ, ನೀರಾವರಿ ಮತ್ತು ವಿದ್ಯುತ್ ಸೌಲಭ್ಯಗಳನ್ನು ಒದಗಿಸುವುದು, ಗ್ರಾಮೀಣ ಪ್ರದೇಶಗಳಲ್ಲಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಇದರ ಮೂಲ ಉದ್ದೇಶವಾಗಿದೆ ಎಂದರು.

ಅಧಿಕಾರಿಗಳು ಸರಿಯಾಗಿ ಸೇವೆ ಸಲ್ಲಿಸಬೇಕು. ಅಂತಹ ಅಧಿಕಾರಿಗಳಿಗೆ ನಾವುಗಳು ಗೌರವಿಸುತ್ತೇವೆ ಎಂದರು. ಪೌರಾಡಳಿತ ಸಚಿವ ರಹೀಂ ಖಾನ್, ಶಾಸಕರಾದ ಸಿದ್ದು ಪಾಟೀಲ, ಡಾ ಶೈಲೇಂದ್ರ ಬೆಲ್ದಾಳೆ, ಶರಣು ಸಲಗಾರ, ಎಂಎಲ್ಸಿಗಳಾದ ಭೀಮರಾವ ಪಾಟೀಲ್, ಎಂ. ಜಿ ಮೂಳೆ, ಚಂದ್ರಶೇಖರ್ ಪಾಟೀಲ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಜಿಲ್ಲಾ ಪಂಚಾಯತ ಆಡಳಿತಾಧಿಕಾರಿಗಳಾದ ಡಿ.ರಂದೀಪ್ , ಡಿಸಿ ಶಿಲ್ಪಾ ಶರ್ಮಾ, ಜಿಪಂ ಸಿಇಒ ಡಾ.ಗಿರೀಶ ಬಡೋಲೆ, ಎಸ್ಪಿ ಪ್ರದೀಪ ಗುಂಟೆ, ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ್, ಮುಖ್ಯ ಲೆಕ್ಕಾಧಿಕಾರಿ ಶ್ರೀಕಾಂತ, ಮುಖ್ಯ ಯೋಜನಾಧಿಕಾರಿ ಕಿಶೋರಕುಮಾರ ದುಬೆ ಸೇರಿದಂತೆ ಅನೇಕರಿದ್ದರು.

# ಸಮರ್ಪಕ ರಸಗೊಬ್ಬರ ಪೂರೈಕೆ ಮಾಡದ ರಾಜ್ಯ ಸರ್ಕಾರದ ನಡೆ ಖಂಡಿಸಿ ಜೆಡಿಸ್ ಪ್ರತಿಭಟನೆ



**ರಾಜ್ಯ ಸರ್ಕಾರ ಕೇಳಿದ್ದಕ್ಕಿಂತ ಹೆಚ್ಚಿಗೆ ಕೊಟ್ಟಾರಲ್ರಿ**

ಕಾಳಸಂತೆಕೋರರು ಸಾಕಷ್ಟು ಪ್ರಮಾಣದಲ್ಲಿ ಶೇಖರಣೆ ಮಾಡಿ ವಿತರಿಸದೇ ಇರುವುದರಿಂದ ರೈತರು ಪರದಾಡುತ್ತಿದ್ದಾರೆ. ಈ ರಸ ಗೊಬ್ಬರಗಳು ಕಾಳಸಂತೆಯಲ್ಲಿ ವರ್ತಕರು ಮನಸ ಇಚ್ಛಾ ಬಂದ ಧರದಲ್ಲಿ ಮಾರಾಟ ಮಾಡುತ್ತಿದ್ದಾರೆ. ರಾಜ್ಯ ರಾಜ್ಯಕ್ಕೆ ಕೊರತೆ ಇರುವ ರಸ ಗೊಬ್ಬರಗಳನ್ನು ಕೇಂದ್ರ ಸರ್ಕಾರದೊಂದಿಗೆ ವ್ಯವಹರಿಸಿ ಸಂಪರ್ಕಿಸಿ ಪಡೆಯಲು ವಿಫಲವಾಗಿದೆ. ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ 6.31000 ಮೆಟ್ರಿಕ ಟನ್ ರಸ ಗೊಬ್ಬರ ಬೇಡಿಕೆ ಇಟ್ಟಿರುತ್ತಾರೆ. ಆದರೂ ಕೇಂದ್ರ ಸರ್ಕಾರ ನಿರೀಕ್ಷೆಗೆ ಮೀರಿ 8.73000 ಮೆಟ್ರಿಕ ಟನ್ ರಸಗೊಬ್ಬರ ಪೂರೈಸಿದ್ದಾರೆ. ಈ ಪೈಕಿ ಕೇವಲ 5.27 ಲಕ್ಷ ಟನ್ ರಸ ಗೊಬ್ಬರ ನೀಡಿರುವುದಾಗಿ ರಾಜ್ಯ ಸರ್ಕಾರ ಆಪಾದನೆ ಮಾಡುತ್ತಿದೆ. ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದತ್ತ ಕೈಮಾಡಿ ತೋರಿಸಿ ರಾಜ್ಯದ ರೈತರನ್ನು ಸಂಕಷ್ಟಕ್ಕೆ ಸಿಲುಕಿಸಿದೆ.

–ಸುಭಾಶ್ಚಂದ್ರ ಕಟಕಟಿ ಜೆಡಿಎಸ್ ಜಿಲ್ಲಾಧ್ಯಕ್ಷರು, ಯಾದಗಿರಿ

ಯಾದಗಿರಿ :ಅ.2: ಸಮರ್ಪಕ ರಸಗೊಬ್ಬರ ಪೂರೈಕೆ ಮಾಡದ ರಾಜ್ಯ ಸರ್ಕಾರದ ನಡೆ ಖಂಡಿಸಿ ಯಾದಗಿರಿಯಲ್ಲಿ ಜೆಡಿಎಸ್ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಇದೇ ವೇಳೆ ಮಾತನಾಡಿದ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ರಾಜ್ಯದಲ್ಲಿ ಕಳೆದ 2 ವರ್ಷಗಳಿಂದ ಅಧಿಕಾರ ನಡೆಸುತ್ತಿರುವ ಕಾಂಗ್ರೇಸ್ ಸರ್ಕಾರ ರಾಜ್ಯದ ರೈತರ ಸಮಸ್ಯೆಗೆ ಮತ್ತು ಮಳೆ ಹಾನಿ ಹಾಗೂ ನೆರೆ ಹಾವಳಿಯಿಂದ ಹಾಗೂ ಮಳೆ ಕೊರತೆಯಿಂದ ಭಾಧೀತವಾದ ರೈತರ ಮತ್ತು ನೊಂದ ಸಂತ್ರಸ್ಥರಿಗೆ ಪರಿಹಾರ ನೀಡುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲಾಗಿದೆ ಎಂದು ಆಕ್ರೋಶವ್ಯಕ್ತಪಡಿಸಿದರು.

ಕಳೆದ 2 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಕಾಂಗ್ರೇಸ್ ಸರ್ಕಾರ ಲಂಚಗುಳಿತನ, ದುರಾಡಳಿತ ಮತ್ತು ವೈಫಲ್ಯತೆಯಿಂದ ರಾಜ್ಯದ ಜನತೆ ಆಕ್ರೋಶದಿಂದ ಬೇಸತ್ತು ಬಸವಳಿದಿದ್ದಾರೆ. ರಾಜ್ಯದಲ್ಲಿ ಪೂರ್ವ ಮುಂಗಾರು ಮತ್ತು ಮುಂಗಾರುನಲ್ಲಿ ಉತ್ತಮ ಮಳೆಯಾಗಿದ್ದು, ರಾಜ್ಯದ ರೈತರು ತಮ್ಮ ಬಹುತೇಕ ಕೃಷಿ ವಿಸ್ತೀರ್ಣದಲ್ಲಿ ಕೃಷಿ ಚಟುವಟಿಕೆ ಪ್ರಾರಂಭಿಸಿ ಬಿತ್ತನೆಯಲ್ಲಿ ತೆ–ಊಡಗಿದ್ದಾರೆ ಹಾಗೂ ರಾಜ್ಯದಲ್ಲಿ ಬಹುತೇಕ ಜಲಾಶಯಗಳು ಹಾಗೂ ಕೆರೆ ಕಟ್ಟೆಗಳು ಭರ್ತಿಗೊಂಡಿದ್ದು, ನೀರಾವರಿ ಅಚ್ಚುಕಟ್ಟಿನಲ್ಲಿ ರೈತರು ಸಾಗುವಳಿ ಪ್ರಾರಂಭಿಸಿದ್ದಾರೆ. ಆದರೆ, ರಾಜ್ಯ ಸರ್ಕಾರ ರೈತರಿಗೆ ಅಗತ್ಯವಿರುವ ರಸ ಗೊಬ್ಬರವನ್ನು ಪೂರೈಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಅಸಮಾಧಾನವ್ಯಕ್ತಪಡಿಸದರು.

ಮಳೆ ಮತ್ತು ನೆರೆ ಹಾವಳಿಯಿಂದ ಫಸಲು ನಷ್ಟಕ್ಕೆ ಮತ್ತು ಮಳೆ ಅಭಾವದಿಂದ ಹಾಳಾದ ಬೆಳೆ ನಷ್ಟಕ್ಕೆ ಸಂಬಂಧಿಸಿದ ಫಸಲು ವಿಮಾ ಕಂಪನಿಗಳಿಂದ ರೈತರಿಗೆ ಪರಿಹಾರ ನೀಡಲು ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ಈ ಎಲ್ಲಾ ವೈಫಲ್ಯಗಳಿಂದ ರಾಜ್ಯದಲ್ಲಿರುವ ಕಾಂಗ್ರೇಸ್ ಸರ್ಕಾರ ಆಡಳಿತ ನಡೆಸಲು ನೈತಿಕವಾಗಿ ಅಧಿಕಾರ ಕಳೆದುಕೊಂಡಿದೆ. ಗೌರವಾನ್ವಿತ ರಾಜ್ಯಪಾಲರು, ರಾಜ್ಯ ಸರ್ಕಾರಕ್ಕೆ ಸೂಕ್ತ ನಿರ್ದೇಶನವಿತ್ತು ಎಚ್ಚರಿಕೆ ನೀಡಿ, ರೈತರ ಸಮಸ್ಯೆ ಹಾಗೂ ನೆರೆ ಹಾವಳಿಯಿಂದ ನೊಂದ ಸಂತ್ರಸ್ತರಿಗೆ ಹಾಗೂ ಮಳೆ ಅಭಾವದಿಂದ ಫಸಲನ್ನು ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಬೇಕೆಂದು ಮನವಿ ಮಾಡಿದರು.

ಒಂದು ವೇಳೆ ರಾಜ್ಯ ಸರ್ಕಾರ ಸಂವಿಧಾನ ರೀತಿ ಕಾರ್ಯನಿರ್ವಹಿಸದಿದ್ದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳುತ್ತೇವೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಚನ್ನಪ್ಪಗೌಡ ಮೊಸಂಬಿ, ನವಾಜರೆಡ್ಡಿ ಚಪೆಟ್ಲಾ, ರಾಮಣ್ಣ ಕೋಟಗೇರಾ, ಬಸವರಾಜಪ್ಪಗೌಡ ಗೊಂದಡಗಿ, ಬಸವರಾಜ ಕಣೇಕಲ್, ಈಶಪ್ಪರಾಖಾ, ರಾಜೇಶ ಉಡುಪಿ ಸೈದಾಪೂರ, ದೇವಿಂದ್ರಪ್ಪ ಸುರಪೂರ, ಶಿವು ಮೊಟಗಿ ಶಹಾಪೂರ, ಶಿವಣ್ಣ ಸುರಪೂರ, ವಿಶ್ವನಾಥ ಶಿರವಾಳ, ಬಂದಪ್ಪ ಅರಳಿ, ನರಸಪ್ಪ ಕವಡೆ, ಶರಣು ಆವಂಟಿ, ಪ್ರಕಾಶ ನೀರಟ್ಟಿ, ಬಸ್ಸಣ್ಣ ದೇವರಹಳ್ಳಿ, ರವಿ ಪಾಟೀಲ್ ಗುರುಮಿಠಕಲ್, ಮಲ್ಲಣ್ಣಗೌಡ ಕೌಳೂರು, ಬಸ್ಸುಗೌಡ ಚಾಮನಹಳ್ಳಿ, ಬಸರಡ್ಡಿ ಹೆಗ್ಗಣಗೇರಾ ಚಂದ್ರಾಯಗೌಡ

ಹತ್ತಿಕುಣಿ, ಶರಣಗೌಡ ಚಾಮನಹಳ್ಳಿ, ರವಿ ಪಾಟೀಲ್ ಹತ್ತಿಕುಣಿ,

ಮಲ್ಲಿಕಾರ್ಜುನ ಅರುಣಿ, ಈಶ್ವರ ನಾಯಕ, ಜಯೇಂದ್ರ ಚವ್ಹಾಣ, ಪರಮರೆಡ್ಡಿ ಕಂದಕೂರ, ದೊಡ್ಡಣ್ಣಗೌಡ ಅರಕೇರಾ (ಬಿ), ಮಾರ್ತಂಡ ಮಾನೇಗಾರ, ನಿಂಗಾರೆಡ್ಡಿ ಯಡ್ಡಳ್ಳಿ, ತಾಯಪ್ಪ ಬದ್ದೇಪಲ್ಲಿ, ಅನಂತಪ್ಪ ಮುಕಡಿ, ಶರಣು ಗಾಡಿ ಮೊಟ್ನಳ್ಳಿ, ಲಕ್ಷ್ಮಣನಾಯಕ ಕುಡ್ಲೂರ, ಅಲ್ಲಾವುದ್ದೀನ್ ನೀಲಹಳ್ಳಿ ಸೇರಿದಂತೆ ಇತರರಿದ್ದರು.

# ಮಾವಾ ಮಾರಾಟ: 30 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.2–ಜಿಲ್ಲೆಯಲ್ಲಿ ಮಾವಾ ಮಾರಾಟ ಮಾಡುತ್ತಿದ್ದ 30 ಜನರನ್ನು ಬಂಧಿಸಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಸಿದ್ಧಾರ್ಥ ಗೋಯಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಗಲಕೋಟೆ ಹಾಗೂ ಜಮಖಂಡಿ ಡಿಎಸ್‌ಪಿ ಅವರುಗಳ ನೇತೃತ್ವದಲ್ಲಿ ವಿಶೇಷ ತಂಡ ರಚಿಸಿ ಮಾವಾ ತಯಾರಿಸುವ ಘಟಕಗಳ ಮೇಲೆ ದಾಳಿ ನಡೆಸಲಾಗಿದ್ದು, ಮಾರಾಟ ಮಾಡುವವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಬಾಗಲಕೋಟೆ ಉಪವಿಭಾಗದಲ್ಲಿ ಮಾವಾ ಮಾರಾಟ ಮಾಡುವವರ ವಿರುದ್ಧ 15 ಪ್ರಕರಣಗಳು ಹಾಗೂ ಜಮಖಂಡಿ ಉಪವಿಭಾಗದಲ್ಲಿ 14 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದು, ಕಳೆದ 15 ದಿನಗಳಲ್ಲಿ ಒಟ್ಟು 29 ಪ್ರಕರಣಗಳು ದಾಖಲಿಸಿ 30 ಜನರನ್ನು ಪೋಲಿಸರು ಬಂಧಿಸಿದ್ದಾರೆ ಎಂದು ತಿಳಿಸಲಾಗಿದೆ.

# ಸಹಜ ಕೃಷಿಗೆ ರೈತರು ಮುಂದಾಗಬೇಕು: ಶೋಭಾ ಕರಂದ್ಲಾಜೆ

ಮಲ್ಲಮ್ಮ ನುಡಿ ವಾರ್ತೆ




ಬೆಂಗಳೂರು:ಅ.2:ಪ್ರಧಾನಮಂತ್ರಿ ನರೇಂದ್ರಮೋದಿ ನೇತೃತ್ವದ ಸರ್ಕಾರವು ಅತಿ ಸಣ್ಣ ಮತ್ತು ಸಣ್ಣ ರೈತರು ಕೃಷಿಯಲ್ಲಿ ತೊಡಗಿಸಿಕೊಳ್ಳಲು ನೆರವಾಗಲು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ಜಾರಿಗೆ ತಂದರು. ಪ್ರತಿವರ್ಷ ಯೋಜನೆಯಡಿ ಆರು ಸಾವಿರ ರೂಪಾಯಿಗಳನ್ನು ನೀಡಲಾಗುತ್ತಿದೆ. ಇದರಿಂದ ರೈತರು ಬಿತ್ತನೆ ಬೀಜ ಖರೀದಿಸಲು ಹಾಗು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳಲು ಸಹಕಾರಿಯಾಗಿದೆ ಎಂದು ಅತೀ ಸಣ್ಣ, ಸಣ್ಣ, ಮತ್ತು ಮಧ್ಯಮ ಉದ್ಯಮಗಳ (ಎಂ ಎಸ್ ಎಂ ಇ) ಹಾಗು ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಅವರು ತಿಳಿಸಿದರು. ಇಂದು ಬೆಂಗಳೂರಿನ ಐ.ಸಿ.ಎ.ಆರ್. ನ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಶಾಖೆಯಲ್ಲಿ ಆಯೋಜಿಸಿದ್ದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ – 20ನೇ ಕಂತು ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿ, ಕಳೆದ ಒಂದು ದಶಕದಲ್ಲಿ ರೈತರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಕೃಷಿಕರಿಗೆ ಅಗತ್ಯವಿರುವ ಸಂಶೋಧನೆ ಹಾಗು ಅನ್ವೇಷಣೆಗೆ ಒತ್ತು ನೀಡಲಾಗಿದೆ. ದೇಶಾದ್ಯಂತ ಎಲ್ಲರಿಗೂ ಕೃಷಿ ಉಪಕರಣಗಳನ್ನು ಒದಗಿಸಲು ಕೃಷಿ ಉಪಕರಣ ಬ್ಯಾಂಕುಗಳನ್ನು ಸ್ಥಾಪಿಸಲಾಗಿದ್ದು ಇದರಿಂದ ಸಣ್ಣ ಹಾಗು ಅತಿ ಸಣ್ಣ ಇಡುವಳಿದಾರರಿಗೆ ಸಹಕಾರಿಯಾಗಿದೆ ಎಂದು ತಿಳಿಸಿದರು. ರೈತರು ತಾವು ಬೆಳೆದ ಬೆಳೆಗಳನ್ನು ಕೃಷಿ ಉತ್ಪನ್ನಗಳನ್ನಾಗಿ ಮೌಲ್ಯವರ್ಧಿತಗೊಳಿಸಬೇಕು. ಇದರಿಂದ ರೈತರು ಹೆಚ್ಚಿನ ಲಾಭಗಳಿಸಬಹುದು. ಆರ್ಥಿಕವಾಗಿ ಸಫಲರಾಗಲು ಸಾಧ್ಯ ಎಂದು ಹೇಳಿದರು. ಕೃಷಿಕರಿಗೆ ಹೆಚ್ಚಿನ ತಂತ್ರಜ್ಞಾನ ಹಾಗು ಸೌಲಭ್ಯಗಳನ್ನು ನೀಡಿದಾಗ ಮಾತ್ರ ರೈತರು ಮತ್ತಷ್ಟು ಅಭ್ಯುದಯ ಹೊಂದಲು ಸಾಧ್ಯ. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರಮೋದಿ ನೇತೃತ್ವದ ಸರ್ಕಾರ ಕೆಲಸ ಮಾಡುತ್ತಿದೆ. ರೈತರು ಸಹಜ ಹಾಗು ಪರಂಪರೆಯ ಕೃಷಿಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು. ಕೃಷಿ ವಿಜ್ಞಾನ ಕೇಂದ್ರ ಹಾಗು ಕೃಷಿ ಆಧಾರಿತ ಸಂಶೋಧನಾ ಸಂಸ್ಥೆಗಳಿಗೆ ರೈತರು ಭೇಟಿ ನೀಡಿ ಹೊಸ ತಳಿಗಳು, ನೂತನ ತಂತ್ರಜ್ಞಾನದ ಕುರಿತು ಮಾಹಿತಿ ಪಡೆದುಕೊಳ್ಳ ಬೇಕು. ಇದರಿಂದ ಹೆಚ್ಚಿನ ಲಾಭ ಪಡೆಯಲು ಸಾಧ್ಯ. ರೈತ ಮಿತ್ರ ಕೀಟಗಳನ್ನು ರಕ್ಷಿಸಬೇಕು. ಇದರಿಂದ ಸಹಜ ಕೃಷಿಗೆ ಸಾಧ್ಯವಾಗಲಿದೆ. ಉತ್ತಮ ಅರೋಗ್ಯ ಕಾಪಾಡಿಕೊಳ್ಳಲು ಕೀಟನಾಶಕಗಳನ್ನು ಬಳಸದೆ ಸಹಜ ಕೃಷಿಗೆ ರೈತರು ಮುಂದಾಗ ಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಬುಡಕಟ್ಟು ಉಪಯೋಜನೆಯಡಿ ಜೈವಿಕ ಕೀಟ ನಿಯಂತ್ರಣ ಪರಿಕರಣಗಳನ್ನು ರಾಜ್ಯ ಸಚಿವರಾದ ಸುಶ್ರೀ ಶೋಭಾ ಕರಂದ್ಲಾಜೆ ಅವರು ವಿತರಿಸಿದರು. ಇದಕ್ಕೂ ಮುನ್ನ ಬೆಂಗಳೂರಿನ ಐ.ಸಿ.ಎ.ಆರ್. ನ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಬ್ಯೂರೋದ ಸಂಶೋಧನೆ ಮತ್ತು ಅನ್ವೇಷಣೆಗಳ ಕುರಿತು ವಿಜ್ಞಾನಿಗಳಿಂದ ಮಾಹಿತಿ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ಐ.ಸಿ.ಎ.ಆರ್. ನ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಬ್ಯೂರೋದ ನಿರ್ದೇಶಕರಾದ ಡಾ. ಎಸ್.ಎನ್. ಸುಶೀಲ್ ಸೇರಿದಂತೆ ಸಂಸ್ಥೆಯ ವಿಜ್ಞಾನಿಗಳು ಉಪಸ್ಥಿತರಿದ್ದರು.

# ಫಿಲ್ಟರ್ ನೀರಿನ ಪೈಪ್‌ಲೈನ್ ಕಾಮಗಾರಿ ಪ್ರಗತಿಯಲ್ಲಿ ಶುದ್ಧ ನೀರಿನ ಹೊಸ ಯುಗಕ್ಕೆ "ಕೆಂಭಾವಿ"ಯ ಹೆಜ್ಜೆ.!

ಮಲ್ಲಮ್ಮ ನುಡಿ ವಾರ್ತೆ

ಸುರಪುರ:ತಾಲೂಕಿನ "ಕೆಂಭಾವಿ" ಪಟ್ಟಣದ ನಾಗರಿಕರಿಗೆ ಶುದ್ಧ ಹಾಗೂ ಸುರಕ್ಷಿತ ಕುಡಿಯುವ ನೀರನ್ನು ನಿರಂತರವಾಗಿ ಪೂರೈಕೆ ಮಾಡುವ ಉದ್ದೇಶದಿಂದ, ಫಿಲ್ಟರ್ ನೀರಿನ ಪೈಪ್‌ಲೈನ್ ಕಾಮಗಾರಿ ಆರಂಭಗೊಂಡಿದೆ. ಈ ಯೋಜನೆಯು ಪಟ್ಟಣದ ಮುಖ್ಯ ಅವಶ್ಯಕತೆಗಳನ್ನು ಪೂರೈಸುವ ಮಹತ್ವದ ಹಂತವಾಗಿದ್ದು, ಈಗಾಗಲೇ ಹಲವಾರು ವಾರ್ಡುಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ.

ಈ ಯೋಜನೆಯ ಅಡಿಯಲ್ಲಿ:



ಫಿಲ್ಟರ್ ಘಟಕದಿಂದ ಪೂರೈಕೆ ಕೇಂದ್ರಗಳವರೆಗೆ ಪೈಪ್‌ಲೈನ್ ಅಳವಡಿಸಲಾಗುತ್ತಿದೆ

24x7 ನೀರಿನ ಪೂರೈಕೆ ಗುರಿಯಾಗಿ ಯೋಜನೆಯ ರೂಪರೇಖೆ ಹಾಕಲಾಗಿದೆ ಪಟ್ಟಣ ಪುರಸಭೆ ಅಧ್ಯಕ್ಷರು/ಅಧಿಕಾರಿಗಳು ಪ್ರಕಾರ, "ಇದು ಕೆಂಭಾವಿಗೆ ಬಹುಕಾಲದ ಕನಸುಗಳಾದ ಶುದ್ಧ ನೀರಿನ ತಲುಪಿಗೆ ಒಂದು ಪ್ರಮುಖ ಹಂತ. ನಾಗರಿಕರ ಸಹಕಾರದೊಂದಿಗೆ ಕಾಮಗಾರಿ ಯಶಸ್ವಿಯಾಗಲಿದೆ." ಎಂದು ತಿಳಿಸಿದರು.!

# ಸಾರ್ವಜನಿಕರ ಪ್ರಯಾಣಕ್ಕೆ ತೊಂದರೆಯಾಗದಿರಲಿ: ಜಿಲ್ಲಾಧಿಕಾರಿ ಸುರೇಶ ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಅ.2: ಆಗಸ್ಟ್ 5 ರಿಂದ ಕೆ.ಎಸ್.ಆರ್.ಟಿ ನೌಕರರು ಮುಷ್ಕರವನ್ನು ಕೈಗೊಳ್ಳುತ್ತಿದ್ದು, ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಸಾರ್ವಜನಿಕರ ಪ್ರಾಯಾಣಕ್ಕೆ ಯವುದೇ ರೀತಿಯ ತೊಂದರೆಯಾಗದಂತೆ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಶನಿವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಸಾರಿಗೆ ಇಲಾಖೆ ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗದ ಅಧಿಕಾರಿಗಳು ಮತ್ತು ಖಾಸಗಿ ವಾಹನ ಚಾಲಕರ ಅಸೋಶಿಯೆಷನ್ ಅವರೊಂದಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆಗಸ್ಟ್ 5 ರಿಂದ ಕೆ.ಎಸ್.ಆರ್.ಟಿ ನೌಕರರು ಮುಷ್ಕರಕ್ಕೆ ಹೋಗುವುದಾಗಿ ಹೇಳಿದ್ದು, ಇದಕ್ಕಾಗಿ ಕೆಲವು ಪರ್ಯಾಯ ವ್ಯವಸ್ಥೆಗಳನ್ನು ಮಾಡಿಕೊಳ್ಳುವುದಾಗಿ ಸರ್ಕಾರದ ಕಾರ್ಯದರ್ಶಿಗಳು ನಿರ್ದೇಶನ ನೀಡಿದ್ದಾರೆ. ಪ್ರತಿ ದಿನ ಕೊಪ್ಪಳ ಜಿಲ್ಲೆಯಲ್ಲಿ 1400ಕ್ಕೂ ಟ್ರಿಪ್‌ಗಳಲ್ಲಿ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಸುಮಾರು 320 ಬಸ್‌ಗಳ ಓಡಾಟವಿದ್ದು, ಮುಷ್ಕರದಿಂದಾಗಿ ಸಾರ್ವಜನಿಕರ ಪ್ರಯಾಣದಲ್ಲಿ ವ್ಯತ್ಯಯ ಉಂಟಾಗಬಹುದು. ಇದರ ನಿರ್ವಹಣೆಗಾಗಿ ಸೂಕ್ತ ಸಿದ್ಧತೆಗಳನ್ನು ಕೈಗೊಳ್ಳಬೇಕು. ಕ.ಕ.ಸಾ.ನಿ ಕೊಪ್ಪಳ ವಿಭಾಗದಲ್ಲಿರುವ ಹೊರಗುತ್ತಿಗೆ ನೌಕರರ ಪಟ್ಟಿಯನ್ನು ಸಿದ್ದಪಡಿಸಿ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಮುಷ್ಕರ ಸಂದರ್ಭದಲ್ಲಿ ಹೊರಗುತ್ತಿಗೆ ಸಾರಿಗೆ ನೌಕರರಿಗೆ ಯಾವುದೇ ರೀತಿಯ ರಜೆ ನೀಡುವಂತಿಲ್ಲ. ಅವಶ್ಯವಿದ್ದಲ್ಲಿ ಜಿಲ್ಲೆಯ ಕಾರ್ಖಾನೆಗಳ ಬಸ್‌ಗಳ ಬಳಕೆಗೆ ಕ್ರಮ ವಹಿಸಿ. ಪ್ರಯಾಣಿಕರಿಗಾಗಿ ಎಲ್ಲಾ ಬಸ್ ನಿಲ್ದಾಣಗಳಲ್ಲಿ ವಿಶೇಷ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಬೇಕು ಮತ್ತು ಆರ್.ಟಿ.ಓ ಕಛೇರಿಯಲ್ಲಿ ಸಹಾಯವಾಣಿ ಕೇಂದ್ರವನ್ನು ಆರಂಭಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಹಿಂದೆಯೂ ಕೆ.ಎಸ್.ಆರ್.ಟಿ ನೌಕರರ ಮುಷ್ಕರದ ಸಂದರ್ಭದಲ್ಲಿ ಖಾಸಗಿ ಮ್ಯಾಕ್ಸಿ ಕ್ಯಾಬ್, ಟಂಟಂಗಳು, ಆಟೋಗಳು ಮತ್ತು ಖಾಸಗಿ ಬಸ್‌ಗಳನ್ನು ಬಳಕೆ ಮಾಡಿಕೊಂಡು ಸಾರ್ವಜನಿಕರ ಪ್ರಯಾಣಕ್ಕೆ ತೊಂದರೆಯಾಗದಂತೆ ಕ್ರಮ ವಹಿಸಲಾಗಿತ್ತು. ಅದೇ ರೀತಿಯ ವ್ಯವಸ್ಥೆಗಳನ್ನು ಕೈಗೊಳ್ಳಲು ಸಾರಿಗೆ ಇಲಾಖೆ ಅಧಿಕಾರಿಗಳು ಕ್ರಮ ವಹಿಸಬೇಕು. ಇದಕ್ಕಾಗಿ ಜಿಲ್ಲೆಯ ಖಾಸಗಿ ವಾಹನ ಚಾಲಕರ ಅಸೋಶಿಯೆಷನ್‌ವರು ಸಹಕಾರ ನೀಡಬೇಕು. ಈ ಪರಿಸ್ಥಿತಿಯನ್ನು ಖಾಸಗಿ ವಾಹನ ಚಾಲಕರು ದುರುಪಯೋಗ ಪಡೆಸಿಕೊಂಡು ನಿಯಮಕ್ಕೂ ಮೀರಿ ಹೆಚ್ಚಿನ ಪ್ರಯಾಣ ದರ ಪಡೆಯುವುದು ಮತ್ತು ಪ್ರಯಾಣಿಕರೊಂದಿಗೆ ಅಸಭ್ಯವರ್ತನೆ ಮಾಡುವುದು ಕಂಡುಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಎಲ್ಲರೂ ಸೇರಿ ಈ ಪರಿಸ್ಥಿತಿಯನ್ನು ನಿಭಾಯಿಸಬೇಕು. ಕೊಪ್ಪಳ ಜಿಲ್ಲೆಯಲ್ಲಿ ಯವುದೇ ರೀತಿಯ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಪ್ರತಿಯೊಬ್ಬರೂ ಸಹಕರಿಸಬೇಕು ಎಂದು ಹೇಳಿದರು. ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ ಅವರು ಮಾತನಾಡಿ, ಸಾರಿಗೆ ನೌಕರರ ಮುಷ್ಕರ ಸಂದರ್ಭದಲ್ಲಿ ಸಾರ್ವಜನಿಕರ ಪ್ರಯಾಣಕ್ಕೆ ಯಾವುದೇ ತೊಂದರೆಯಾಗಬಾರದು. ಇದಕ್ಕಾಗಿ ಸ್ಥಳೀಯ ಖಾಸಗಿ ವಾಹನಗಳ ಚಾಲಕರು ಸಹಕಾರ ನೀಡಬೇಕು.

ಕರ್ನಾಟಕ ಸರ್ಕಾರ

**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ**
**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ನಂ: ಇಇ/ಎಂಐಡಿ/ಬೀದರ/ತಾ.ಶಾ–1,2&3/ಟೆಂಡರ್/2025–26/1362 ದಿನಾಂಕ:31.07.2025

**ಕೆಪಿಪಿ–ಪ್ರೋಕ್ಯೂರಮೆಂಟ್ಸ ಟೆಂಡರ್ ಪ್ರಕಟಣೆ ಕರೆ–2**

1) ಕಾಮಗಾರಿಗಳ ವಿವರ. KPP -Portalನಲ್ಲಿ ನಮೂದಿಸಿದಂತೆ. 2) ಕಾಮಗಾರಿಗಳ ಅಂದಾಜು ಮೊತ್ತ. KPP -Portal ನಲ್ಲಿ ನಮೂದಿಸಿದಂತೆ. 3) ಗುತ್ತಿಗೆದಾರರ ಅರ್ಹತೆ ವಿವರ. KPP -Portal ನಲ್ಲಿ ನಮೂದಿಸಿದತೆ, 4) ಕಾಮಗಾರಿಗಳ ಟೆಂಡರ ಮೊತ್ತದ ವಿವರ. KPP -Portal ನಲ್ಲಿ ನಮೂದಿಸಿದಂತೆ, 5) ಟೆಂಡರ್ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ.KPP -Porta lನಲ್ಲಿ ನಮೂದಿಸಿದಂತೆ. 6) ಟೆಂಡರ ಬಗ್ಗೆ ಮಾಹಿತಿ ಹಾಗೂ ಕ್ಲಾರಿಫಿಕೇಶನ್ ಕೊನೆಯ ದಿನಾಂಕ: ಕೆ.ಡಬ್ಲೂ –2 ಮಾತ್ರ 06–08–2025 ರಂದು 17.00 ಗಂಟೆವರೆಗೆ, 7) ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ ಕೆ.ಡಬ್ಲೂ –2 ಮಾತ್ರ08–08–2025 ರಂದು 16.00 ಗಂಟೆ ವರೆಗೆ 8) ಟೆಂಡರ ತಾಂತ್ರಿಕ ಬಿಡ್ ತೆರೆಯುವ ದಿನಾಂಕ. ಕೆ.ಡಬ್ಲೂ –2 ಮಾತ್ರ : 11–08–2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ, 9) ಟೆಂಡರ ಆರ್ಥಿಕ ಬಿಡ್ ತೆರೆಯುವ ದಿನಾಂಕ. ಕೆ.ಡಬ್ಲೂ –2 ಮಾತ್ರ 13–08–2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ, 10) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ. ಕಾರ್ಯನರ್ವಾಹಕ ಇಂಜಿನೀಯರರು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ.ವಿಭಾಗ, ಬೀದರ. ದೂರವಾಣಿ ಸಂ: 08482 232080, 11) ಅಂತರ್ಜಾಲ ತಾಣದ ವಿಳಾಸ.KPP portal https://kppp.karnataka.gov.in

ಸಹಿ/– ಕಾರ್ಯ ನಿರ್ವಾಹಕ ಅಭಿಯಂತರರು,
ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.

ವಾ.ಸಾ.ಸಂ.ಇ/ಬೀದರ/119/ಕೆ.ಎಸ್.ಎಂ.ಸಿ.&ಎ/2025–26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.